ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

KB 12 YEARS 2013

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 52
7-8-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 52

## ಸಾರ್ವಜನಿಕರಿಗೆ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಸಕಾಲಕ್ಕೆ ಉಪಯುಕ್ತವಾಗುವಂತೆ ಬಸ್ ವ್ಯವಸ್ಥೆ ಕಲ್ಪಿಸಿ

### ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಮಿತಿ ಅಧ್ಯಕ್ಷ ಶಾಮನೂರು ಟಿ ಬಸವರಾಜ್

**ದಾವಣಗೆರೆ:** ಜಿಲ್ಲೆಯಲ್ಲಿ ಬಸ್ ಸಂಚಾರ ಇಲ್ಲದೆ ಇರುವ ಗ್ರಾಮ ಹಾಗೂ ಅಗತ್ಯವಿರುವ ಮಾರ್ಗಗಳಿಗೆ ಸಂಚಾರ ವ್ಯವಸ್ಥೆ ಒದಗಿಸಿ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮವಹಿಸಿ ಎಂದು ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಶಾಮನೂರು ಟಿ ಬಸವರಾಜ್ ತಾಕೀತು ಮಾಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿನ ಎಸ್.ಎಸ್.ಮಲ್ಲಿಕಾರ್ಜುನ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚನ್ನಗಿರಿ ತಾಲ್ಲೂಕಿನ ಅಮ್ಮನಗುಡ್ಡ, ಕೆರೆಬಿಳಚಿ, ಹೊಸೂರು ಹೀಗೆ ಹಲವಾರು ಕಡೆ ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್ ಸಂಚಾರ ಇಲ್ಲದೇ ಇರುವ ಗ್ರಾಮಗಳನ್ನು ಗುರುತಿಸಿ ಬಸ್ ಸಂಚರಿಸಲು ಸಾಧ್ಯವಿರುವ



ಎಲ್ಲಾ ಗ್ರಾಮಗಳಿಗೆ ಸರಿಯಾದ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಿದಲ್ಲಿ ಆಯಾ ಗ್ರಾಮದ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದರು. ಇದ-ಕ್ಕೆ ಪ್ರತಿಕ್ರಿಯಿಸಿದ ವಿಭಾಗೀಯ ನಿಯಂತ್ರಣಾಧಿಕಾರಿ, ಬಸ್‌ಗಳ ಕೊರತೆ ಇದೆ. ಆದ್ದರಿಂದ 51 ಬಸ್ ಅವಶ್ಯಕತೆ ಇದೆ ಎಂದು ಕೇಂದ್ರ ಕಚೇರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೂ ಇರುವ ಸಂಪನ್ಮೂಲ ಬಳಸಿಕೊಂಡು ಶಕ್ತಿ ಯೋಜನೆ ಆರಂಭವಾದಾಗಿನಿಂದ ಶೇ.90ರಷ್ಟು ಸಮಸ್ಯೆಗಳನ್ನು ಪರಿಗಣಿಸಿ ಪರಿಹರಿಸಲಾಗಿದೆ. ಅಗತ್ಯವಿರುವ ಮಾರ್ಗಗಳನ್ನು ಗುರುತಿಸಿ ಸಂಚಾರ ವ್ಯವಸ್ಥೆಗೆ ಕ್ರಮವಹಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಿದ ನ್ಯಾಯಬೆಲೆ ಅಂಗಡಿಗಳಲ್ಲಿನ ಪಡಿತರ ವಿತರಣೆ ವೇಳೆ ತೂಕ ವ್ಯತ್ಯಾಸ, ಎಲೆಕ್ಟ್ರಾನಿಕ್ ವೈಟ್ ಮಷಿನ್ ಸರ್ಟಿಫೈ, ನಗರ ಮತ್ತು ಅಗತ್ಯವಿರುವ ವಿವಿದ ಗ್ರಾಮ, ಬಸ್ ಕೊರೆತ ಇರುವ ಮಾರ್ಗಗಳಿಗೆ ಬಸ್ ಸಂಚಾರ ಕಲ್ಪಿಸುವುದು ಸೇರಿದಂತೆ ಪಂಚಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಮಾತನಾಡಿ, ಜಿಲ್ಲೆಯ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ವಿತರಣೆ ವೇಳೆ ತೂಕ ಕಡಿಮೆ ಮಾಡಿ ವಿತರಣೆ ಮಾಡುವುದು ಕಂಡುಬಂದಲ್ಲಿ ನೇರವಾಗಿ ಇಲಾಖೆಗೆ ಮಾಹಿತಿ ನೀಡಿ. ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮವಹಿಸಲಾಗುವುದು. ತೂಕದ ಯಂತ್ರದ ಕುರಿತು ಸಾಕಷ್ಟು ದೂರುಗಳು ಕೇಳಿ ಬರುತಿದ್ದು, ಮುಂದಿನ ಸಭೆಯಲ್ಲಿ ವೇ ಮಷಿನ್ ಸರ್ಟಿಫೈ ಮಾಡುವ ಅಧಿಕಾರಿಗಳನ್ನು ಕರೆದು ಸೂಕ್ತ ಮಾಹಿತಿ ಪಡೆದುಕೊಳ್ಳುವ ವ್ಯವಸ್ಥೆ ಮಾಡಲಾಗುವುದು ಎಂದರು. ಅಧಿಕಾರಿಗಳು ಸಹ ಈ ಕುರಿತು ಹೆಚ್ಚಿನ ಜಾಗೃತಿ ವಹಿಸಬೇಕು ಎಂದ ಅವರು. ಬಸ್ ಕೊರತೆ ಇರುವ ಮಾರ್ಗಗಳನ್ನು ಗುರುತಿಸಿ, ಇರುವ ಸಂಪನ್ಮೂಲವನ್ನೇ ಬಳಸಿಕೊಂಡು ಬಸ್ ಸಂಚಾರ ಸಾಧ್ಯತೆ ಇರುವೆಡೆ, ಅಗತ್ಯತೆಗೆ ಅನುಗುಣವಾಗಿ ಸಂಚಾರ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿಯ ಮುಂದಿನ ಸಭೆಯನ್ನು ಗ್ರಾಮ ಪಂಚಾಯತ್ ಮಟ್ಟದಲ್ಲಿ ಆಯೋಜನೆ ಮಾಡಿ, ಮತ್ತಷ್ಟು ಜಾಗೃತಿ ಮೂಡಿಸಬೇಕು. ಈ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳನ್ನು ತಲುಪಿಸುವ ಮೂಲಕ ಮಾದರಿ ಜಿಲ್ಲೆಯನ್ನಾಗಿಸಬೇಕು ಎಂದರು.

## ಬಾಗಲಕೋಟೆ: ವಿದ್ಯಾಭ್ಯಾಸ ಮುಂದುವರಿಸಲು ಕ್ರಿಕೆಟಿಗ ರಿಷಭ್ ಪಂತ್ ಆರ್ಥಿಕ ಸಹಾಯ; ಕೃತಜ್ಞತೆ ಸಲ್ಲಿಸಿದ ವಿದ್ಯಾರ್ಥಿನಿ




**ಬಾಗಲಕೋಟೆ:** ಟೀಂ ಇಂಡಿಯಾದ ಕ್ರಿಕೆಟಿಗ ರಿಷಭ್ ಪಂತ್ ಇತ್ತೀಚೆಗಷ್ಟೇ ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿನ ಉತ್ತಮ ಪ್ರದರ್ಶನಕ್ಕಾಗಿ ಮೆಚ್ಚುಗೆ ಪಡೆದಿದ್ದಾರೆ. ಈ ಬೆನ್ನಲ್ಲೇ ಅವರೀಗ ಮತ್ತೊಂದು ಉತ್ತಮ ಕಾರ್ಯ ಮಾಡಿರುವುದು ಬೆಳಕಿಗೆ ಬಂದಿದೆ. ಪಂತ್ ಅವರಿಂದ ಆರ್ಥಿಕ ನೆರವು ಪಡೆದಿದ್ದರಿಂದಲೇ ಜಮಖಂಡಿ ಪಟ್ಟಣದ ಖಾಸಗಿ ಕಾಲೇಜಿನಲ್ಲಿ ಬಿಸಿಎ ಓದಲು ಸಾಧ್ಯವಾಗಿದೆ ಎಂದು ಜ್ಯೋತಿ ಕಣಬೂರಮಠ ಹರ್ಷಗೊಂಡಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ರಬಕವಿ ಗ್ರಾಮದ ನಿವಾಸಿ ಜ್ಯೋತಿ, ಪಿಯುನಲ್ಲಿ ಶೇ 83 ರಷ್ಟು ಅಂಕಗಳನ್ನು ಪಡೆದಿದ್ದರೂ, ತನ್ನ ವ್ಯಾಸಂಗವನ್ನು ಮುಂದುವರಿಸಲು ಹಣದ ಕೊರತೆ ಎದುರಿಸುತ್ತಿದ್ದರು. ಜ್ಯೋತಿ ತಂದೆ ತೀರ್ಥಯ್ಯ ಹಳ್ಳಿಯಲ್ಲಿ ಸಣ್ಣ ಚಹಾ ಅಂಗಡಿ ನಡೆಸುತ್ತಿದ್ದು, ಅದರಿಂದ ಕಾಲೇಜು ಶುಲ್ಕವನ್ನು ಭರಿಸುವುದು ಅಸಾಧ್ಯವಾಗಿತ್ತು.

ಆಕೆಯ ಬಲವಾದ ಇಚ್ಛಾಶಕ್ತಿ ಮತ್ತು ತನ್ನ ವ್ಯಾಸಂಗವನ್ನು ಮುಂದುವರಿಸುವ ತುರ್ತು ಅನಿಲ್ ಹುಣಶಿಕಟ್ಟಿ ಎಂಬ ಸ್ಥಳೀಯ ಗುತ್ತಿಗೆದಾರರನ್ನು ಸಂಪರ್ಕಿಸಲು ಕಾರಣವಾಯಿತು. ಕಾಲೇಜಿನ ಆಡಳಿತ ಮಂಡಳಿಯಲ್ಲಿ ಆತನ ಸಂಬಂಧಿಕರು ಕೆಲಸ ಮಾಡುತ್ತಿದ್ದರಿಂದ ಬೆಂಬಲ ಅಥವಾ ಪ್ರವೇಶ ಪಡೆಯಲು ಅವರು ಸಹಾಯ ಮಾಡಬಹುದೆಂದು ಆಕೆ ಆಶಿಸಿದ್ದಳು.

ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ಆಗ ನನಗೆ ಖ್ಯಾತ ಕ್ರಿಕೆಟಿಗ ರಿಷಭ್ ಪಂತ್ ಅವರಿಂದ ಸಹಾಯ ಪಡೆಯುವ ಆಲೋಚನೆ ಹುಟ್ಟಿಕೊಂಡಿತು. ನನ್ನ ಸಹಪಾಠಿಗಳಲ್ಲಿ ಒಬ್ಬರು ಪಂತ್ ಅವರ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದಾರೆ.

## ಸರ್ಕಾರಿ ಆಸ್ಪತ್ರೆಗಳಲ್ಲಿ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವ ಕ್ರಮ ಸಮರ್ಥಿಸಿ ನಡ್ಡಾಗೆ ದಿನೇಶ್ ಗುಂಡೂರಾವ್ ಪತ್ರ

**ಬೆಂಗಳೂರು:** ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ಕರ್ನಾಟಕ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಮರ್ಥಿಸಿಕೊಂಡಿದ್ದು, ರೋಗಿಗಳಿಗೆ ಅಗತ್ಯ ಔಷಧಿಗಳ ಉಚಿತ ಮತ್ತು ಖಚಿತ ಪೂರೈಕೆಯನ್ನು ಖಾತ್ರಿಪಡಿಸಿಕೊಳ್ಳಲು ಮತ್ತು ಅವರ ಜೇಬಿನಿಂದ ಹೊರಹೋಗುವ ವೆಚ್ಚವನ್ನು ಕಡಿಮೆ ಮಾಡಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಕರ್ನಾಟಕದ ಸರ್ಕಾರಿ ಆಸ್ಪತ್ರೆಗಳೊಳಗಿನ ಜನೌಷಧಿ ಕೇಂದ್ರಗಳನ್ನು ಮುಚ್ಚುವ ಬಗ್ಗೆ ಕೇಂದ್ರ ಆರೋಗ್ಯ ಸಚಿವ ಜಗತ್ ಪ್ರಕಾಶ್ ನಡ್ಡಾ ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಪತ್ರದಲ್ಲಿ ವ್ಯಕ್ತಪಡಿಸಿದ ಕಳವಳಗಳಿಗೆ ಪ್ರತಿಕ್ರಿಯೆಯಾಗಿ ದಿನೇಶ್ ಗುಂಡೂ ರಾವ್ ಈ ಸ್ಪಷ್ಟನೆ ನೀಡಿ-ದ್ದಾರೆ.

ಆಗಸ್ಟ್ 5 ರಂದು ನಡ್ಡಾ ಅವರಿಗೆ ಬರೆದ ಪತ್ರದಲ್ಲಿ, ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಅಗತ್ಯ ಔಷಧಿಗಳ ಪಟ್ಟಿಯಲ್ಲಿ (ಇಎಂಎಲ್) ಪಟ್ಟಿ



ಮಾಡಲಾದ ಎಲ್ಲಾ ಅಗತ್ಯ ಔಷಧಿಗಳ ಉಚಿತ ಪೂರೈಕೆಗೆ ಕರ್ನಾಟಕ ಸರ್ಕಾರ ಬದ್ಧವಾಗಿದೆ ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಸಾರ್ವಜನಿಕ ಆರೋಗ್ಯ ವಿತರಣೆಯನ್ನು ಸುಗಮಗೊಳಿಸಲು ಮತ್ತು ಸರ್ಕಾರಿ ಸೌಲಭ್ಯಗಳಲ್ಲಿ ರೋಗಿಗಳಿಗೆ ಔಷಧಿಗಳನ್ನು ನಿರಾಕರಿಸುವ ಅಪಾಯವನ್ನು ತೆಗೆದುಹಾಕಲು, ಸರ್ಕಾರಿ ವೈದ್ಯರ ಪ್ರಿಸ್ಕ್ರಿಪ್ಷನ್‌ಗಳು ಆಸ್ಪತ್ರೆ ಪೂರೈಕೆಯಲ್ಲಿ ಲಭ್ಯವಿರುವ ಔಷಧಿಗಳಿಗೆ ಸೀಮಿತವಾಗಿರಬೇಕು ಎಂದು ರಾಜ್ಯ ಸರ್ಕಾರ ನಿರ್ದೇಶಿಸಿದೆ ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ಲಿಮಿಟೆಡ್ (ಕೆಎಸ್‌ಎಂಎಸ್‌ಸಿಎಲ್) ಮೂಲಕ ಸರ್ಕಾರಿ ಆಸ್ಪತ್ರೆಗಳಿಗೆ ನಿಯಮಿತವಾಗಿ ಔಷಧಿಗಳನ್ನು ಒದಗಿಸಲಾಗುತ್ತದೆ ಎಂದು ಅವರು ವಿವರಿಸಿದರು.

ಆಸ್ಪತ್ರೆಗಳಿಗೆ ಸಾಕಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ ಮತ್ತು ಯಾವುದೇ ಕೊರತೆಯಿದ್ದಲ್ಲಿ ಸ್ಥಳೀಯವಾಗಿ ಔಷಧಿಗಳನ್ನು ಖರೀದಿಸಲು ಸ್ಥಾಯೀ ಸೂಚನೆಗಳನ್ನು ನೀಡಲಾಗಿದೆ.

## ಫಸಲಿಗೆ ಬಂದ ಬೆಳೆ ಮಣ್ಣುಪಾಲು: ಬುಡಕಟ್ಟು ಕುಟುಂಬಗಳು ಬೀದಿಪಾಲು

**ಹರಪನಹಳ್ಳಿ:** ನಾಲ್ಕಾರು ದಶಕಗಳಿಂದ ಸಾಗುವಳಿ ಮಾಡಿಕೊಂಡು ಬಂದಿದ್ದ ಬೆಳೆ ಯನ್ನು ಅರಣ್ಯ ಇಲಾಖೆ ಸೂಚನೆ ಮೇರೆಗೆ ಹತ್ತಾರು ಜೆಸಿಬಿಗಳು ನೆಲಸಮ ಮಾಡುವ ಮೂಲಕ ನೂರಾರು ಬುಡಕಟ್ಟು ಕುಟುಂಬ ಗಳನ್ನು ಬೀದಿ ಪಾಲು ಮಾಡಲಾಗಿದೆ.ಪರಿಶಿಷ್ಟ ಜಾತಿಯ ಬುಡಕಟ್ಟು ಸಮುದಾಯಗಳ ನೂರಾರು ಕುಟುಂಬಗಳು, ನಾಲ್ಕಾರು ದಶಕಗಳಿಂದಲೂ ಆ ಜಮೀನನ್ನು ಸಾಗುವಳಿ ಮಾಡಿಕೊಳ್ಳುವ ಮೂಲಕ ಬದುಕು ಕಟ್ಟಿಕೊಂಡಿದ್ದರು. ಆದರೆ, ಏಕಾಏಕಿ ಅರಣ್ಯ ಇಲಾಖೆ ನೇತೃತ್ವದಲ್ಲಿ ಬೆಳೆದು ನಿಂತಿದ್ದ ಬೆಳೆಯನ್ನು ಹತ್ತಾರು ಜೆಸಿಬಿ ಯಂತ್ರಗಳ ಮೂಲಕ ನೆಲಸಮಗೊಳಿಸಿದ್ದಾರೆ. ಅಧಿಕಾರಿಗಳ ಈ ನಡೆಯಿಂದ ಬುಡಕಟ್ಟು ಕುಟುಂಬಗಳ ಬದುಕು ಮೂರಾಬಟ್ಟಿಯಾಗಿದೆ.

ಬೆಳೆದು ನಿಂತಿರುವ ಬೆಳೆಯನ್ನು ಕಣ್ಮುಂದೆಯೇ ನಾಶಪಡಿಸಿದ ಹಿನ್ನೆಲೆಯಲ್ಲಿ ತೀವ್ರ ಮಾನಸಿಕ ಒತ್ತಡ-ಕ್ಕೆ ಸಿಲುಕಿದ ಇಬ್ಬರು ರೈತ ಮಹಿಳೆಯರು, ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಆಘಾತಕಾರಿ ಘಟನೆ ತಾಲ್ಲೂಕಿನ ಮಾಚಿಹಳ್ಳಿ ಕೊರಚರಹಟ್ಟಿ ಗ್ರಾಮದಲ್ಲಿ ನಡೆದಿದೆ.

ಭೂ ರಹಿತ ಸಾಗುವಳಿ ಕುಟುಂಬಗಳಿಗೆ ಸರ್ಕಾರವೇ ಹಕ್ಕುಪತ್ರ ನೀಡಿದೆ. ಭೂಮಿಗೆ ಸಂಬಂಧಿಸಿದಂತೆ ಸರ್ಕಾರಿ ದಾಖಲೆಗಳಲ್ಲಿ ಅಂದರೆ, ಪಹಣಿ ಪತ್ರದಲ್ಲಿ ನೂರಾರು ರೈತರ ಹೆಸರುಗಳು ದಾಖಲಾಗಿವೆ. ಎರಡ್ಮೂರು ಎಕರೆ ವಿಸ್ತೀರ್ಣದ ಭೂಮಿಯನ್ನು ಸರ್ಕಾರವೇ ಮಂಜೂರಾತಿ ನೀಡಿದೆ.

ಮಂಜೂರಾತಿ ನೀಡಿದ ಜಮೀನುಗಳಿಗೆ ಪೋಡಿ, ನಕ್ಷೆ ಹಾಗೂ ಹದ್ದು ಬಸ್ತು ಮಾಡಿ ಕೊಡುವಂತೆ ಇಲ್ಲಿ ಭೂ ಮಂಜೂರಾತಿ ಪಡೆದ ಫಲಾನುಭವಿಗಳು, ಕಳೆದ ನಾಲ್ಕಾರು ವರ್ಷಗಳಿಂದಲೂ ತಾಲ್ಲೂಕು ಕಚೇರಿಗೆ ಅಲೆಯುತ್ತಲೇ ಇದ್ದಾರೆ. ಸಂಬಂಧಿಸಿದ ಇಲಾಖೆಗಳು, ಇವರ ಅಹವಾಲು ಕೇಳಿಸಿ ಕೊಳ್ಳುವ ಕೆಲಸಕ್ಕೆ ಮುಂದಾಗಿಲ್ಲ.

ಸರ್ಕಾರ ಮಂಜೂರಾತಿ ನೀಡಿರುವ ಜಮೀನಿನ ಅಳತೆ, ಹದ್ದುಬಸ್ತು, ಗಡಿ ರೇಖೆ ಗುರುತಿಸದ ಹಿನ್ನೆಲೆಯಲ್ಲಿ, ಅಕ್ಕಪಕ್ಕದ ಪಾಳು ಬಿದ್ದಿದ್ದ ಸರ್ಕಾರಿ ಹಾಗೂ ಅರಣ್ಯ ಭೂಮಿಯನ್ನು ಒಂದಿಷ್ಟು ಹೆಚ್ಚುವರಿಯಾಗಿ ಸಾಗುವಳಿ ಮಾಡುತ್ತಿದ್ದಾರೆ. ಇದು, ನಾಲ್ಕಾರು ದಶಕಗಳಿಂದಲೂ ಹೀಗೆ ಸಾಗಿದೆ. ಒತ್ತುವರಿ ಜಮೀನನ್ನು ಉಳುಮೆ ಮಾಡದಂತೆ ನೆನಪಾದಗೊಮ್ಮೆ ನೋಟೀಸ್ ಕಳುಹಿಸಿ, ಬಾಯ್ಮುಚ್ಚಿಕೊಂಡಿರುತ್ತಿದ್ದ ಅರಣ್ಯ ಇಲಾಖೆ ಸಿಬ್ಬಂದಿ, ಅಲ್ಲಿನ ಒತ್ತುವರಿಗೆ ಒಂದು ಅರ್ಥದಲ್ಲಿ ಇವರೇ, ನೆರವಾಗುತ್ತಿದ್ದರು ಎಂಬ ಆರೋಪಗಳು ಸಹ ಕೇಳಿಬರುತ್ತಿವೆ.

ಒತ್ತುವರಿ ಮಾಡಿಕೊಂಡಿರುವ ರೈತ ರಿಂದ ಇಲಾಖೆ ಯಾವ ಸಂದರ್ಭದಲ್ಲಾದರೂ, ಒತ್ತುವರಿ ತೆರವು ಕಾರ್ಯಕೈಗೊಂಡರೆ, ಸ್ವಯಂಕೃತವಾಗಿ ಬಿಟ್ಟುಕೊಡುತ್ತೇವೆ ಎಂಬ ಮುಚ್ಚಳಿಕೆಯನ್ನು ಅಧಿಕಾರಿಗಳು ಜಾಣ್ಮೆ ಯಿಂದ ಬರೆಸಿಕೊಳ್ಳುವ ಮೂಲಕ ಅಮಾ ಯಕ ರೈತರನ್ನು ಶೋಷಿಸುತ್ತಲೇ ಬಂದಿದ್ದಾರೆ.



ಸಕಾಲದಲ್ಲಿ ಮಳೆ ಸುರಿದ ಹಿನ್ನೆಲೆಯಲ್ಲಿ ಒತ್ತುವರಿ ಜಮೀನುಗಳಲ್ಲಿಯೂ ಈಗಾಗಲೇ ಬಿತ್ತನೆ ಕಾರ್ಯ ಸಂಪೂರ್ಣವಾಗಿ ಮುಗಿ ದಿದೆ. ಸಾಲ ಸೋಲ ಮಾಡಿ ಸಾವಿರಾರು ರೂ. ವ್ಯಯಿಸಿ ಬಿತ್ತನೆ ಮಾಡಿದ್ದಾರೆ.ಈ ಮಧ್ಯೆ ಒತ್ತುವರಿ ಜಮೀನನ್ನು ತೆರವುಗೊಳಿಸುವಂತೆ ಅರಣ್ಯ ಇಲಾಖೆ ನೋಟೀಸ್ ನೀಡಿದೆ. ರೈತರ ಸಮಯಾವಕಾಶ ಕೇಳಿದ್ದು, ಬೆಳೆ ಕಟಾವು ನಂತರ ತೆರವುಗೊಳಿಸುತ್ತೇವೆ ಎಂದು ಸಮಜಾಯಿಷಿ ನೀಡಿ-ದ್ದಾರೆ.

ಇವುಗಳನ್ನು ಲೆಕ್ಕಿಸದೇ ಏಕಾಏಕಿ ಜೆಸಿಬಿ ಯಂತ್ರಗಳ ಮೂಲಕ, ದೌರ್ಜನ್ಯ ಎಸಗಿ, ಎರಡ್ಮೂರು ತಿಂಗಳ ಅವಧಿಯ ಮೆಕ್ಕೆಜೋಳ ಸೇರಿದಂತೆ ವಿವಿಧ ಬೆಳೆಗಳನ್ನು ಸಂಪೂರ್ಣ ವಾಗಿ ನಾಶಪಡಿಸುವ ಮೂಲಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸುತ್ತಾರೆ. ಗ್ರಾಮದ ವಕೀಲರಾದ ಪ್ರಕಾಶ್‌ನಾಯ್ಕ್.

ಮಾಡಿದ ಸಾಲ ತೀರಿಸುವುದಾದರೂ ಹೇಗೆ ಎಂಬ ಮಾನಸಿಕ ತೊಳಲಾಟಕ್ಕೆ ಸಿಲುಕಿದ ಮಾಚಿಹಳ್ಳಿ ಕೊರಚರಹಟ್ಟಿಯ ರೈತ ಕುಟುಂಬದ ಮಹಿಳೆಯರಾದ ಲೋಕಮ್ಮ ಮತ್ತು ದುರುಗಮ್ಮ ಎಂಬ ಇಬ್ಬರು ಮಹಿಳೆಯರು ಸಂಜೆ ಕ್ರಿಮಿನಾಶಕ ಸೇವಿಸಿ, ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಕೂಡಲೇ ಅವರನ್ನು ಹರಪನಹಳ್ಳಿಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಒಂದರೆಡು ತಿಂಗಳ ಕಾಲಾವಕಾಶಕ್ಕೂ ಅವಕಾಶ ನೀಡದೇ, ಬೆಳೆದು ನಿಂತ ಬೆಳೆಯ ನ್ನೆಲ್ಲಾ, ನಾಶಪಡಿಸಿರುವ ಅಧಿಕಾರಿಗಳ ಕ್ರಮಕ್ಕೆ ಬುಡಕಟ್ಟು ಸಮುದಾಯದ ಬದುಕು ಸಾಲದ ಶೂಲಕ್ಕೆ ತುತ್ತಾಗುವಂತಾಗಿದೆ. ಜತೆಗೆ, ಇಬ್ಬರು ಮಹಿಳೆಯರು, ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಆಕಸ್ಮಿಕ ದುರ್ಘಟನೆ ಸಂಭವಿಸಿದ್ದರೇ, ಆ ಕುಟುಂಬಗಳ ಗತಿ ಏನು ಎಂಬ ವಿವೇಚನೆ ಅಧಿಕಾರಿಗಳಿಗೆ ಇಲ್ಲದರಿರುವುದು ದುರಂತದ ಸಂಗತಿ.

ಮಾಚಿಹಳ್ಳಿ ಕೊರಚರಹಟ್ಟಿ ಹಾಗೂ ತಾಳೇದಹಳ್ಳಿ ತಾಂಡದ ಬುಡಕಟ್ಟು ಸಮುದಾಯದ ಸುಮಾರು ನೂರಾರು ಕುಟುಂಬಗಳು ಸರ್ಕಾರಿ ಜಮೀನನ್ನು ಸಾಗುವಳಿ ಮಾಡುವ ಮೂಲಕ ಜೀವನ ನಿರ್ವಹಣೆ ಮಾಡುತ್ತಿದ್ದಾರೆ. ಅರಣ್ಯಭೂಮಿ ಒತ್ತುವರಿ ನೆಪದಲ್ಲಿ ಯಾವುದೇ ನೋಟೀಸ್ ಜಾರಿ ಮಾಡದೇ, ಏಕಾಏಕಿ, ಜೆಸಿಬಿ ಯಂತ್ರಗಳ ಮೂಲಕ ಬೆಳೆ ನಾಶಪಡಿಸಿರುವುದು ಅಧಿಕಾರಿಗಳ ದೌರ್ಜನ್ಯದ ಪರಮಾವಧಿ. ಅರಣ್ಯಭೂಮಿ ಒತ್ತುವರಿಯಾಗಿದ್ದರೇ, ಮುಂಗಾರು ಮಳೆಯ ಆರಂಭದಲ್ಲಿಯೇ ಅಧಿಕಾರಿಗಳು ಈ ಕ್ರಮ ಅನುಸರಿಸಬೇಕಿತ್ತು. ಆದರೆ, ಈಗ, ಈ ಕ್ರಮಕ್ಕೆ ಮುಂದಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

## ರೈತರು ಮಿಶ್ರ ಬೆಳೆಗಳನ್ನು ಬೆಳೆಯಿರಿ : ಗಿರಿಜೇಶ್

**ಹೊನ್ನಾಳಿ :** ಇತ್ತೀಚಿನ ದಿನಗಳಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ಅಡಿಕೆ ವಿಸ್ತೀರ್ಣ ಎರಡು ಪಟ್ಟು ಹೆಚ್ಚಾಗಿದೆ ಹಾಗಾಗಿ ರೈತರು ಕೇವಲ ಒಂದೇ ಬೆಳೆ ಮೇಲೆ ಅವಲಂಬಿತರಾಗದೆ ಸೂಕ್ತವಾದ ಅಂತರ ಬೆಳೆ ಹಾಗೂ ಮಿಶ್ರ ಬೆಳೆಗಳನ್ನು ಬೆಳೆಯಿರಿ ಎಂದು ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ. ಜಿ. ಕೆ ಗಿರಿಜೇಶ್ ಅವರು ರೈತರಿಗೆ ಸಲಹೆ ನೀಡಿದರು.

ತಾಲೂಕಿನ ಕುಂದೂರು ಗ್ರಾಮದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಸಾಮೂಧಯ ಭವನದಲ್ಲಿ ಬುಧವಾರ ಕತ್ತಲಗೆರೆ ವಿಸ್ತರಣಾ ಶಿಕ್ಷಣ ಘಟಕ, ಕ್ಯಾಲಿಕಟ್ನ ಅಡಿಕೆ ಮತ್ತು ಸಾಂಬರು ಬೆಳೆಗಳ ಅಭಿವೃದ್ಧಿ ನಿರ್ದೇಶನಾಲಯ ಹಾಗೂ ರೈತ ಸಂಪರ್ಕ ಕೇಂದ್ರ, ಕುಂದೂರು. ಕೃಷಿ ಇಲಾಖೆ ದಾವಣಗೆರೆ ರವರುಗಳ ಸಂಯುಕ್ತಾಶ್ರಯದಲ್ಲಿ ತೋಟಗಾರಿಕ ಬೆಳೆಗಳ ಬಗ್ಗೆ ಮಾಯಿತಿ ಕಾರ್ಯಗಾರದಲ್ಲಿ ಮಾತನಾಡಿದರು.




ರೈತರು ಆರಂಭದ ಅಡಿಕೆ ತೋಟದಲ್ಲಿ ಜೋಳ, ಟೊಮೋಟೊ ಅಲಸಂದೆ ಹುರುಳಿ, ಸೋಯಾಬಿನ್, ಬೆಂಡೆ, ಸೇವಂತಿಗೆ ಮಲ್ಲಿಗೆ, ಸುಗಂಧರಾಜ ಬೆಳೆಯಿರಿ 5-7 ವರ್ಷಗಳ ನಂತರ ಅಡಿಕೆ ತೋಟಗಳಲ್ಲಿ ವಿಳ್ಯದೆಲೆ, ಕಾಳು ಮೆಣಸು, ಕೊಕೊ, ಕಾಫಿ, ಎಲಕ್ಕಿ ಹೀಗೆ ಸೂಕ್ತವಾದ ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದರ ಜೋತೆಗೆ ಸಾವಯವ ಗೋಬ್ಬರ ಬಳಸುವುದರಿಂದ ಮಣ್ಣಿನ ಫಲವತ್ತತೆ ಹೆಚ್ಚಿಸಬಹುದು ಮತ್ತು ಹೆಚ್ಚಿನ ಆದಾಯ ಪಡೆಯಬಹುದು ಹಾಗೂ ಮನೆಗೆ ಬೇಕಾದ ಆಹಾರ ಉತ್ಪಾದನೆ ಮಾಡಬಹುದು ಎಂದು ತಿಳಿಸಿದರು.

ತರಳುಬಾಳು ಕೃಷಿ ವಿಜ್ಞಾನ ಕೇಂದ್ರದ ಡಾ. ಬಸವನಗೌಡ ಮಾತನಾಡಿ ಸಂಪನ್ಮೂಲ ವ್ಯಕ್ತಿಗಳು ಅಡಿಕೆ ತೋಟದ ವೈಜ್ಞಾನಿಕ ನಿರ್ವಹಣಾ ಕಾರ್ಯಕ್ರಮಗಳು ವಿಷಯ ಮಂಡಿಸುತ್ತಾ, ಅಡಿಕೆ ಬೆಳೆಗೆ ಬೇಕಾದ ಪೋಷಕಾಂಶಗಳು ಮಣ್ಣಿನ ಮತ್ತು ನೀರಿನ ಮೂಲಕ ದೊರೆಯುತ್ತವೆ ಹಾಗಾಗಿ ಮಣ್ಣು ಮತ್ತು ನೀರು ಪರೀ-ಕ್ಷೆ ಮಾಡಿಸಿ ಅದರ ಅನುಸಾರವಾಗಿ ಸಮತೋಲಿತ ಗೊಬ್ಬರ ಪೋಷ ಕಾಂಶಗಳನ್ನು ಕೊಡಬೇಕು ಎಂದರು.

## ಮಹಿಳಾ ಕಾಂಗ್ರೆಸ್‌ನಿಂದ ತುಂಗಭದ್ರಾನದಿಗೆ ಬಾಗಿನ ಅರ್ಪಣೆ

**ದಾವಣಗೆರೆ:** ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ವತಿಯಿಂದ ಇಂದು ಹರಿಹರದಲ್ಲಿ ತುಂಗಾಭದ್ರಾ ನದಿಗೆ ಬಾಗಿನ ಅರ್ಪಿಸಲಾಯಿತು. ಕಳೆದ 2 ವರ್ಷಗಳಿಂದ ನಾಡಿನಲ್ಲಿ ಉತ್ತಮ ಮಳೆ ಆಗಿ ರೈತರು ಉತ್ತಮ ಬೆಳೆ ಬೆಳೆಯುತ್ತಿದ್ದಾರೆ. ಇದೇ ರೀತಿ ಮುಂದಿನ ದಿನಗಳಲ್ಲಿಯೂ ಸಹ ಉತ್ತಮ ಮಳೆಯಾಗಲಿ ಎಂದು ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಪ್ರಾರ್ಥಿಸಿದರು.



## ಸಂಭ್ರಮವಲ್ಲದ ಹಗರಣದ ಹಬ್ಬ ಸೂತಕದ ಹಬ್ಬ : ಶಾಸಕ ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು:** ದೇವರ ಬಗ್ಗೆ ನಂಬಿಕೆ, ಆಧ್ಯಾತ್ಮದ ಚಿಂತನೆಯಿಂದಾಗಿ ಭಾರತ ದೇಶ ಮತ್ತು ಕನ್ನಡ ನಾಡು ಶಾಂತಿಯಿಂದ ಇವೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಇಂದು ಹಿರೇಗೌಜ ಗ್ರಾಮದಲ್ಲಿ 10 ದಿನಗಳ ಕಾಲ ನಡೆಯುವ ಹಗರಣದ ಹಬ್ಬ ಹಾಗೂ ಬಳಲಿಕ್ಕಮ್ಮ ಮತ್ತು ಮಲ್ಲಿಗೆಮ್ಮನವರ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಆಧ್ಯಾತ್ಮದ ನಂಬಿಕೆಯಿಂದ ಧಾರ್ಮಿಕತೆಯಲ್ಲಿ ಧರ್ಮ, ಸಂಸ್ಕಾರ, ಸಂಸ್ಕೃತಿ ಇವುಗಳಿಂದಾಗಿ ಪ್ರಪಂಚದಲ್ಲೇ ಭಾರತ ಮುಂಚೂಣಿಯಲ್ಲಿದೆ. ಜಾತ್ಯಾತೀತ ರಾಷ್ಟ್ರದಲ್ಲಿ ಹಲವಾರು ಧರ್ಮಗಳಿದ್ದು, ಧರ್ಮದಲ್ಲಿ ಹಲವಾರು ಉಪಜಾತಿಗಳಿವೆ. ಅದನ್ನೆಲ್ಲ ಮೆಟ್ಟಿನಿಂತು ಆಧ್ಯಾತ್ಮಿಕವಾಗಿ ದೇಶವಾಸಿಗಳು ಗಟ್ಟಿಯಾದ ನಿಲುವು ತಾಳಿರುವುದು ಹೆಮ್ಮೆಯ ಸಂಗತಿ ಎಂದರು.

ಎಲ್ಲಾ ನಾಗರೀಕರು ಜನ್ಮ ನೀಡಿದ ಭಾರತಾಂಭೆಗೆ ಜೈ ಎನ್ನುತ್ತೇವೆ. ನೀರಿಗೆ ಗಂಗೆ, ದೇಶಕ್ಕೆ ಭಾರತ ಮಾತಾ, ರಾಜ್ಯದಲ್ಲಿ ಜೈ ಭುವನೇಶ್ವರಿ ದೇವಿ ಎನ್ನುತ್ತೇವೆ. ಈ ರೀತಿ ಧರ್ಮದ ಲೇಪನ ನೀಡುವುದೇ ಭಾರತದ ಸಂಸ್ಕೃತಿ ಎಂದು ಹೇಳಿದರು.

ಇದು ಹಗರಣದ ಹಬ್ಬ. 7 ಹಳ್ಳಿಗಳು ಸೇರಿ ಮಾಡುವ ಸಂಭ್ರಮದ ಹಬ್ಬ ಅಲ್ಲ. ಇದೊಂದು ಸೂತಕದ ಹಬ್ಬ. ಊರಿಗಾಗಿ, ನಾಡಿಗಾಗಿ ಮಲಿಗೆಮ್ಮನ ಮಕ್ಕಳಾದ ಹುಲಿಬೀರಯ್ಯ ಮತ್ತು ಕಲಿಬೀರಯ್ಯ ಎಂಬ ಇಬ್ಬರು ಯುವಕರು ಬಲಿದಾನ ಮಾಡಿದ ಕಾರಣಕ್ಕೆ ಹಬ್ಬ ಆಚರಣೆ ಮಾಡಲಾಗುತ್ತಿದೆ.

7 ಹಳ್ಳಿಗಳಾದ ಹಿರೇಗೌಜ, ಚಿಕ್ಕಗೌಜ, ಸಾದರಹಳ್ಳಿ, ಕುರಿಚಿಕ್ಕನಹಳ್ಳಿ, ಕರಿಸಿದ್ದನಹಳ್ಳಿ, ಕೆಂಗೇನಹಳ್ಳಿ, ಕಾರೇಹಳ್ಳಿ ಈ ಗ್ರಾಮಸ್ಥರು ಒಂದು ವಾರ ಕೃಷಿ ಚಟುವಟಿಕೆಗಳಿಗೆ ವಿರಾಮ ನೀಡಿ ಈ ಹಬ್ಬದಲ್ಲಿ ಭಾಗಿಯಾಗುತ್ತಾರೆ.




ಜೊತೆಗೆ ಈ ಹಬ್ಬ ಶಿಸ್ತನ್ನು ಪಾಲಿಸುವ ಮೂಲಕ ವಿವಿಧ ಹಬ್ಬದ ಖಾದ್ಯಗಳಿಗೆ ನಿಷೇಧವಿರುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿ, ಗತಕಾಲದ ವೈಭವದ ನೆನಪು ಮಾಡಿಕೊಂಡು ಗ್ರಾಮಸ್ಥರಲ್ಲಿ ಒಗ್ಗಟ್ಟು ಮೂಡಿಸಿ ಸಾಂಸ್ಕೃತಿಕ ಶ್ರೀಮಂತಿಕೆ ಇರುವುದರಿಂದ ಭಾರತದಲ್ಲಿ ಹಬ್ಬಗಳು ಇರುವುದು ಜಗತ್ತಿನೆಲ್ಲೆಡೆ ಎಲ್ಲೂ ಕಾಣಲು ಸಾಧ್ಯವಿಲ್ಲ. ಸಮೃದ್ಧಿ ಇದ್ದಲ್ಲಿ ಸಂಸ್ಕೃತಿ ಬೆಳೆಯುತ್ತದೆ ಎಂದರು.

ಬಲಿದಾನ ಮಾಡಿದವರ ನೆನಪಿನಲ್ಲಿ ಈ ಹಗರಣದ ಹಬ್ಬ ಆಚರಣೆ ಮಾಡುವುದನ್ನು ಪೂರ್ವಿಕರು ಮಾಡಿದ್ದಾರೆ. ದೇವನೊಬ್ಬ ನಾಮ ಹಲವು, ದಯವೇ ಧರ್ಮದ ಮೂಲವಯ್ಯ, ಸಕಲ ಜೀವಾತ್ಮಗಳಿಗೂ ಲೇಸನ್ನೇ ಬಯಸುವ ಎಂಬ ಅರ್ಥದಲ್ಲಿ ಪಂಚಭೂತಗಳನ್ನು ಪೂಜಿಸಲಾಗುತ್ತಿದೆ ಎಂದರು.

ಗ್ರಾ.ಪಂ ಸದಸ್ಯ ಶಿವಕುಮಾರ್ ಮಾತನಾಡಿ, ವಿಜಯನಗರ ಸಾಮ್ರಾಜ್ಯದ ಆಳ್ವಿಕೆಯ ಕಾಲದಲ್ಲಿ ಸಾಮಂತ ದೊರೆಯ ಆಳ್ವಿಕೆಯಲ್ಲಿ ಸಖರಾಯಪಟ್ಟಣಕ್ಕೆ ಬಂದ ಬಳಿಲಿಕ್ಕವ್ವ ಮತ್ತು ಮಲ್ಲಿಗೆಮ್ಮ ಇವರು ಅಕ್ಕ-ತಂಗಿಯರಾಗಿದ್ದು ಇವರ ಮಕ್ಕಳಾದ ಹುಲಿಬೀರಯ್ಯ, ಕಲಿಬೀರಯ್ಯ ಸೀಗೆ ನಾಡಿನಿಂದ ಹೊಂಬಳ್ಳಿ ಕರಿ ಹರಿದು ತರುವ ಸಂದರ್ಭದಲ್ಲಿ ಬಲಿಯಾಗುತ್ತಾರೆ. ಅದರ ನೆನಪಿನಲ್ಲೇ ಹಗರಣದ ಹಬ್ಬ ಆಚರಿಸುತ್ತಾರೆಂದು ವಿವರಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿ.ಪಂ ಅಧ್ಯ-ಕ್ಷೆ ರೇಖಾ ಹುಲಿಯಪ್ಪಗೌಡ, ಗ್ರಾ.ಪಂ ಅಧ್ಯ-ಕ್ಷೆ ಮಂಜುಳ, ಉಪಾಧ್ಯಕ್ಷೆ ಶಶಿಕಲಾ, ಹಬ್ಬದ ಆಚರಣೆ ಸಮಿತಿ ಅಧ್ಯಕ್ಷ ಹೆಚ್.ಎಸ್. ಗಾಂಧಿ, ಯೋಗೀಶ್‌ಗೌಡ, ಸಿ.ಸಿ. ಬಸವೇಗೌಡ, ಚಂದ್ರೇಗೌಡ, ದೇವೇಗೌಡ, ಓಂಕಾರೇಗೌಡ, ರಾಮೇಗೌಡ, ವಿಜಯ್‌ಕುಮಾರ್, ಶೋಭಾರಾಣಿ, ಗೀತಾ, ಹಾಲಪ್ಪ, ಮಮತ ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ಪ್ರೀತಿ ನಿಮ್ಮ ಪ್ರೀತಿಪಾತ್ರರೊಡನೆ ಹಂಚಿಕೊಳ್ಳಬೇಕಾದ ಭಾವನೆ.

### ವೃಷಭ ರಾಶಿ

ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ. ನಿಮ್ಮ ಸಹಕಾರದ ಸ್ವಭಾವ ಕೆಲಸದ ಬಯಸಿದ ಫಲಿತಾಂಶಗಳು ತರುವ.

### ಮಿಥುನ ರಾಶಿ

ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಹಣದ ಯಾವುದೇ ವಿಷಯದ ಬಗ್ಗೆ ಇಂದು ನಿಮ್ಮ ಜಗಳವಾಗಬಹುದು. ಆದಾಗ್ಯೂ ನೀವು ನಿಮ್ಮ ಶಾಂತ ಸ್ವಭಾವದಿಂದ ಎಲ್ಲವನ್ನು ಸರಿಗೊಳಿಸಬಹುದು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ

### ಕರ್ಕ ರಾಶಿ

ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ. ಬಿಕ್ಕಟ್ಟಿನ ಸಮಯದಲ್ಲಿ ಸಂಬಂಧಿಗಳೂ ಸಹಾಯ ಮಾಡುತ್ತಾರೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಆದಾಗ್ಯೂ ಈ ಸಮಯದಲ್ಲಿ ನೀವು ಹಣಕ್ಕಿಂತ ಹೆಚ್ಚಾಗಿ ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು.

### ಸಿಂಹ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಹಿರಿಯರು ಮತ್ತು ಕುಟುಂಬದ ಸದಸ್ಯರು ಪ್ರೀತಿ ಮತ್ತು ರಕ್ಷಣೆ ನೀಡುತ್ತಾರೆ. ನೀವು ಪ್ರಣಯದ ಆಲೋಚನೆಗಳು ಮತ್ತು ಹಿಂದಿನ ಕನಸುಗಳಲ್ಲಿ ಕಳೆದುಹೋಗುತ್ತೀರಿ.

### ಕನ್ಯಾ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ತುಲಾ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

### ವೃಶ್ಚಿಕ ರಾಶಿ

ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಘಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ.

### ಧನು ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ .

### ಮಕರ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಸ್ನೇಹಿತರು ಮತ್ತು ಸಂಬಂಧಿಗಳು ಉಪಕಾರ ಮಾಡುತ್ತಾರೆ ಮತ್ತು ನೀವು ಅವರ ಸಂಗದಲ್ಲಿ ಸಾಕಷ್ಟು ಸಂತೋಷವಾಗಿರುವಿರಿ. ಪ್ರೀತಿಯ ಜೀವನ ಇಂದು ನಿಜವಾಗಿಯೂ ಸುಂದರವಾಗಿ ಅರಳುತ್ತದೆ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ.

### ಕುಂಭ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಇಂದು ಹೂಡಿಕೆಗಳನ್ನು ಮಾಡಬಾರದು. ಸ್ನೇಹಿತರ ಸಮಸ್ಯೆಗಳು ನಿಮಗೆ ಕೆಟ್ಟದೆನಿಸುವಂತೆ ಮಾಡಬಹುದು. ಸ್ನೇಹ ಆಳವಾದ ಹಾಗೆ ಪ್ರಣಯ ನಿಮ್ಮೆಡೆ ಬರುತ್ತದೆ. ನೀವು ಹಿಂದಿನಿಂದಲೂ ಕೆಲಸದಲ್ಲಿ ಯಾರಾದರ ಜೊತೆಗಾದರೂ ಮಾತನಾಡಲು ಪ್ರಯತ್ನಿಸುತ್ತಿದ್ದಲ್ಲಿ, ಇಂದು ನಿಮ್ಮ ಅದೃಷ್ಟ ಖುಲಾಯಿಸುತ್ತದೆ.

### ಮೀನ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯಲ್ಲಿ ನೀವೇ ತೊಂದರೆಗೊಳಗಾಗಬಹುದು. ಕುಟುಂಬದ ಸದಸ್ಯರೊಂದಿಗೆ ನಿಮ್ಮ ಸಮಸ್ಯೆಗಳನ್ನು ಹಂಚಿಕೊಂಡು ನೀವು ಒಳ್ಳೆಯದನ್ನು ಅನುಭವಿಸಬಹುದು ಆದರೆ ಕೊಲವೊಮ್ಮೆ ನೀವು ನಿಮ್ಮ ಅಹಂಕಾರವನ್ನು ಮುಂದೆ ಇಟ್ಟುಕೊಂಡು ಕುಟುಂಬ ಸದಸ್ಯರಿಗೆ ಪ್ರಮುಖ ವಿಷಯಗಳನ್ನು ಹೇಳುವುದಿಲ್ಲ.

## ಹಾಸನ–ಬೆಂಗಳೂರು ಮಾರ್ಗ ಬಸ್ನಿಲು ಗಡೆಗೆ ಆದೇಶ; ಎಲ್ಲೆಲ್ಲಿ ಪ್ರಯಾಣಿಕರನ್ನು ಇಳಿಸಿ, ಹತ್ತಿಸಿಕೊಂಡು ಹೋಗಬೇಕು?

**ಮಾಗಡಿ ಗ್ರಾಮಾಂತರ:** ಹಾಸನ– ಬೆಂಗಳೂರು, ಬೆಂಗಳೂರು– ಹಾಸನ ಮಾರ್ಗವಾಗಿ ಸಂಚರಿಸುವ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ಕೆಲ ಪ್ರಮುಖ ಸ್ಥಳಗಳಲ್ಲಿ ನಿಲುಗಡೆ ನೀಡುವ ಬಗ್ಗೆ ಹಾಸನದ ವಿಭಾಗೀಯ ಅಧಿಕಾರಿಗಳು ನಾನಾ ಘಟಕಗಳ ವ್ಯವಸ್ಥಾಪಕರಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು–ಹಾಸನರಾಷ್ಟ್ರೀಯಹೆದ್ದಾರಿಯಲ್ಲಿಕೆಲವು ಕಡೆ ಫ್ಲೈಓವ ಕಾಮಗಾರಿಗಳು ನಡೆಯುತ್ತಿವೆ. ಕೆಲವು ಕಡೆ ಮುಕ್ತಾಯವಾಗಿವೆ. ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳು ನೀಡಿದ ದೂರಿನ ಹಿನ್ನೆಲೆಯಲ್ಲಿ ಅಧಿಕಾರಿಗಳು ಕ್ರಮಕೈಗೊಂಡಿದ್ದು ವಾಹನ 'ನಿಲುಗಡೆ ಸ್ಥಳಗಳ ಪಟ್ಟಿಮಾಡಿ ಹಾಸನ–ಬೆಂಗಳೂರು ಮಾರ್ಗ ಮಧ್ಯೆ ಬರುವ ತಾಲೂಕು ಘಟಕಗಳಿಗೆ ಆದೇಶ ನೀಡಿದ್ದಾರೆ.

ಹಾಸನ– ಬೆಂಗಳೂರು ಮಾರ್ಗ ಮಧ್ಯದಲ್ಲಿ ಬರುವಶಾಂತಿ ಗ್ರಾಮ, ಉದಯಪುರ, ಮಟ್ಟನವಿಲೆ, ಹಿರಿಸಾವೆ, ನಾಗತಿಹಳ್ಳಿ, ಬೆಳ್ಳೂರು ಕ್ರಾಸ್, ಕುಣಿಗಲ್, ಯಡಿಯೂರು, ಸೋಲೂರು, ಗುಡೇಮಾರನಹಳ್ಳಿ ಸೊಂಡೆ ಕೊಪ್ಪಗಳಲಿ ಲ್ಕಡ್ಡಾಯವಾಗಿ ನಿಲುಗಡೆ ನೀಡಿ ಪ್ರಯಾಣಿಕರನ್ನು ಹತ್ತಿಸಿ, ಇಳಿಸಿಕೊಂಡು ಹೋಗುವಂತೆ ವಾಹನ ಚಾಲಕರಿಗೆ ಸಿಬ್ಬಂದಿಗೆ ಸೂಕ್ತ ತಿಳಿವಳಿಕೆ ನೀಡುವಂತೆ ಆದೇಶಿಸಲಾಗಿದೆ.

## 'ಭಾರತದ ಮೇಲೆ ಇನ್ನಷ್ಟು ಸುಂಕ'



**ನವದೆಹಲಿ:** ಭಾರತವು ಅಮೆರಿಕದ ಪಾಲಿಗೆ ಒಳ್ಳೆಯ ವ್ಯಾಪಾರ ಪಾಲುದಾರ ಅಲ್ಲ ಎಂದು ಹೇಳಿರುವ ಡೊನಾಲ್ಡ್ ಟ್ರಂಪ್, ರಷ್ಯಾದಿಂದ ಕಚ್ಚಾ ಡೊನಾಲ್ಡ್ 24 ಗಂಟೆಗಳಲ್ಲಿ ಭಾರತದ ಮೇಲೆ ಗಣನೀಯ ಪ್ರಮಾಣದಲ್ಲಿ ತೆರಿಗೆ ಹೆಚ್ಚು ಮಾಡಲಾಗುವುದು' ಎಂದು ಮಂಗಳವಾರ ಎಚ್ಚರಿಕೆ ನೀಡಿದ್ದಾರೆ.

'ಭಾರತವು ಅತ್ಯಂತ ಹೆಚ್ಚಿನ ಪ್ರಮಾಣದಲ್ಲಿ ತೆರಿಗೆ ವಿಧಿಸುವ ದೇಶ. ಭಾರತದ ಬಗ್ಗೆ ಈ ಮಾತನ್ನು ಹೇಳಲು ಜನ ಬಯಸುವುದಿಲ್ಲ. ಆದರೆ ಅವರು (ಭಾರತ) ಅತಿಹೆಚ್ಚು ತೆರಿಗೆ ವಿಧಿಸುತ್ತಾರೆ. ಅವರಲ್ಲಿನ ತೆರಿಗೆ ಬಹಳ ಹೆಚ್ಚಿರುವ ಕಾರಣಕ್ಕೆ ನಾವು ಅವರೊಂದಿಗೆ ಬಹಳ ಕಡಿಮೆ ವ್ಯಾಪಾರ ನಡೆಸುತ್ತಿದ್ದೇವೆ' ವಾಹಿನಿಗೆ ನೀಡಿರುವ ಸಂದರ್ಶನದಲ್ಲಿ ಹೇಳಿದ್ದಾರೆ.

'ನಾವು ಅವರಿಗೆ ಶೇ 25ರಷ್ಟು ತೆರಿಗೆ ವಿಧಿಸಿದ್ದೇವೆ. ಆದರೆ ಮುಂದಿನ 24 ಗಂಟೆಗಳಲ್ಲಿ ಅದನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸಲಿದ್ದೇನೆ ಏಕೆಂದರೆ

ಅವರು ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿದ್ದಾರೆ. ಅವರು ಯುದ್ಧಾ ಪರಾಧಕ್ಕೆ ನೆರವು ನೀಡುತ್ತಿದ್ದಾರೆ. ಅವರು ಹಾಗೆ ಮಾಡುವುದು ನನಗೆ ಸಂತಸ ನೀಡುವುದಿಲ್ಲ' ಎಂದು ಟ್ರಂಪ್ ಹೇಳಿದ್ದಾರೆ.

'ಭಾರತವು ಅತಿಹೆಚ್ಚಿನ ತೆರಿಗೆ ವಿಧಿಸುವ ಸ್ಥಿತಿಯಿಂದ ಹಿಂದೆ ಸರಿದು, ನಮಗೆ ಶೂನ್ಯ ತೆರಿಗೆ ವಿಧಿಸಲಿದೆ. ಆದರೆ, ಅವರು ಕಚ್ಚಾ ತೈಲದ ವಿಚಾರದಲ್ಲಿ ನಡೆದುಕೊಳ್ಳುತ್ತಿರುವ ರೀತಿಯನ್ನು ಕಂಡರೆ, ಅಷ್ಟು ಸಾಕಾಗುವುದಿಲ್ಲ' ಎಂದು ಟ್ರಂಪ್ ತಿಳಿಸಿದ್ದಾರೆ.

ರಷ್ಯಾದಿಂದ ಭಾರಿ ಪ್ರಮಾಣದಲ್ಲಿ ಕಚ್ಚಾ ತೈಲ ಖರೀದಿಸಿ, ಅದನ್ನು ದೊಡ್ಡ ಲಾಭಕ್ಕೆ ಮಾಡುತ್ತಿರುವುದಕ್ಕಾಗಿ ಅಮೆರಿಕವು ಭಾರತದ ಪ್ರಮಾಣವನ್ನು nes. beatican ಹೆಚ್ಚಿಸಲಿದೆ ಎಂದು ಟ್ರಂಪ್ ಅವರು ಸೋಮವಾರವೂ ಹೇಳಿದ್ದರು. abedesಈ ಮಾತಿಗೆ ಭಾರತವು ಪ್ರತ್ಯುತ್ತರ ನೀಡಿದೆ. ಅಮೆರಿಕ ಮತ್ತು ಯುರೋಪ್ ಕೂಡ ರಷ್ಯಾದ ಜೊತೆ ವ್ಯಾಪಾರ ಸಂಬಂಧ ಮುಂದುವರಿಸಿದ ಎಂದು ಭಾರತ ತಿರುಗೇಟು ನೀಡಿದೆ.

### ಕುಸಿದ ರೂಪಾಯಿ, ಇನ್ನಷ್ಟು ಇಳಿಕೆ ಸಾಧ್ಯತೆ

**ಮುಂಬೈ:** ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯನು ಸಾರ್ವಕಾಲಿಕ ಕನಿಷ್ಠ ಮಟ್ಟದ ಸನಿಹಕ್ಕೆ ತಲುಪಿದೆ. ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ರೂಪಾಯಿ ಮೌಲ್ಯವು 22 ಪೈಸೆಯಷ್ಟು ಕುಸಿದು 87.88ಕ್ಕೆ ತಲುಪಿದೆ. ಫೆಬ್ರುವರಿಯಲ್ಲಿ ರೂಪಾಯಿ ಮೌಲ್ಯವು 87.95ಕ್ಕೆ ತಲುಪಿದ್ದುದು ಸಾರ್ವಕಾಲಿಕ ಕನಿಷ್ಠ ಮಟ್ಟ.

ರಷ್ಯಾದಿಂದ ಕಚ್ಚಾ ತೈಲವನ್ನು ಭಾರತವು ಖರೀದಿಸುತ್ತಿದೆಯಾದ ಕಾರಣಕ್ಕೆ ಭಾರತದ ಸರಕುಗಳಿಗೆ ವಿಧಿಸುವ ಸುಂಕವನ್ನು ಹೆಚ್ಚು ಮಾಡಲಾಗುವುದು ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮತ್ತೆ ಎಚ್ಚರಿಕೆ ನೀಡಿರುವುದುಭಾರತ ಮತ್ತು ಅಮೆರಿಕದ ನಡುವಿನ ವ್ಯಾಪಾರ ಒಪ್ಪಂದ ಕುರಿತ ಅನಿಶ್ಚಿತತೆಗಳು ದೇಶದ ಮಾರುಕಟ್ಟೆಯ ಮೇಲೆ ನಕಾರಾತ್ಮಕ ಪರಿಣಾಮ ಉಂಟುಮಾಡುತ್ತಿವೆ.ಹೀಗಾಗಿ ರೂಪಾಯಿ ಮೌಲ್ಯವು ಇನ್ನಷ್ಟು ತಗ್ಗುವ ಸಾಧ್ಯತೆ ಇದೆ ಎಂದು ಮಾರುಕಟ್ಟೆ ಪರಿಣತರು ಹೇಳಿದ್ದಾರೆ.

### ಉತ್ತರಕಾಶಿ: ಐವರು ಸಾವು, 50 ಜನರು ನಾಪತ್ತೆ

## ಮೇಘಸ್ಫೋಟ: ಕೊಚ್ಚಿಹೋದ ಊರು



**ಉತ್ತರಕಾಶಿ (ಉತ್ತರಾಖಂಡ)/ಲಖನೌ:** ಮೇಘಸ್ಫೋಟ ಪರಿಣಾಮ ಉತ್ತರಾಖಂಡದ ಉತ್ತರಕಾಶಿಯಲ್ಲಿ ಮಂಗಳವಾರ ದಿಢೀರ್ ಪ್ರವಾಹ ಉಂಟಾಗಿದ್ದು, ಐವರು ಮೃತಪಟ್ಟು, ಇತರ 50 ಮಂದಿ ನಾಪತ್ತೆಯಾಗಿದ್ದಾರೆ

ಧಾರಾಲಿ ಖೀರಗರ್ದ್ ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ಮಣ್ಣು ಮಿಶ್ರಿತ ನೀರು ರಭಸದಿಂದ ಹರಿಯುತ್ತಿದ್ದ ಪರಿಣಾಮ, ಹಲವಾರು ಮನೆಗಳು ಕೊಚ್ಚಿ ಹೋಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಧಾರಾಲಿಯು ಈ ಮಾರ್ಗದಲ್ಲಿನ ಪ್ರಮುಖ ತಂಗುದಾಣವಾಗಿದ್ದು, ಇಲ್ಲಿ ಹೋಟೆಲ್‌ಗಳು, ರೆಸ್ಟೋರೆಂಟ್ ಹಾಗೂ ಹೋಂಸ್ಟೇಗಳು ಇವೆ. ಪ್ರಸಿದ್ಧ ಯಾತ್ರಾಸ್ಥಳ ಗಂಗೋತ್ರಿಯು ಧಾರಾಲಿಯಿಂದ 18 ಕಿ.ಮೀ.ದೂರದಲ್ಲಿದೆ.

ಖೀರಗಂಗಾ ನದಿಯ ಜಲಾನಯನ ಪ್ರದೇಶದಲ್ಲಿ ಮೇಘಸ್ಫೋಟ ಸಂಭವಿಸಿದ್ದರಿಂದ ದಿಢೀರ್ ಪ್ರವಾಹ ಕಂಡುಬಂದಿದೆ ಎಂದು ಸ್ಥಳೀಯರು ಹೇಳಿದ್ದಾರೆ.ವಾಹದಿಂದಾಗಿ ನೀರು ಗ್ರಾಮಕ್ಕೆ ನುಗ್ಗುತ್ತಿರುವುದು. ಹಾಗೂ ಮನೆಗಳಿಗೆ ಹಾನಿಯಾಗುತ್ತಿರುವುದನ್ನು ತೋರಿಸುವ ವಿಡಿಯೊಗಳು ವ್ಯಾಪಕವಾಗಿ ಹಂಚಿಕೆಯಾಗಿವೆ. ಅವಶೇಷಗಳಡಿ ಸಿಲುಕಿರುವ ವ್ಯಕ್ತಿಯೊಬ್ಬರು ಹೊರಗೆ ಬರಲು ಪ್ರಯತ್ನಿಸುತ್ತಿರುವುದು ವಿಡಿಯೊದಲ್ಲಿ ಸೆರೆಯಾಗಿದೆ.

### ರೆಡ್ ಅಲರ್ಟ್ ಘೋಷಣೆ

ಧಾರಾಲಿ ಪ್ರದೇಶದಲ್ಲಿ ಭಾರಿ ಮಳೆ ಬೀಳುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿರುವ ಭಾರತೀಯ ಹವಾಮಾನ ಇಲಾಖೆ (ಐಎಂಡಿ), ರೆಡ್ ಅಲರ್ಟ್ ಘೋಷಿಸಿದೆ. ಉತ್ತರಾಖಂಡದ ಹಲವು ಪ್ರದೇಶಗಳಲ್ಲಿ 21 ಸೆಂ.ಮೀ. ಮಳೆಯಾಗಿದೆ ಎಂದು ಐಎಂಡಿ ತಿಳಿಸಿದೆ.

### ಪ್ರಮುಖ ಅಂಶಗಳು

- ಪ್ರವಾಸಿಗರು ಸೇರಿ 100ಕ್ಕೂ ಹೆಚ್ಚು ಜನರು ಕಟ್ಟಡಗಳ ಅವಶೇಷಗಳಡಿ ಸಿಲುಕಿರಬಹುದು ಎಂದು ಮೂಲಗಳು ಹೇಳಿವೆ
- 20–25 ಹೋಟೆಲ್‌ಗಳು/ಹೋಂ ಸ್ಟೇಗಳು ಕೊಚ್ಚಿಕೊಂಡು ಹೋಗಿವೆ
- ಇಂಡೊ ಟಿಬೆಟ್ ಗಡಿ ಪೊಲೀಸ್‌ನ (ಐಟಿಬಿಪಿ) ಪಡೆಯ 16 ಸದಸ್ಯರಿರುವ ತಂಡ ಧಾರಾಲಿಗೆ ತೆರಳಿದ್ದು, ರಕ್ಷಣಾ ಕಾರ್ಯ ಕೈಗೆತ್ತಿಕೊಂಡಿದೆ
- ಮಾಟ್ಲಿಯಲ್ಲಿರುವ ಐಟಿಬಿಪಿಯ 12ನೇ ಬೆಟಾಲಿಯನ್, ಸ್ಥಳಕ್ಕೆ ತೆರಳಿದ್ದು, ರಕ್ಷಣಾ ಕಾರ್ಯಕ್ಕೆ ಕೈಜೋಡಿಸಿದೆ
- ರಕ್ಷಣಾ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ 8ರಿಂದ 10 ಯೋಧರು ನಾಪತ್ತೆಯಾಗಿದ್ದಾರೆ. ಅದರೆ ಸೇನೆ ಇದನ್ನು ದೃಢಪಡಿಸಿಲ್ಲ
- ಮಣ್ಣು ಮಿಶ್ರಿತ ನೀರು ಹಾಗೂ ಹೂಳು ತಗ್ಗು ಪ್ರದೇಶಗಳತ್ತ ನುಗ್ಗುತ್ತಿರುವ ಕಾರಣ ಇಲ್ಲಿನ ನಿವಾಸಿಗಳಲ್ಲಿ ಆತಂಕ ಮನೆ ಮಾಡಿದೆ.

ಸಹಾಯವಾಣಿ ಆರಂಭ: ಜಿಲ್ಲಾಡಳಿತವು ಸಹಾಯವಾಣಿ ಆರಂಭಿಸಿದೆ.

### ಮಾಹಿತಿ ಪಡೆದ ಪ್ರಧಾನಿ:

'ಪ್ರವಾಹದಿಂದ ತೊಂದರೆಗೆ ಒಳಗಾದವರ ಸುರಕ್ಷತೆಗೆ ನಾನು ಪ್ರಾರ್ಥಿಸುವೆ. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಅವರೊಂದಿಗೆ ಮಾತನಾಡಿ, ಪರಿಸ್ಥಿತಿ ಕುರಿತು ಮಾಹಿತಿ ಪಡೆದಿರುವೆ. ಸಂತ್ರಸ್ತರಿಗೆ ಎಲ್ಲ ನೆರವು ನೀಡಲಾಗುವುದು' ಎಂದು ಪ್ರಧಾನಿ ನರೇಂದ್ರ ಮೋದಿ ಅವರು 'ಎಕ್ಸ್'ನಲ್ಲಿ ಕಲಾ ಹೇಳಿದ್ದಾರೆ.

### 'ಪ್ರವಾಹದಿಂದ ಭಾರಿ ನಷ್ಟ

ಉಂಟಾಗಿರುವುದು ದುಃಖ ತಂದಿದೆ. ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್, ಜಿಲ್ಲಾಡಳಿತ ಹಾಗೂ ಇತರ ತಂಡಗಳು ಸಮರೋಪಾದಿಯಲ್ಲಿ ರಕ್ಷಣಾ ಕಾರ್ಯ ಕೈಗೆತ್ತಿಕೊಂಡಿವೆ' ಎಂದು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ

## ರೈತರ ಅಲೆದಾಟ ತಪ್ಪಿಸಲು ಭೂ ಸುರಕ್ಷಾ

### ಬೋಗಸ್ ದಾಖಲೆ ಸೃಷ್ಟಿಗೂ ಕಡಿವಾಣ | ಕೃಷ್ಣಬೈರೇಗೌಡ ಚಾಲನೆ



**ಬೆಂಗಳೂರು :** ಬೋಗಸ್ ದಾಖಲೆಗಳಿಗೆ ಕಡಿವಾಣ. ಸರ್ಕಾರಿ ಕಚೇರಿಗಳಿಗೆ ರೈತರ ಅಲೆದಾಟ ತಪ್ಪಿಸುವುದು ಸೇರಿ ಇತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ 'ಭೂ ಸುರಕ್ಷಾ' ಯೋಜನೆಯನ್ನು ಅನುಷ್ಠಾನಕ್ಕೆ ತಂದಿದೆ.

ಕೆ.ಜಿ.ರಸ್ತೆಯ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ದಾಖಲೆ ಡಿಜಿಟಲೀಕರಣಗೊಳಿಸುವ ಈ ಯೋಜನೆಗೆ ಕಾರ್ಯಾಲಯದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕೃತವಾಗಿ ಚಾಲನೆ ನೀಡಿದರು.

ದಶಕಗಳಿಂದ ಭೂ ಮಂಜೂರಾತಿಗೆ ಸಂಬಂಧಿಸಿದ ಮೂಲ ದಾಖಲೆ ಬಚ್ಚಿಡುವ, ತಿದ್ದುವ ಮೂಲಕ ರೈತರನ್ನು ಶೋಷಿಸಲಾಗುತ್ತಿದೆ. ಸರ್ಕಾರಿ ಕಚೇರಿ, ಕೋರ್ಟ್‌ಗೆ ಅಲೆಸಲಾಗುತ್ತಿದೆ. ಮಧ್ಯವರ್ತಿಗಳು ಸಹ ಅನ್ನದಾತರನ್ನು ಶೋಷಿಸುತ್ತಿದ್ದಾರೆ. ಈ ಎಲ್ಲ ಸಮಸ್ಯೆಗಳಿಗೆ ಮುಕ್ತಿ ನೀಡುವುದು ಮತ್ತು ಜನರಿಗೆ ಸುಲಭವಾಗಿ ದಾಖಲೆ ಒದಗಿಸಬೇಕೆಂಬ ಆಶಯದಿಂದ 'ಭೂಸುರಕ್ಷಾ' ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಸಚಿವರು ಹೇಳಿದರು. ರಾಜ್ಯದ ಎಲ್ಲ ತಹಸೀಲ್ದಾರ್ ಕಚೇರಿಗಳಲ್ಲಿ 100 ಕೋಟಿ ಅಧಿಕ ಭೂ ದಾಖಲೆಗಳಿವೆ. ಈ ಪೈಕಿ 35.36 ಕೋಟಿ ಪುಟಗಳನ್ನು ಸ್ಕ್ಯಾನ್ ಮಾಡಲಾಗಿದೆ.

ಇನ್ನೂ 35 ಕೋಟಿ ಪುಟಗಳ ಸ್ಕ್ಯಾನಿಂಗ್ ಬಾಕಿ ಇದೆ. ಈ ಕೆಲಸ ತಹಸೀಲ್ದಾರ್ ಕಚೇರಿಗಷ್ಟೇ ಸೀಮಿತವಾಗದೆ ಉಪ ವಿಭಾಗಾಧಿಕಾರಿ(ಎಸಿ) ಮತ್ತು ಡಿಸಿ ಕಚೇರಿಯಲ್ಲಿರುವ ದಾಖಲೆಗಳನ್ನೂ ಸ್ಕ್ಯಾನ್ ಮಾಡಲು ನಿರ್ಧರಿಸಲಾಗಿದೆ. ಬೆಂಗಳೂರು ನಗರ ಜಿಲ್ಲಾಧಿಕಾರಿ ಕಚೇರಿಯಲ್ಲಿರುವ ಮೂಲ ದಾಖಲೆ ಸ್ಕ್ಯಾನ್ ಮಾಡುವ ಮೂಲಕ ಇದಕ್ಕೆ ಚಾಲನೆ ನೀಡಲಾಗಿದೆ ಎಂದರು.

ವರ್ಷಾಂತ್ಯದೊಳಗೆ ಸ್ಕ್ಯಾನಿಂಗ್ ಪೂರ್ಣ: ರಾಜ್ಯದ ಎಲ್ಲ ತಹಶೀಲ್ದಾರ್ ಕಚೇರಿಗಳಲ್ಲಿ ಪ್ರತಿನಿತ್ಯ ಸರಾಸರಿ 10 ಸಾವಿರ ಪುಟಗಳನ್ನು ಸ್ಕ್ಯಾನ್ ಮಾಡಲಾಗುತ್ತಿದೆ. ಡಿಸೆಂಬರ್ ದೊಳಗೆ ಎಲ್ಲ ಮೂಲ ದಾಖಲೆಗಳನ್ನು ಸ್ಕ್ಯಾನ್ ಮಾಡಲಾಗುವುದು. 2026

ಮಾರ್ಚ್ ವೇಳೆಗೆ ಎಸಿ ಕಚೇರಿ ರೆಕಾರ್ಡ್ ರೂಂನಲ್ಲಿರುವ ದಾಖಲೆಗಳನ್ನು ಸ್ಕ್ಯಾನಿಂಗ್ ಕಾರ್ಯ ಮುಗಿಸುವುದಾಗಿ ಕೃಷ್ಣ ಬೈರೇಗೌಡ ವಿವರಿಸಿದರು. ಬೆಂಗಳೂರು ಸುತ್ತಮುತ್ತ ಅನೇಕ ಜಾಗವನ್ನು ಕಬಳಿಸಲು ನಕಲಿ ದಾಖಲೆ ಸೃಷ್ಟಿಸಲಾಗಿದೆ. ದಾಖಲೆಗಳು ನಕಲಿ ಎಂದು ಗೊತ್ತಾದರೆ ಕೂಡಲೇ ಫೋರೆನ್ಸಿಕ್‌ಗೆ ಕಳಿಸುವ ಮೂಲಕ ತನಿಖೆ ಮಾಡಲಾಗುವುದು. ಎಫ್ ಎಲ್ ತಂಡ ಅಧ್ಯಯನಕ್ಕೆ ಪ್ರಾಯೋಗಿಕ ಕೊಠಡಿ (ಲ್ಯಾಬ್) ಸ್ಥಾಪನೆಗೆ ಅನುದಾನ ನೀಡಲು ಸಿದ್ಧರಿದ್ದೇವೆ. ಬೋಗಸ್ ದಾಖಲೆ ಎಂದು ತಿಳಿದರೆ ಸುಪ್ರೀಂಕೋರ್ಟ್‌ಲ್ಲೂ ಹೋರಾಟ ನಡೆಸಲಾಗುವುದು ಎಂದರು

## ಆ.9ಕ್ಕೆ ಋಗ್ವೇದ ನಿತ್ಯ ಉಪಾಕರ್ಮ

**ದಾವಣಗೆರೆ:** ಶ್ರೀ ಶಂಕರ ಸೇವಾ ಸಂಘದ ಆಶ್ರಯದಲ್ಲಿ ಆ.9ರಂದು ಬೆಳಿಗ್ಗೆ 6 ಗಂಟೆಗೆ ಋಗ್ವೇದ ಮತ್ತು ಯಜುರ್ವೇದ ನಿತ್ಯ ಉಪಾಕರ್ಮ ಹಾಗೂ ನೂತನ ಉಪಾಕರ್ಮವನ್ನು ನಗರದ ರಿಂಗ್ ರಸ್ತೆಯಲ್ಲಿರುವ ಶ್ರೀ ಶಂಕರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು, ತ್ರಿಮತಸ್ಥ ಬ್ರಾಹ್ಮಣರು ಮುಂಚಿತವಾಗಿ ತಮ್ಮ ಹೆಸರನ್ನು ನೋಂದಾಯಿಸಲು ಮೊ: 9448043569, 8296408068 ಗೆ ಸಂಪರ್ಕಿಸಲು ಸಂಘದ ಕಾರ್ಯದರ್ಶಿ ಶ್ರೀನಿವಾಸ ಕೆ. ಜೋಷಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ** : 2025–26ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ವತಿಯಿಂದ ವಿಕಲಚೇತನರ ವಿವಾಹ ಪ್ರೋತ್ಸಾಹಧನ ಯೋಜನೆಯಡಿ (ವಿಕಲಚೇತನ ವ್ಯಕ್ತಿಗಳನ್ನು ವಿವಾಹವಾಗುವ ಸಾಮಾನ್ಯ ವ್ಯಕ್ತಿಗಳಿಗೆ ನೀಡುವ ಪ್ರೋತ್ಸಾಹಧನ), ನಿರಾಮಯ ಯೋಜನೆಯಡಿ (ಬುದ್ದಿಮಾಂಧ್ಯ, ಸೆರ್‌ಬ್ರಲ್ ಪಾಲ್ಸಿ, ಆಟಿಸಂ & ಬಹುವಿಧ ವಿಕಲಚೇತನರಿಗೆ) ಹಾಗೂ ಶುಲ್ಕ ಮರುಪಾವತಿ ಯೋಜನೆಯಡಿ (ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ,

ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ, ಭೋದನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಪ್ರವೇಶ ಶುಲ್ಕ, ಗ್ರಂಥಾಲಯ ಶುಲ್ಕಗಳನ್ನು ಸರ್ಕಾರ ನಿಗದಿಪಡಿಸಿರುತ್ತಾರೆ) ಸದರಿ ಯೋಜನೆಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ಯೋಜನೆಗಳಡಿ ಜಿಲ್ಲೆಯ ಅರ್ಹ ವಿಕಲಚೇತನರು ಸೌಲಭ್ಯವನ್ನು ಪಡೆಯಲು ಸೆಪ್ಟೆಂಬರ್ 10 ರಂದು ಸಂಜೆ 5:30 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದೃಢೀಕೃತ

ದಾಖಲಾತಿಗಳೊಂದಿಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ವಿ.ಆರ್.ಡಬ್ಲ್ಯೂ , ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿರುವ ಯು.ಆರ್.ಡಬ್ಲ್ಯೂ ಹಾಗೂ ತಾಲ್ಲೂಕ ಪಂಚಾಯತಿಯಲ್ಲಿರುವ ಎಮ್.ಆರ್.ಡಬ್ಲ್ಯೂ ಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಂಯೋಜಕರು – 9606151149 ಹಾಗೂ ಗದಗ ಜಿಲ್ಲೆಯ ತಾಲ್ಲೂಕ ಪಂಚಾಯತಿ ವ್ಯಾಪ್ತಿಯಲ್ಲಿರುವ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು

; ತಾಲ್ಲೂಕ ಪಂಚಾಯತ, ಗದಗ – 8867556465, ; ತಾಲ್ಲೂಕ ಪಂಚಾಯತ, ರೋಣ/ಗಜೇಂದ್ರಗಡ – 9741615926 ; ತಾಲ್ಲೂಕ ಪಂಚಾಯತ, ಮುಂಡರಗಿ 9611922445 ; ತಾಲ್ಲೂಕ ಪಂಚಾಯತ, ಶಿರಹಟ್ಟಿ/ಲಕ್ಷೇಶ್ವರ – 8951128679 ; ತಾಲ್ಲೂಕ ಪಂಚಾಯತ, ನರಗುಂದ – 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372–220419 ಮೂಲಕ ಸಂಪರ್ಕಿಸಬಹುದಾಗಿದೆ.

## ಚಾವಣಿಯಷ್ಟೇ ಅಲ್ಲ, ನೆಲದ ಮೇಲೂ 'ಸೌರಶಕ್ತಿ'

### ವಿದ್ಯುತ್ ಮೇಲಿನ ಹೊರೆ ತಗ್ಗಿಸುವ ದಾರಿ ಬಳಸಿ ಉಳಿದರೆ ಗ್ರಿಡ್‌ಗೆ ಮಾರಾಟ



**ಬೆಂಗಳೂರು:** ಅಪಾರ್ಟ್‌ಮೆಂಟ್‌ನಲ್ಲಿ–ರುವ ಫ್ಲಾಟ್‌ಗೆ ಸೌರವಿದ್ಯುತ್ ಅಳವಡಿ–ಸಿಕೊಳ್ಳ ಬೇಕು. ಆದರೆ, ಚಾವಣಿಯಲ್ಲಿ ಸೌರಫಲಕ ಗಳನ್ನು ಅಳವಡಿಸಲು ಸಾಕಷ್ಟು ಜಾಗವಿಲ್ಲ, ಏನ್ಮಾಡೋದು?

ಚಿಂತಿಸಬೇಡಿ. ಇನ್ನು ಮುಂದೆ ಚಾವಣಿಯಷ್ಟೇ ಅಲ್ಲ, ಮನೆಯ ಅಂಗಳ, ಕಾರು ಪಾರ್ಕಿಂಗ್ ತಾಣ, ಗೋಡೆಗಳು ಅಷ್ಟೇ ಅಲ್ಲದೇ ಚಾವಣಿ ಲಭ್ಯವಿರುವ ಬೇರೆ ಕಟ್ಟಡಗಳ ಮೇಲೂ ಸೌರಫಲಕಗಳನ್ನು ಅಳವಡಿಸಿ, ವಿದ್ಯುತ್ ಉ ತ್ಪಾ ದಿ ಸ ಬ ಹು ದು ( ನೆಲದ ಮೇಲಾದರೆ, ನೆಲದಿಂದ 8 ಅಡಿ ಎತ್ತರದಲ್ಲಿ ಫಲಕ ಅಳವಡಿಸಬೇಕು). ಗ್ರಾಹಕರು ವಿದ್ಯುತ್ ಅನ್ನು ಬಳಸಿ, ಉಳಿದರೆ ಗ್ರಿಡ್‌ಗೆ ಮಾರಾಟ ಮಾಡಬಹುದು. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ(ಕೆಇಆರ್‌ಸಿ) ಇಂಥದ್ದೊಂದು ಅವಕಾಶವನ್ನು ಕಲ್ಪಿಸಿ, ಜುಲೈ 9ರಂದು ಆದೇಶ ಹೊರಡಿಸಿದೆ. ಇದಕ್ಕಾಗಿ ಹಿಂದೆ ಇದ್ದ ಚಾವಣಿ ಸೌರ ವಿದ್ಯುತ್ ಯೋಜನೆಯ (ಎಸ್‌ಆರ್‌ಟಿಪಿವಿ) ಪರಿಷ್ಕರಿಸಿ, ಸೋಲಾರ್ ನಿಯಮಗಳನ್ನು ಡಿಸ್ಟ್ರಿಬ್ಯೂಟೆಡ್ ಫೋಟೊವೊಲ್ಟಾಯಿಕ್ (ಡಿಎಸ್‌ಪಿವಿ) ಎಂದು ನಾಮಕರಣ ಮಾಡಿದೆ. ಮರು

ಯೋಜನೆಯ ಅನ್ವಯ ಎಲ್ಲಿ ಸೌರವಿದ್ಯುತ್ ಬಳಸುತ್ತೀರೊ, ಅಲ್ಲಿಯೇ ಸೌರಫಲ–ಕಗಳನ್ನು ಅಳವಡಿಸಿ ವಿದ್ಯುತ್ ಉತ್ಪಾ–ದಿಸಬೇಕಿತ್ತು. ಆದರೆ, ಡಿಎಸ್‌ಪಿವಿ ಯೋಜನೆಗಳಲ್ಲಿ ವರ್ಚುವಲ್ ನೆಟ್ (ಗಿಓಒ) ಮತ್ತು ಗ್ರೂಪ್ ನೆಟ್ ಮೀಟರಿಂಗ್ (ಉಓಒ) ವ್ಯವಸ್ಥೆಯನ್ನು ಆಯೋಗ ಅನುಮತಿಸಿದ್ದು, ಚಾವಣಿಯಲ್ಲದೇ ಬೇರೆ ಕಡೆಯೂ ಸೌರಫಲಕ ಅಳವಡಿಸಿ ವಿದ್ಯುತ್ ಉತ್ಪಾದಿಸಬಹುದು.

ವಿಎನ್‌ಎಂ ಅಡಿಯಲ್ಲಿ ಒಬ್ಬರಿಗಿಂತ ಹೆಚ್ಚು ಗ್ರಾಹಕರು ತಮ್ಮ ಎಸ್ಕಾಂ ವ್ಯಾಪ್ತಿಯಲ್ಲಿ ಲಭ್ಯವಿರುವ ಜಾಗದಲ್ಲಿ ಸೌರಫಲಕಗಳನ್ನು ಅಳವಡಿಸಿ, ವಿದ್ಯುತ್ ಉತ್ಪಾದಿಸಬಹುದು. ಅಲ್ಲಿ ಉತ್ಪಾದನೆಯಾಗುವ ವಿದ್ಯುತ್ ಅನ್ನು ಪೂರ್ಣ ಪ್ರಮಾಣದಲ್ಲಿ ಗ್ರಿಡ್‌ಗೆ ಕೊಡಬೇಕು. ಉತ್ಪಾದಿತ ವಿದ್ಯುತ್‌ನಿಂದ ಗ್ರಾಹಕರು ತಮ್ಮ ಮನೆಗಳಲ್ಲಿ ಬಳಸಿದ ವಿದ್ಯುತ್‌ಗೆ ಹೊಂದಾಣಿಕೆ ಮಾಡುತ್ತಾರೆ. ಇದರಲ್ಲಿ ಹೆಚ್ಚುವರಿ ವಿದ್ಯುತ್ ಉಳಿದಿದ್ದರೆ, ಅದಕ್ಕೆ ಬೆಸ್ಕಾಂ ಹಣ ನೀಡುತ್ತದೆ. ಈ ಯೋಜನೆಗೆ ಸೇರುವ ಮುನ್ನ ಗ್ರಾಹಕರು ಉತ್ಪಾದಿತ ವಿದ್ಯುತ್ ಎಷ್ಟು ಶೇಕಡಾವಾರು ಹಂಚಿಕೆಯಾಗಬೇಕು ಎಂದು ಒಪ್ಪಂದ ಮಾಡಿಕೊಂಡು, ಅದನ್ನು ಬೆಸ್ಕಾಂಗೆ ಸಲ್ಲಿಸಿರಬೇಕು. ಆ ಪ್ರಕಾರ ಬೆಸ್ಕಾಂನವರು ಉತ್ಪಾದನೆಯಾದ ವಿದ್ಯುತ್ ಅನ್ನು ಗ್ರಾಹಕರ ಮನೆಯ ವಿದ್ಯುತ್ ಬಿಲ್‌ಗಳಿಗೆ ಹೊಂದಾಣಿಕೆ ಮಾಡುತ್ತಾರೆ.

ವ್ಯಾಪ್ತಿಯ ಗೃಹ ಬಳಕೆದಾರರು, ಹೌಸಿಂಗ್ ಸೊಸೈಟಿಗಳ ಸಮೂಹ, ಚಾರಿಟಬಲ್ ಟ್ರಸ್ಟ್‌ಗಳು ನಡೆಸುವ ಸಂಸ್ಥೆಗಳು, ಸರ್ಕಾರಿ ಶಾಲೆಗಳು, ಸ್ಥಳೀಯ ಸಂಸ್ಥೆಗಳ ಕಟ್ಟಡಗಳು, ಸರ್ಕಾರಿ ಕಟ್ಟಡಗಳಷ್ಟೇ ಅರ್ಹವಾಗಿರುತ್ತವೆ.

> ನೆಲದ ಮೇಲೂ ಸೌರಫಲಕ ಅಳವಡಿಸಲು ಅನುಮತಿ ನೀಡಿರುವುದರಿಂದ, ಸೌರವಿದ್ಯುತ್ ಉತ್ಪಾದನೆ ಹೆಚ್ಚಿಸಲು ಸಹಾಯವಾಗುತ್ತದೆ. ಇದರಿಂದ ಎಸ್ಕಾಂ ಪೂರೈಸುವ ವಿದ್ಯುತ್ ಮೇಲಿನ ಅವಲಂಬನೆ ತಗ್ಗುತ್ತದೆ. ಇದು ಪರೋಕ್ಷವಾಗಿ ಇಂಧನ ಕ್ಷೇತ್ರಕ್ಕೆ ಸಹಕಾರಿಯಾಗುತ್ತದೆ
>
> – ಬೆಸ್ಕಾಂ ಅಧಿಕಾರಿಗಳು

## ನಿಗಮದಿಂದ ತರಬೇತಿ ಕಾರ್ಯಕ್ರಮ

**ದಾವಣಗೆರೆ:** ಸಮಾಜ ಕಲ್ಯಾಣ ಇಲಾಖೆ, ತಾಂಡ ಅಭಿವೃದ್ದಿ ನಿಗಮದ ವತಿಯಿಂದ ಸಂತಸೇವಾ ಲಾಲ್ ಜನ್ಮಸ್ಥಳ ಭಾಯಾಗಡ್, ಸೂರಗೊಂಡನಕೊಪ್ಪ, ಬಂಜಾರ ಸಮುದಾಯದ ವಿದ್ಯಾವಂತ ಯುವಕ, ಯುವತಿಯರಿಗೆ 2 ದಿನಗಳ ಸ್ವಯಂ ಉದ್ಯೋಗ, ವೃತ್ತಿ ಮಾರ್ಗದರ್ಶನ, ಬಂಜಾರ ಸಂಸ್ಕೃತಿ ಮತ್ತು ಸಂವಿಧಾನದ ಕುರಿತು ಅರಿವು ಹಾಗೂ ಜಾಗೃತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ದ್ವಿತೀಯ ಪಿಯುಸಿ ಹಾಗೂ ಮೇಲ್ಪಟ್ಟು ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿಯನ್ನು ಆಗಸ್ಟ್ 30 http://docs.google.com/form/d/1sZ4W5UP2qo9ZUMBmrTH4cyW6kU5XuCZIG60ayS8/edit ನಲ್ಲಿ ಅರ್ಜಿ ಸಲ್ಲಿಸಬಹುದು.

## 11ನೇ ರಾಷ್ಟ್ರೀಯ ಕೈಮಗ್ಗ ದಿನ

**ದಾವಣಗೆರೆ:** ಆಗಸ್ಟ್ 7 ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರಾ ಆಡಿಟೋರಿಯಂನಲ್ಲಿ 11ನೇ ರಾಷ್ಟ್ರೀಯ ಕೈ ಮಗ್ಗ ದಿನ ಆಯೋಜಿಸಲಾಗಿದೆ. ಗಣಿ ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಡಾ:ಶಾಮನೂರು ಶಿವಶಂಕರಪ್ಪ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಕೈಮಗ್ಗ ಮತ್ತು ಗೌರವ ಅತಿಥಿಗಳಾಗಿ ಪಾಲ್ಗೋಳವರೆಂದು ಪ್ರಕಟಣೆ ತಿಳಿಸಿದೆ.

## ನಿಧನ ಸುದ್ದಿಗಳು

### ಚಂದ್ರಪ್ಪ ಅಸಾದಿ ನಿಧನ

**ನ್ಯಾಮತಿ:** ತಾಲ್ಲೂಕಿನ ಬೆಳಗುತ್ತಿ ಗ್ರಾಮದ . ನಾಟಿ ವೈದ್ಯ ಚಂದ್ರಪ್ಪ (80) ಅನಾರೋಗ್ಯದಿಂದ ಸೋಮವಾರ ನಿಧನರಾದರು. ಇವರಿಗೆ ಪುತ್ರ, ಶಿಕ್ಷಕ ಎ.ಕೆ. ಶಿವಕುಮಾರ ಮತ್ತು ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ನಡೆಯಿತು.

### ಸಾಸ್ವೆಹಳ್ಳಿ: ವೀರಮ್ಮ ನಿಧನ

**ಸಾಸ್ವೆಹಳ್ಳಿ** : ಸಮೀಪದ ಬೀರಗೊಂಡನಹಳ್ಳಿ ಗ್ರಾಮದ ವೀರಮ್ಮ ಕುಂಭದ ಗೌಡ್ರು (96) ಸೋಮವಾರ ಸಂಜೆ ನಿಧನರಾದರು. ಇವರಿಗೆ ಐವರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಮಂಗಳವಾರ ನಡೆಯಿತು.

# ಶೀಘ್ರ ಪತ್ತೆ ಸಂಪೂರ್ಣ ಚಿಕಿತ್ಸೆಯಿಂದ ಮಲೇರಿಯಾ ಕೊನೆಗಾಣಿಸಬಹುದು : ಡಾ.ಬಿ.ವಿ.ಗಿರೀಶ್

**ಚಿತ್ರದುರ್ಗ :** ಮಲೇರಿಯಾ ಒಂದು ಪರಾವಲಂಬಿ ಸೂಕ್ಷ್ಮಾಣು ಜೀವಿಯಿಂದ ಬರುತ್ತದೆ. ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆ ಕಚ್ಚುವುದರಿಂದ ರೋಗ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಶೀಘ್ರ ಪತ್ತೆ ಸಂಪೂರ್ಣ ಚಿಕಿತ್ಸೆಯಿಂದ ಮಲೇರಿಯಾ ಕೊನೆಗಾಣಿಸಬಹುದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಅಧಿಕಾರಿ ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಖಾಸಗಿ ಆಸ್ಪತ್ರೆಯ ವೈದ್ಯಾಧಿಕಾರಿಗಳು, ಪ್ರಯೋಗಶಾಲ ತಂತ್ರಜ್ಞಾಧಿಕಾರಿಗಳಿಗೆ ಮಲೇರಿಯಾ ಕುರಿತು ಅಡ್ವಕೆಸಿ ಕಾರ್ಯಗಾರದಲ್ಲಿ ಲಾರ್ವ ಮತ್ತು ಗಪ್ಪಿ ಗಂಭೂಸಿಯ ಮೀನುಗಳ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಲೇರಿಯಾ ರೋಗಕ್ಕೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನಿಗದಿತ ಚಿಕಿತ್ಸೆ ಲಭ್ಯವಿದೆ. ಮಲೇರಿಯಾದಲ್ಲಿ ನಾಲ್ಕು ಪ್ರಭೇದಗಳಿದ್ದು, ರಾಜ್ಯದಲ್ಲಿ ಪಿವಿ ಮತ್ತು ಪಿಎಫ್ ಮಲೇರಿಯಾ ಪ್ರಭೇದಗಳು ಸದ್ಯದಲ್ಲಿ ಕಂಡುಬರುತ್ತಿದ್ದು, ಎಂಡಮಿಕ್ ಪ್ರದೇಶದಲ್ಲಿ ಭೇಟಿ ನೀಡಿ ಹಿಂತಿರುಗಿದ ವ್ಯಕ್ತಿಗೆ ಜ್ವರ ಇದೆ ಎಂದು ಆಸ್ಪತ್ರೆಗೆ ಬಂದರೆ ರೋಗಿಗೆ ಸಂಶಯಾಸ್ಪದ ಮಲೇರಿಯಾ ಎಂದು ಪರಿಗಣಿಸಿ ರಕ್ತ ಪರೀಕ್ಷೆ ಮಾಡುವುದು, ರೋಗದೃಢಪಟ್ಟರೆ ರಾಷ್ಟ್ರೀಯ ಮಾರ್ಗಸೂಚಿಯಂತೆ ನಿಗದಿತ ಔಷಧೋಪಚಾರ ಮಾಡಿ ರೋಗ ನಿಯಂತ್ರಣ ಮಾಡಬೇಕೆಂದರು.

ಕೀಟಜನ್ಯ ರೋಗಗಳಿಗೆ ಸಂಬಂಧಿಸಿದಂತೆ ಖಾಸಗಿ ಆಸ್ಪತ್ರೆಗೆ ಬಂದಿರುವ ರೋಗಿಗಳಿಗೆ ಸರ್ಕಾರದ ಮಾರ್ಗಸೂಚಿಯಂತೆ ಪರೀ–ಕ್ಷೆಗೆ ಮತ್ತು ಚಿಕಿತ್ಸೆಗೆ ಶುಲ್ಕ ವಿಧಿಸಬೇಕೆಂದು ತಿಳಿಸಿದರು.




ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಮಾತನಾಡಿ, ಮಲೇರಿಯಾ ನಿರ್ಮೂಲನೆಗೆ ಖಾಸಗಿ ಆಸ್ಪತ್ರೆ ವೈದ್ಯರು ಮತ್ತು ಪ್ರಯೋಗ ಶಾಲಾ ತಂತ್ರಜ್ಞಾಧಿಕಾರಿಗಳ ಸಹಕಾರ ತುಂಬಾ ಅತ್ಯಗತ್ಯ ಎಲ್ಲರೂ ಒಂದಾಗಿ ಮಲೇರಿಯ ತೊಲಗಿಸೋಣ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾಹಿತಿ ನೀಡುತ್ತಾ, ಚಳಿ ಜ್ವರ, ತಲೆನೋವು, ವಾಂತಿ, ಮೈ ಕೈ ಬೆವರುವುದು, ಮಲೇರಿಯಾ ರೋಗದ ಲಕ್ಷಣಗಳು, ಯಾವುದೇ ಜ್ವರ ಇರಲಿ ರಕ್ತಪರಿಕ್ಷೆ ಮಾಡಿಸಿ, 2021ರಿಂದ ಚಿತ್ರದುರ್ಗ ಜಿಲ್ಲೆಯಲ್ಲಿ ಯಾವುದೇ ಮಲೇರಿಯಾ ಪ್ರಕರಣಗಳು ಕಂಡುಬಂದಿರುವುದಿಲ್ಲ. ಆದರೆ 2027 ಕ್ಕೆ ಮಲೇರಿಯಾ ಮುಕ್ತ ದೇಶವನ್ನಾಗಿಸಲು ದೃಢಪಟ್ಟ ರೋಗಿಗೆ ನಿಗದಿತ ಚಿಕಿತ್ಸೆ ನೀಡುವ ಮುಖಾಂತರ ಮುಂಜಾಗ್ರತೆ ವಹಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ತುರ್ತಾಗಿ ರೋಗಿಯ ವಿಳಾಸದೊಂದಿಗೆ ಮಾಹಿತಿ ನೀಡಬೇಕೆಂದರು. ಇದರಿಂದ ರೋಗ ನಿಯಂತ್ರಣ ಕ್ರಮ ಕೈಗೊಳ್ಳಲು ಅನುಕೂಲವೆಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ರೋಗ ತಡೆಗೆ ಪಾಲಿಸಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ತಿಳಿಸುತ್ತಾ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಆಂಜನೇಯ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಕೆಂಚಪ್ಪ, ವಿನಯ್ ಸಿಂಧ್ಯಾ , ಸಂದೀಪ, ಮಹಾಂತೇಶ, ಸಿಎಚ್‌ಒ ಸುಧಾ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಮಲ್ಲಮ್ಮ, ನಾಗರತ್ನಮ್ಮ, ಆಶಾ ಕಾರ್ಯಕರ್ತೆಯರು ಮತ್ತು ಸಿಬ್ಬಂದಿಗಳು ಹಾಜರಿದ್ದರು.

## ಆ.9 ಶಾಲಾ ಅಭಿವೃದ್ಧಿ ಕಾಮಗಾರಿ ಹಸ್ತಾಂತರ

**ದಾವಣಗೆರೆ:** ಕೇರ್ ಟ್ರಸ್ಟ್ ವತಿಯಿಂದ ಜಿಲ್ಲೆಯ ಹರಿಹರ ತಾಲ್ಲೂಕಿನ ಗುತ್ತೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 24 ಲಕ್ಷ ವೆಚ್ಚದಲ್ಲಿ ನಿರ್ಮಿಸಿರುವ ನಾಲ್ಕು ತರಗತಿಗಳ ಕೊಠಡಿಗಳು ಸೇರಿ ನಡೆಸಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಆ.9 ರಂದು ಶಾಲೆಗೆ ಹಸ್ತಾಂತರಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ.

ಟ್ರಸ್ಟ್ ನಿಂದ ನಾಲ್ಕು ತರಗತಿ ಕೊಠಡಿಗಳು ಮತ್ತು ಅಡಿಗೆಮನೆ ಬ್ಲಾಕ್‌ಗಾಗಿ ಹೊಸ ಛಾವಣಿ, ಗೋಡೆ ಮತ್ತು ಮೇಲ್ಛಾವಣಿ ಕಾಮಗಾರಿ, 8 ಶೌಚಾಲಯಗಳು ಮತ್ತು 6 ಯುರಿನಲ್‌ಗಳನ್ನು ಹೊಂದಿರುವ ಹೊಸ ಶೌಚಾಲಯ ಬ್ಲಾಕ್, ಸ್ಟೈನ್‌ಲೆಸ್ ಸ್ಟೀಲ್‌ನಿಂದ ತಯಾರಿಸಿದ 10 ಬೇಸನ್ ಹ್ಯಾಂಡ್ ವಾಶ್, ಕಟ್ಟಡದ ಸಂಪೂರ್ಣ ಬಣ್ಣ ಹಚ್ಚುವಿಕೆ, ಅಡಿಗೆಮನೆಗಾಗಿ ಮೂಲ ಪೈಪ್‌ಲೈನ್ ಕಾರ್ಯ ನಡೆಸಲಾಗಿದ್ದು, ಅಂದು ಬೆಳಿಗ್ಗೆ 10 ಗಂಟೆ–ಗೆ ಶಾಲೆಗೆ ಹಸ್ತಾಂತರಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಟ್ರಸ್ಟ್ ತಿಳಿಸಿದೆ.

# ಸರಳ ಸಜ್ಜನಿಕೆ ವ್ಯಕ್ತಿತ್ವದ ರಾಜಕಾರಣಿ ಡಾ. ಜಿ.ಪರಮೇಶ್ವರ್ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಗೃಹ ಸಚಿವರಾಗಿ ಮೂರನೇ ಬಾರಿಗೆ ಹುದ್ದೆ ನಿಭಾಯಿಸುತ್ತಿರುವ ಪ್ರಾಮಾಣಿಕ, ಸರಳ ಸಜ್ಜನಿಕೆಯ ರಾಜಕಾರಣಿ ಡಾ. ಜಿ. ಪರಮೇಶ್ವರ್‌ರವರಿಗೆ ಶಾಸಕ ಹೆಚ್.ಡಿ. ತಮ್ಮಯ್ಯ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದರು.

ಅವರು ಇಂದು ನಗರದ ಗಣಪತಿ ದೇವಸ್ಥಾನದಲ್ಲಿ ಬ್ಲಾಕ್ ಕಾಂಗ್ರೆಸ್ ಹಾಗೂ ಎಸ್‌ಸಿ ಸೆಲ್



ಘಟಕದ ನೇತೃತ್ವದಲ್ಲಿ ಏರ್ಪಡಿಸಲಾಗಿದ್ದ ಗೃಹಸಚಿವ ಡಾ. ಜಿ. ಪರಮೇಶ್ವರ್‌ರವರ 74ನೇ ಹುಟ್ಟುಹಬ್ಬದ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಿ ಶುಭ ಹಾರೈಸಿದರು.

ಮುಂದಿನ ದಿನಗಳಲ್ಲಿ ಸಚಿವರಿಗೆ ಆಯಸ್ಸು, ಆರೋಗ್ಯ, ಹೆಚ್ಚಿನ ಅಧಿಕಾರ ಸಿಗಲಿ ಎಂದು ಕ್ಷೇತ್ರದ ಜನರು ಮತ್ತು ಕಾರ್ಯಕರ್ತರ ಪರವಾಗಿ ಹಾರೈಸಿದರು.

ಡಾ. ಜಿ. ಪರಮೇಶ್ವರ್ ಅವರು ಕೇವಲ ದಲಿತ ಸಮುದಾಯಕ್ಕೆ ಸೀಮಿತರಾಗದೇ ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷಗಳ ಕಾಲ ಸೇವೆ ಸಲ್ಲಿಸಿದ ಪರಿಣಾಮ 2013 ರಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಶ್ರಮಿಸಿದ್ದರು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ ಮಂಜೇಗೌಡ ಮಾತನಾಡಿ, ಭ್ರಷ್ಟಾಚಾರ ರಹಿತ ಆಡಳಿತ ನೀಡುತ್ತಿರುವ ಸರಳ, ಸೌಮ್ಯ ರಾಜಕಾರಣಿ ಡಾ. ಜಿ. ಪರಮೇಶ್ವರ್‌ರವರಿಗೆ ಆಯಸ್ಸು, ಆರೋಗ್ಯದ ಜೊತೆಗೆ ರಾಜಕೀಯದಲ್ಲಿ ಉನ್ನತ ಹುದ್ದೆ ಅಲಂಕರಿಸಲಿ ಎಂದು ಶುಭಹಾರೈಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಹಿರೇಮಗಳೂರು ರಾಮಚಂದ್ರ, ಮಲ್ಲೇಶ್‌ಸ್ವಾಮಿ ಮತ್ತಿತರರು ಶುಭ ಹಾರೈಸಿದರು.

## ಮಸೀದಿಯಲ್ಲಿ ಭಾರೀ ಅವ್ಯವಹಾರ : ಕ್ರಮಕ್ಕೆ ವಕ್ಫ್‌ಗೆ ಮಂಡಳಿಯ ಆಡಳಿತಾಧಿಕಾರಿಗಳಿಗೆ ದೂರು

**ಚಿಕ್ಕಮಗಳೂರು:** ಅಜ್ಜಂಪುರದ ಜಾಮಿಯ ಮಸೀದಿಯಲ್ಲಿ ಕೋಟ್ಯಾಂತರ ರೂ.ಗಳ ಅವ್ಯವಹಾರ ನಡೆಸಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಸೀದಿ ಮಾಜಿ ಸದಸ್ಯರು, ಸಮಾಜದ ಮುಖಂಡರುಗಳು ಜಿಲ್ಲಾ ವಕ್ಫ್ ಮಂಡಳಿಯ ಆಡಳಿತಾಧಿಕಾರಿಗಳಿಗೆ ಈಚೆಗೆ ದೂರು ಸಲ್ಲಿಸಿದ್ದಾರೆ. ಈ ವೇಳೆ ಸಮಾಜದ ಮುಖಂಡರುಗಳು ಮಾತನಾಡಿ ಕಳೆದ 25 ವರ್ಷಗಳಿಂದ ಒಬ್ಬರೇ ಅಧ್ಯಕ್ಷರಾಗಿ ಸ್ಥಾನ ಗಿಟ್ಟಿಸಿಕೊಂಡಿರುವ ವ್ಯಕ್ತಿ ಮಸೀದಿ ಆಸ್ತಿಗಳ ಬಾಬ್ತು ಕೋಟ್ಯಂತರ ರೂಪಾಯಿಗಳ ಅವ್ಯವಹಾರ ನಡೆಸಿಕೊಂಡು ಬಂದಿದ್ದಾರೆ. ಅಲ್ಲದೇ ಜಮಾತ್ ಮತ್ತು ಸಮುದಾಯದ ಗ್ರಾಮಸ್ಥರ ವಾಸಿಗಳ ಸಮ್ಮುಖದಲ್ಲಿ ಯಾವುದೇ ರೀತಿಯ ಲೆಕ್ಕಪತ್ರಗಳನ್ನು ಪ್ರಕಟಿಸಿರುವುದಿಲ್ಲ ಎಂದು ತಿಳಿಸಿದ್ದಾರೆ.

ಮಸೀದಿ, ದರ್ಗಾ, ಕಬರಸ್ಥಾನ ಹೆಸರಿನಲ್ಲಿ ವಕ್ಫ್ ಮಂಡಳಿಯಿಂದ ಲಕ್ಷಾಂತರ ರೂಗಳ ಅನುದಾನ ಮಂಜೂರು ಮಾಡಿಸಿಕೊಂಡು ದುರ್ಬಳಕೆ ಮಾಡಲಾಗಿದೆ. ಜಾಮಿಯ ಮಸೀದಿ ಅಧೀನದಲ್ಲಿರುವ ಶಾದಿಮಹಲ್ ಜೀರ್ಣೋದ್ಧಾರ ಮತ್ತು ನವೀಕರಣ ಕಾಮಗಾರಿ ಎಂದು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಿಂದ ಲಕ್ಷಾಂತರ ಅನುದಾನ ಪಡೆದು ದುರ್ಬಳಕೆ ಮಾಡಿದ್ದಾರೆ ಎಂದು ದೂರಿದ್ದಾರೆ. ಈ ವಿರುದ್ಧ ಚಿಕ್ಕಮಗಳೂರು ಜಿಲ್ಲಾ ವಕ್ಫ್ ಸಲಹಾ ಸಮಿತಿಗೆ ಲೆಕ್ಕಪತ್ರ ಸಂಬಂಧ ಅಡಿಟ್ ಮಾಡಿಸಲು ಮನವಿ ಸಲ್ಲಿಸಿದ್ದು, ಇದನ್ನೇ ನೆಪವಾಗಿಸಿಕೊಂಡು ರಾಜಕೀಯ ಪ್ರಭಾವಿಗಳ ಮತ್ತು ಪೊಲೀಸ್ ಅಧಿಕಾರಿಗಳ ಕುಮ್ಮಕ್ಕು ಪಡೆದು ಅಮಾಯಕರ ಮೇಲೆ ಸುಳ್ಳು ಪ್ರಕರಣ ದಾಖಲಿಸಿ ಸುಮಾರು 18 ದಿನಗಳ ಜೈಲುವಾಸ ಅನುಭವಿಸುವಂತೆ ದ್ವೇಷ ಸಾಧಿಸಿದ್ದಾರೆ ಎಂದಿದ್ದಾರೆ.

## ಪಿಎಸ್‌ಐ ದರ್ಪಕ್ಕೆ ಶಾಶ್ವತ ಕಿವುಡನಾದ ಬಾಡಿಗೆದಾರ! ಪೊಲೀಸ್ ಆಯುಕ್ತರಿಗೆ ದೂರು



**ಬೆಂಗಳೂರು:** ನಗರದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಒಬ್ಬರ ದರ್ಪಕ್ಕೆ ಬಾಡಿಗೆದಾರ ವ್ಯಕ್ತಿಯೋರ್ವ ಶಾಶ್ವತವಾಗಿ ಕಿವುಡನಾಗಿರುವ ಆರೋಪ ಕೇಳಿಬಂದಿದೆ.

ಬೇಗೂರಿನಲ್ಲಿ ಈ ಘಟನೆ ನಡೆದಿದ್ದು, ಕಖಖ ಪುನೀತ್ ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. ಮನೆ ಖಾಲಿ ಮಾಡುವ ವಿಚಾರಕ್ಕೆ ಬಾಡಿಗೆದಾರ ಉದಯ್ ಮೇಲೆ ಪುನೀತ್ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ಪಿಎಸ್‌ಐ ಕಪಾಳ ಮೋಕ್ಷಕ್ಕೆ ಉದಯ್‌ಗೆ ಕಿವಿ ಕೇಳಿಸದೆ ಶ್ರವಣ ದೋಷವಾಗಿದೆ ಎಂಬುದು ವೈದ್ಯಕೀಯ ವರದಿಯಲ್ಲಿ ದೃಢವಾಗಿದೆ. ಉದಯ್ ಪರ ವಕೀಲರು ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ.

ಸಿವಿಲ್ ವ್ಯಾಜ್ಯದಲ್ಲಿ ಪೊಲೀಸರು ಮದ್ಯ ಪ್ರವೇಶ ಮಾಡಿದ್ದು, ಉದಯ್‌ಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ಮಾಡಲಾಗಿದೆ ಎಂದು ಆರೋಪಿಸಿ ದೂರು ನೀಡಲಾಗಿದೆ. ವೈದ್ಯಕೀಯ ಪರೀಕ್ಷೆ ವೇಳೆ ಎಡಕಿವಿ ಸಂಪೂರ್ಣ ಶ್ರವಣ ದೋಷವಾಗಿರುವ ವರದಿ ಕೂಡ ದೂರಿನ ಜೊತೆ ಸಲ್ಲಿಸಲಾಗಿದೆ.

ಹಿರಿಯ ಅಧಿಕಾರಿಗಳಿಗೆ ದೂರು ನೀಡಿದರೂ ಪಿಎಸ್‌ಐ ಮೇಲೆ ಕ್ರಮ ಆಗದ ಹಿನ್ನೆಲೆಯಲ್ಲಿ ಉದಯ್ ನ್ಯಾಯಕ್ಕಾಗಿ ಕೋರ್ಟ್ ಮೆಟ್ಟಿಲೇರಲು ಮುಂದಾಗಿದ್ದಾರೆ.

# ಉತ್ತಮ ಸಮಾಜ ನಿರ್ಮಾಣಕ್ಕೆ ಆದರ್ಶಗಳೇ ದಾರಿದೀಪ : ರಂಭಾಪುರಿ ಶ್ರೀ

**ಬಾಳೆಹೊನ್ನೂರು:** ಸತ್ಯ, ಶಾಂತಿ ಎಲ್ಲರ ಬಾಳಿಗೆ ಅಗತ್ಯ. ಸತ್ಯ ಶುದ್ಧವಾದ ದಾರಿಯಲ್ಲಿ ನಡೆದಾಗ ಜೀವನ ಮೌಲ್ಯ ಸಂವರ್ಧಿಸುತ್ತದೆ. ಆದರ್ಶ ಸಮಾಜ ನಿರ್ಮಾಣಕ್ಕೆ ಮೌಲ್ಯಾಧಾರಿತ ಚಿಂತನೆಗಳು ದಾರಿದೀಪವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರಾವಣ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂತೋಷ ಅನ್ನುವುದು ಹಣ, ಆಸ್ತಿ–ಅಂತಸ್ತಿನಲ್ಲಿ ಇಲ್ಲ. ಸಂತೋಷ ನಾವು ಕಾಣುವ ದೃಷ್ಟಿಯಲ್ಲಿದೆ. ಪ್ರಕೃತಿಯ ಮಡಿಲಲ್ಲಿ ಅಮ್ಮನ ಮಡಿಲಲ್ಲಿ ಇದೆ. ಎಲ್ಲಾ ಬಿದಿರುಗಳು ಕೊಳಲಾಗುವುದಿಲ್ಲ. ಕೆಲವರಿಗೆ ದೋಣಿಗಳಾಗುತ್ತವೆ. ಕೆಲವರಿಗೆ ಏಣಿಗಳಾಗುತ್ತವೆ. ಕೆಲವರಿಗೆ ಮನೆಗಳಾಗುತ್ತವೆ.



ಮನುಷ್ಯ ಜೀವನವು ಸಹ ಹಾಗೆ ಇರುತ್ತದೆ. ಅಕ್ಷರ ಕಲಿತ ವ್ಯಕ್ತಿ ಕೆಲವೊಮ್ಮೆ ಭ್ರಷ್ಟನಾಗಬಹುದು. ಆದರೆ, ಸಂಸ್ಕಾರ ಕಲಿತ ವ್ಯಕ್ತಿ ಎಂದಿಗೂ ಭ್ರಷ್ಟನಾಗುವುದಿಲ್ಲ. ಜಗತ್ತಿನಲ್ಲಿ ಎಲ್ಲರನ್ನು ಸಮಾನವಾಗಿ ಕಾಣುವುದು ಗಡಿಯಾರ ಮಾತ್ರ. ಬಡವರಿಗೂ ಶ್ರೀಮಂತರಿಗೂ ಒಂದೇ ರೀತಿ ಇರುತ್ತದೆ. ಇದು ಯಾರಿಗೂ ತಲೆ ಬಾಗುವುದಿಲ್ಲ. ವಿದ್ಯಾ, ಬುದ್ಧಿ, ಹೃದಯ, ಹೊಟ್ಟೆ, ನೆಲ, ಜಲ, ಅನ್ನ, ಗಾಳಿ, ಬೆಳಕು ಇವೆಲ್ಲವೂ ದೇವರು ಕೊಟ್ಟ ಕೊಡುಗೆ ಎಂಬುದನ್ನು ಯಾರೂ ಮರೆಯಬಾರದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಂವಿಧಾನದಲ್ಲಿ ನಿರೂಪಿಸಿದ್ದನ್ನು ಎಲ್ಲರೂ ನೆನಪಿಡುವ ಅವಶ್ಯಕತೆ ಇದೆಯೆಂದರು.

ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನದಲ್ಲಿ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯನ ದೈಹಿಕ ಬೆಳವಣಿಗೆಗೆ ನೀರು ಆಹಾರ ಮುಖ್ಯವಾಗಿರುವಂತೆ ಬದುಕಿನ ವಿಕಾಸಕ್ಕೆ ಮತ್ತು ಅಭಿವೃದ್ಧಿಗೆ ಧರ್ಮಾಚರಣೆ ಅಗತ್ಯವಾಗಿದೆ. ಒಳ್ಳೆಯ ನಡತೆ ಮನುಷ್ಯನ ಆಸ್ತಿ. ಒಳ್ಳೆಯ ಸಂಬಂಧ ಜೀವನದ ಆಸ್ತಿ. ಒಳ್ಳೆಯ ಪುಸ್ತಕ ಜ್ಞಾನದ ಆಸ್ತಿ. ಒಳ್ಳೆಯ ಮಾನವೀಯತೆ ಸಮಾಜದ ಆಸ್ತಿ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೆಲೆಯುಳ್ಳ ಮಾನವ ಜೀವನಕ್ಕೆ ಸಂಸ್ಕಾರ ಸಂಸ್ಕೃತಿಯಿತ್ತು ಸಕಲರನ್ನು ಉದ್ಧರಿಸಿದರೆಂದರು.

ಈ ಪವಿತ್ರ ಸಮಾರಂಭದಲ್ಲಿ ರಾಯಚೂರು ಕಿಲ್ಲಾ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು, ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮತ್ತು ಹೂವಿನ ಹಡಗಲಿ ಗವಿಮಠದ ಶಾಂತವೀರ ಸ್ವಾಮೀಜಿ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಆಗಸ್ಟ ತಿಂಗಳಿನ "ರಂಭಾಪುರಿ ಬೆಳಗು"ಮಾಸ ಪತ್ರಿಕೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆಗೊಳಿಸಿದರು.

# ಜೀವನದಲ್ಲಿ ಬದ್ಧತೆ ಮತ್ತು ಕಠಿಣ ಪರಿಶ್ರಮವಿರಬೇಕು : ರಘುಚಂದನ್

**ಹೊಳಲ್ಕೆರೆ :** ಜೀವನದಲ್ಲಿ ಏನಾದರೂ ಸಾಧನೆ ಮಾಡಬೇಕಾದರೆ ಬದ್ದತೆ ಮತ್ತು ಕಠಿಣ ಪರಿಶ್ರಮವಿರಬೇಕೆಂದು ಚಿತ್ರದುರ್ಗದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಹೇಳಿದರು.

ಪಟ್ಟಣದ ಸಂವಿಧಾನ ಸೌಧದಲ್ಲಿ ಕುವೆಂಪು ಟ್ರಸ್ಟ್ ಶಿವಗಂಗ ವತಿಯಿಂದ ಭಾನುವಾರ ಹಮ್ಮಿಕೊಳ್ಳಲಾಗಿದ್ದ ನೋಟ್‌ಬುಕ್, ಇತರೆ ಸಲಕರಣೆಗಳ ವಿತರಣೆ ಹಾಗೂ ಪ್ರತಿಭಾ ಪುರಸ್ಕಾರ. ಟೈಲರಿಂಗ್ ತರಬೇತಿ ಪಡೆದವರಿಗೆ ಪ್ರಶಸ್ತಿ ಪ್ರಮಾಣ ಪತ್ರ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.




ಕಳೆದ 24 ವರ್ಷಗಳಿಂದಲೂ ಕುವೆಂಪು ಟ್ರಸ್ಟ್ ಮಕ್ಕಳ ಏಳಿಗೆಗಾಗಿ ನಿರಂತರವಾಗಿ ಶ್ರಮಿಸುತ್ತಿರುವುದು ಕಮ್ಮಿ ಸಾಧನೆಯಲ್ಲ. ಜೀವನದಲ್ಲಿ ಜಯ–ಅಪಜಯ, ಟೀಕೆಗಳನ್ನು ಸಮಾನವಾಗಿ ಯಾರು ಸ್ವೀಕರಿಸುತ್ತಾರೋ ಅಂತಹವರಿಂದ ಮಾತ್ರ ಇಂತಹ ಸಮಾಜ ಸೇವೆ ಮಾಡಲು ಸಾಧ್ಯ. ನನ್ನದೊಂದು ಫೌಂಡೇಷನ್ ಇದೆ. ಅದರಲ್ಲಿ ಬರುವ ಆದಾಯದಲ್ಲಿ ಪ್ರತಿ ವರ್ಷವೂ ಶೇ.40 ರಷ್ಟು ಹಣವನ್ನು ಕ್ಯಾನ್ಸರ್ ರೋಗಿಗಳ ಚಿಕಿತ್ಸೆಗಾಗಿ ನೀಡುತ್ತಿದ್ದೇನೆ. ರಘುಚಂದನ್ ಫೌಂಡೇಶನ್‌ನಿಂದ ರಾಜ್ಯದಲ್ಲಿ 25 ಬಡ ಮಕ್ಕಳು ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವವರು ಯಾವ ಕಾಲೇಜಿನಲ್ಲಿ ಓದುತ್ತಾರೋ ಅಲ್ಲಿ ಓದಿಸುತ್ತೇವೆ. ಗ್ರಾಮೀಣ ಪ್ರದೇಶದ ಆರು, ಏಳು, ಎಂಟನೆ ಕ್ಲಾಸ್‌ನಲ್ಲಿ ಶೇ.80 ಕ್ಕಿಂತ ಅಧಿಕ ಅಂಕಗಳನ್ನು ಪಡೆದಿರುವ ಬಡ ಮಕ್ಕಳ ಶಿಕ್ಷಣಕ್ಕೆ ಆರ್ಥಿಕ ನೆರವು ನೀಡಲಾಗುವುದು. ಚಳ್ಳಕೆರೆ, ಹೊಸದುರ್ಗ, ಹಿರಿಯೂರು, ಚಿತ್ರದುಗ–'ದ ಮಕ್ಕಳು ಹೆಚ್ಚಿನ ಪ್ರಯೋಜನ ಪಡೆದುಕೊಂಡಿ–ದ್ದಾರೆ. ಮುಂದಿನ ವರ್ಷ ಕುವೆಂಪು ಟ್ರಸ್ಟ್‌ಗೆ ರಘುಚಂದನ್ ಫೌಂಡೇಶನ್‌ನಿಂದ ಐವತ್ತು ಸಾವಿರ ರೂ.ಗಳನ್ನು ನೀಡುತ್ತೇನೆ.

ಮಕ್ಕಳ ಶಿಕ್ಷಣಕ್ಕೆ ಬಳಸಿಕೊಳ್ಳಲಿ ಎಂದು ತಿಳಿಸಿದರು.

ಶಿವಗಂಗ ಕುವೆಂಪು ಟ್ರಸ್ಟ್ ಅಧ್ಯಕ್ಷ ಡಿ.ವಿ.ಪ್ರಕಾಶ್, ಹೊಳಲ್ಕೆರೆ ಬಿಜೆಪಿ. ಮಂಡಲ ಅಧ್ಯಕ್ಷ ವಸಂತಕುಮಾರ್, ಪುರಸಭೆ ಅಧ್ಯಕ್ಷ ವಿಜಯಸಿಂಹ ಕಾಟ್ರೋತ್, ಉಪಾಧ್ಯಕ್ಷೆ ನಾಗರತ್ನ ವೇದಮೂರ್ತಿ, ಎ.ಜಯಪ್ಪ, ಡಾ. ಮಂಜುಳಗೌಡ ಮತ್ತಿತರರಿದ್ದರು.

## ರಾಜ್ಯದಲ್ಲಿ ಗೊಬ್ಬರ ಕೊರತೆ ಇಲ್ಲ– ಸಿಎಂ ಹೇಳಿಕೆಗೆ ವ್ಯತಿರಿಕ್ತ ಹೇಳಿಕೆ ನೀಡಿದ ಕೃಷಿ ಸಚಿವ ಚಲುವರಾಯಸ್ವಾಮಿ

**ಬೆಂಗಳೂರು :** ರಾಜ್ಯದಲ್ಲಿ ಯೂರಿಯಾ ಕೊರತೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ. ನಡ್ಡಾ ಅವರಿಗೆ ಪತ್ರ ಬರೆದಿದ್ದಾರೆ, ಇದೇ ವೇಳೆ ರಾಜ್ಯದಲ್ಲಿ ರಸಗೊಬ್ಬರಗಳ ಕೊರತೆ ಇಲ್ಲ ಎಂದು ರಾಜ್ಯ ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಹೇಳಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ರಾಜ್ಯದ ಯಾವುದೇ ಜಿಲ್ಲೆಗಳಲ್ಲೂ ರಸಗೊಬ್ಬರ ಪೂರೈಕೆಯಲ್ಲಿ ಕೊರತೆಯಿಲ್ಲ. ಆದರೂ, ಬೇಡಿಕೆ ಕಡಿಮೆಯಿರುವ ಜಿಲ್ಲೆಗಳಿಂದ ಬೇಡಿಕೆ ಹೆಚ್ಚಿರುವ ಪ್ರದೇಶಗಳಿಗೆ ಗೊಬ್ಬರ ವರ್ಗಾವಣೆ ಮಾಡಿ ಸರಿದೂಗಿಸಲಾಗುತ್ತಿದೆ. ಹೀಗಾಗಿ ರೈತರು ಆತಂಕ ಪಡುವ ಅವಶ್ಯಕತೆಯಿಲ್ಲ ಎಂದು ತಿಳಿಸಿದರು. ಅತಿಯಾದ ರಸಗೊಬ್ಬರ ಬಳಕೆಯಿಂದ ಭೂಮಿ ಫಲವತ್ತತೆ ಹಾಗೂ ಮಾನವನ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಹೀಗಾಗಿ ಭವಿಷ್ಯದ ದೃಷ್ಟಿಯಿಂದ ರಸಗೊಬ್ಬರ ಬಳಕೆಗಿಂತ ಹಸಿರು ಗೊಬ್ಬರ, ಜೈವಿಕ ಗೊಬ್ಬರಗಳ ಬಳಕೆ ಹೆಚ್ಚಿಸುವ ಅಗತ್ಯವಿದೆ. ಈ ಬಗ್ಗೆಯೂ ರೈತರಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ಹೇಳಿದರು.

## ದೆಹಲಿ ಕರ್ನಾಟಕ ಭವನದಲ್ಲಿ ಸಿಎಂ–ಡಿಸಿಎಂ ವಿಶೇಷಾಧಿಕಾರಿಗಳ ನಡುವೆ ಜಗಳ

**ಬೆಂಗಳೂರು :** ಒಂದೆಡೆ ಕರ್ನಾಟಕದಲ್ಲಿ ಸಿಎಂ ಸ್ಥಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನಡುವೆ ಜಟಾಪಟಿ ನಡೆಯುತ್ತಿದ್ದರೆ, ಅತ್ತ ದೆಹಲಿಯ ಕರ್ನಾಟಕ ಭವನದಲ್ಲಿ ಇವರಿಬ್ಬರ ವಿಶೇಷಾಧಿಕಾರಿಗಳ ನಡುವೆ ಜಗಳ ತಾರಕಕ್ಕೇರಿದೆ. ಬೂಟಿನಿಂದ ಹೊಡೆಯಲು ಹೋಗುವ ಮಟ್ಟಕ್ಕೆ ಇದು ತಲುಪಿದೆ. ಸಿದ್ದರಾಮಯ್ಯ ಅವರ ವಿಶೇಷ ಕರ್ತವ್ಯ ಅಧಿಕಾರಿಯೂ ಆಗಿರುವ ಕರ್ನಾಟಕ ಭವನದ ಸಹಾಯಕ ನಿವಾಸಿ ಆಯುಕ್ತ ಮೋಹನ್ ಕುಮಾರ್ ಸಿ. ಹಾಗೂ ಶಿವಕುಮಾರ್ ಅವರ ವಿಶೇಷ ಅಧಿಕಾರಿ ಎಚ್.ಆಂಜನೇಯ ನಡುವಿನ ಗಲಾಟೆಯ ದೂರು ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ನಿವಾಸಿ ಆಯುಕ್ತರಿಗೆ ತಲುಪಿದೆ.

# ಮಕ್ಕಳಿಗೆ ಉತ್ತಮ ಪರಿಸರ ನೀಡೋಣ

## ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಅಭಿಪ್ರಾಯ

**ಬಳ್ಳಾರಿ :** ಮಕ್ಕಳ ರಕ್ಷಣೆಗೆ ಕಾಯ್ದೆ–ಕಾನೂನು ರೂಪಿಸುವುದು ಮಾತ್ರವಲ್ಲದೇ, ಅವರ ಬೆಳವಣಿಗೆಗೆ ಉತ್ತಮ ಪರಿಸರವನ್ನು ಸಹ ನೀಡಬೇಕಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ ಶಾಂತಿ ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರೀಡ್ಸ್ ಸಂಸ್ಥೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಮತ್ತು ಅರಣ್ಯ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ನ್ಯಾಯಾಲಯದ ವಿಸಿ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ "ಮಕ್ಕಳ ರಕ್ಷಣೆಗೆ ಕಾನೂನುಗಳು" ಎಂಬ ಪುಸ್ತಕ ಬಿಡುಗ–'ಡೆಗೊಳಿಸಿ, ಬಳಿಕ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ದೇವರ ಸಮಾನ. ಅವರು ಬೆಳವಣಿಗೆಯ ಪೂರಕವಾದ ಮನೆ, ಶಾಲೆ ವಾತಾವರಣದ ಸುತ್ತಮುತ್ತಲಿನಲ್ಲಿ ಗುಣಮಟ್ಟದ ಪರಿಸರ ಕಲ್ಪಿಸಬೇಕಿದೆ ಎಂದರು.

ದೇಶದಲ್ಲಿ ಬಾಲಕಾರ್ಮಿಕರು, ಭಿಕ್ಷಾಟನೆ, ಮಾನವ ಕಳ್ಳ ಸಾಗಾಣಿಕೆ, ಬಾಲ್ಯ ವಿವಾಹ, ಪೋಕ್ಸೋದಂತಹ ಬೆಳವಣಿಗೆಗಳು ಕಂಡುಬರುತ್ತಿರುವುದು ವಿಷಾಧನೀಯ ಸಂಗತಿಯಾಗಿದ್ದು, ಬಡತನ ಮತ್ತು ಶಿಕ್ಷಣ ಕೊರತೆ ಪ್ರಮುಖ ಕಾರಣವಾಗಿದೆ ಎಂದರು.

ಮಕ್ಕಳ ರಕ್ಷಣೆಯಲ್ಲಿ ಎನ್ ಜಿಒ ಗಳ ಪಾತ್ರವೂ ಸಹ ಮುಖ್ಯವಾಗಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರೀಡ್ಸ್ ಸಂಸ್ಥೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಈ ಪುಸ್ತಕ




ಹೊರತರಲಾಗಿದ್ದು, ಶಾಲೆಗಳು, ಗ್ರಂಥಾಲಯಗಳಲ್ಲಿ ಇರಿಸಲಾಗುವುದು. ಮುಖ್ಯವಾಗಿ ಶಾಲೆಗಳಲ್ಲಿ ಮುಂಜಾನೆಯ ಪ್ರಾರ್ಥನೆಯ ನಂತರ ಬಾಲ್ಯ ವಿವಾಹ, ಪೋಕ್ಸೊ ಕಾಯ್ದೆಗಳ ಕುರಿತು ಮಾಹಿತಿ ನೀಡಬೇಕು. ಬಾಲ್ಯವಿವಾಹವಾಗುವುದಿಲ್ಲ ಎಂದು ಮಕ್ಕಳ್ಳಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಲು ತಿಳಿಸಬೇಕು ಎಂದರು.

"ಮಗುವಿಗೊಂದು ಮರ–ಶಾಲೆಗೊಂದು ವನ ಅಭಿಯಾನ" ಕಾರ್ಯಕ್ರಮದಡಿ ಎಲ್ಲಾ ಶಾಯೆಗಳಲ್ಲಿ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡು, ಅವುಗಳ ಪೋಷಣೆಯ ಹೊಣೆಗಾರಿಗೆ ಮಕ್ಕಳಿಗೆ ನೀಡಬೇಕು. ಮಕ್ಕಳಿಗೆ ಕಾಯ್ದೆ–ಕಾನೂನುಗಳು ಎಷ್ಟು ಮುಖ್ಯವೋ, ಪರಿಸರದಲ್ಲಿ ಗಿಡ–ಮರಗಳು ಅಷ್ಟೇ ಮುಖ್ಯವಾಗಿದೆ ಎಂದರು.

ಇದೇ ವೇಳೆ ನ್ಯಾಯಾಧೀಶರು ಕಾರ್ಗಿಲ್ ವಿಜಯ ದಿವಸ ಅಂಗವಾಗಿ ಹುತಾತ್ಮರಾದ ಯೋಧರಿಗೆ ಗೌರವ ನಮನ ಸಲ್ಲಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುವುದು ಅಗತ್ಯವಾಗಿದೆ . ಮಕ್ಕಳ ರಕ್ಷಣೆಗಿರುವ ಕಾನೂನುಗಳನ್ನು ಪ್ರತಿಯೊಬ್ಬರೂ ತಿಳಿದು, ಇತರರಿಗೂ ತಿಳಿಸುವ ಕೆಲಸವಾಗಬೇಕಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಎಲ್ಲಾ ಇಲಾಖೆಗಳು ಸೇರಿ ಕೈಜೋಡಿಸೋಣ ಎಂದರು.

ರೀಡ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಶಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ಡಾ.ಹೆಚ್.ಸಿ.ರಾಘವೇಂದ್ರ ಅವರು ಪುಸ್ತಕ ಪರಿಚಯ ಮಾಡಿದರು. ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ಜನಾರ್ಧನ ಅವರು ಕಾರ್ಯಾಗಾರ ನಡೆಸಿದರು.

ಕಾರ್ಯಕ್ರಮಕ್ಕೂ ಮುನ್ನ "ಮಗುವಿಗೊಂದು ಮರ–ಶಾಲೆಗೊಂದು ವನ ಅಭಿಯಾನ" ಕಾರ್ಯಕ್ರಮದಡಿ ನ್ಯಾಯಾಲಯದ ಆವರಣದಲ್ಲಿ ಗಣ್ಯರು ಗಿಡ ನೆಟ್ಟು ನಿರೂಣಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಬಳ್ಳಾರಿ ಪ್ರಾದೇಶಿಕ ವಿಭಾಗದ ಅರಣ್ಯ ಇಲಾಖೆಯ ಸಹಾಯಕ ಸಂರಕ್ಷಣಾಧಿಕಾರಿ ತೋಶನ್ ಕುಮಾರ್ ಸೇರಿದಂತೆ ಜಿಲ್ಲಾ ನ್ಯಾಯಾಲಯದ ವಿವಿಧ ನ್ಯಾಯಾಧೀಶರು, ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್.ಸಿ., ಸಿ.ಆರ್.ಸಿ ಇ.ಸಿ.ಓ, ಕಾರ್ಮಿಕ ಅಧಿಕಾರಿಗಳು, ಪಿ.ಡಿ–ಎನ್.ಸಿ.ಎಲ್.ಪಿ, ಮಕ್ಕಳ ವಿಶೇಷ ಪೊಲೀಸ್ ಘಟಕ ಸಿಬ್ಬಂಧಿಗಳು, ಡಿ.ಸಿ.ಪಿ.ಓ ಸಿಬ್ಬಂದಿಗಳು, ಚೈಲ್ಡ್ ಲೈನ್ ಸಿಬ್ಬಂಧಿಗಳು, ಅಂಗನವಾಡಿ ಮೇಲ್ವಿಚಾರಕರು, ಪ್ಯಾರಾ ಲೀಗಲ್ ವಾಲೆಂಟೀಯರ್ಸ್, ಎಲ್ಲಾ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರುಗಳು, ರೀಡ್ಸ್ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ನಿವೃತ್ತಿ ನಂತರ ಯಾವುದೇ ಸರ್ಕಾರಿ ಹುದ್ದೆ ಸ್ವೀಕರಿಸಲ್ಲ

## ಸಿಜೆಐ ಬಿಆರ್ ಗವಾಯಿ ಶಪಥ

**ನವದೆಹಲಿ:** ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು



ತಮ್ಮ ನಿವೃತ್ತಿಯ ನಂತರ ಯಾವುದೇ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದಿಲ್ಲ ಎಂದು ಘೋಷಿಸಿದರು. ಬದಲಿಗೆ ಅವರು ಸಮಾಲೋಚನೆ ಮತ್ತು ಮಧ್ಯಸ್ಥಿಕೆ ಕ್ಷೇತ್ರದಲ್ಲಿ ಕೆಲಸ ಮಾಡುವುದಾಗಿ ಹೇಳಿದ್ದಾರೆ.

ಮಹಾರಾಷ್ಟ್ರದ ಅಮರಾವತಿ ಜಿಲ್ಲೆಯಲ್ಲಿ ದಿವಂಗತ ಟಿ.ಆರ್. ಗಿಲ್ಡಾ ಸ್ಮಾರಕ ಇ–ಗ್ರಂಥಾಲಯದ ಉದ್ಘಾಟನಾ ಸಮಾರಂಭದಲ್ಲಿ ಸಿಜೆಐ ಗವಾಯಿ ಈ ಹೇಳಿಕೆ ನೀಡಿದ್ದು 2025ರ ನವೆಂಬರ್ 23 ರಂದು ನಿವೃತ್ತರಾಗಲಿದ್ದಾರೆ. ಅಮರಾವತಿಯ ತಮ್ಮ ಹುಟ್ಟೂರು ದಾರಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೆಂಬರ್ 24ರ ನಂತರ ನಾನು ಯಾವುದೇ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದಿಲ್ಲ. ಆದರೆ ನಾನು ಸಮಾಲೋಚನೆ ಮತ್ತು ಮಧ್ಯಸ್ಥಿಕೆ ಕೆಲಸದಲ್ಲಿ ತೊಡಗಿಸಿಕೊಳ್ಳುತ್ತೇನೆ ಎಂದು ಹೇಳಿದರು. ನಿವೃತ್ತಿಯ ನಂತರ ತಮ್ಮ ಹೆಚ್ಚಿನ ಸಮಯವನ್ನು ದಾರಾಪುರ, ಅಮರಾವತಿ ಮತ್ತು ನಾಗ್ಪುರದಲ್ಲಿ ಕಳೆಯಲು ಯೋಜಿಸುತ್ತಿರುವುದಾಗಿಯೂ ಅವರು ಹೇಳಿದರು.

ನ್ಯಾಯಾಂಗ ಸ್ವಾತಂತ್ರ್ಯದ ಬಗ್ಗೆ ಮಾತನಾಡಿದ ಅವರು, ನಿವೃತ್ತಿಯ ನಂತರ ಸರ್ಕಾರಿ ಹುದ್ದೆಯನ್ನು ಸ್ವೀಕರಿಸುವುದು ಅಥವಾ ಚುನಾವಣೆಗಳಲ್ಲಿ ಸ್ಪರ್ಧಿಸುವುದು ನೈತಿಕ ಕಳವಳಗಳನ್ನು ಹುಟ್ಟುಹಾಕುತ್ತದೆ. ಇದು ನ್ಯಾಯಾಂಗದ ಮೇಲಿನ ಸಾರ್ವಜನಿಕರ ವಿಶ್ವಾಸವನ್ನು ಕುಗ್ಗಿಸುತ್ತದೆ ಎಂದು ಸಿಜೆಐ ಗವಾಯಿ ಈ ಹಿಂದೆ ಹೇಳಿದ್ದರು. ನ್ಯಾಯಾಂಗದ ವಿಶ್ವಾಸಾರ್ಹತೆ ಮತ್ತು ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳಲು ನಿವೃತ್ತಿಯ ನಂತರ ಯಾವುದೇ ಸರ್ಕಾರಿ ಹುದ್ದೆಗಳನ್ನು ಸ್ವೀಕರಿಸುವುದಿಲ್ಲ ಎಂದು ಅವರು ತಮ್ಮ ಅನೇಕ ಸಹೋದ್ಯೋಗಿಗಳ ಜೊತೆ ಸಾರ್ವಜನಿಕವಾಗಿ ಪ್ರತಿಜ್ಞೆ ಮಾಡಿದ್ದಾರೆ. ದರ್ಯಾಪುರದಲ್ಲಿ ಹೊಸ ನ್ಯಾಯಾಲಯದ ಕಟ್ಟಡದ ಉದ್ಘಾಟನೆಯ ಸಂದರ್ಭದಲ್ಲಿ, ಸಿಜೆಐ ಗವಾಯಿ ನ್ಯಾಯಾಂಗ ರಚನೆಯ ವಿಕೇಂದ್ರೀಕರಣವನ್ನು ಪ್ರತಿಪಾದಿಸಿದರು. ಇದು ಜನರಿಗೆ ನ್ಯಾಯವನ್ನು ಸುಲಭವಾಗಿ ಪ್ರವೇಶಿಸುವಂತೆ ಮಾಡುತ್ತದೆ ಎಂದು ಹೇಳಿದರು. ನ್ಯಾಯಾಂಗ ಮೂಲಸೌಕರ್ಯ ಸಮಿತಿಯ ಮುಖ್ಯಸ್ಥರಾಗಿ, ಅಧಿಕಾರಶಾಹಿ ಅಡೆತಡೆಗಳು ಈ ಕಾರ್ಯಕ್ಕೆ ಅಡ್ಡಿಯಾಗುತ್ತಿದ್ದರೂ, ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹೊಸ ನ್ಯಾಯಾಲಯಗಳನ್ನು ಸ್ಥಾಪಿಸಲು ಒಂದು ಮಾದರಿಯನ್ನು ಸಿದ್ಧಪಡಿಸಿದ್ದೇನೆ ಎಂದು ಅವರು ಉಲ್ಲೇಖಿಸಿದರು.

# ಕಾಡಾನೆ ತುಳಿದು ರೈತ ಸಾವು

**ಬಾಳೆಹೊನ್ನೂರು:** ಕಾಡಾನೆ ತುಳಿತಕ್ಕೆ ಮತ್ತೋರ್ವ ರೈತ ಬಲಿಯಾದ ಘಟನೆ ಚಿಕ್ಕಮಗಳೂರು ತಾಲೂಕಿನ ಹುಯಿಗೆರೆ ಗ್ರಾಪಂ ವ್ಯಾಪ್ತಿಯ ಅಂಡವಾನೆ ಗ್ರಾಮದಲ್ಲಿ ನಡೆದಿದೆ. ಅಂಡವಾನೆ ಗ್ರಾಮದ ಜಾಗ್ರ ಸುಬ್ಬೇಗೌಡ (66) ಕಾಡಾನೆ ತುಳಿತಕ್ಕೆ ಮೃತಪಟ್ಟ ರೈತ. ಇವರ ಮನೆ ಬಳಿಗೆ ಕಾಡಾನೆ ಬಂದಿದ್ದು, ಇದನ್ನು ಕಾಡಿನತ್ತ ಓಡಿಸಲು ಆನೆಯ ಹಿಂದೆ ಹೋಗಿದ್ದಾರೆ. ಈ ವೇಳೆ ಆನೆ ಅವರ ತೋಟದ ಐಬೆಕ್ಸ್ ಬೇಲಿಗೆ ತಗುಲಿದ್ದು, ವಿದ್ಯುತ್ ಶಾಕ್ ಹೊಡೆದಾಕ್ಷಣ ಏಕಾಏಕಿ ವಾಪಾಸ್ ಬಂದು ದಾಳಿಮಾಡಿ ತುಳಿದು ಸಾಯಿಸಿದೆ. ಕಳೆದ ಬುಧವಾರ ರಾತ್ರಿಯಷ್ಟೇ ಬನ್ನೂರು ಗ್ರಾಮದಲ್ಲಿ ಇದೇ ಕಾಡಾನೆ ಅನಿತಾ ಎಂಬ ಕೂಲಿಕಾರ್ಮಿಕ ಮಹಿಳೆ ಮೃತಪಟ್ಟಿದ್ದರು. ಮಹಿಳೆ ಮೃತಪಟ್ಟ ಬಳಿಕ ಬಾಳೆಹೊನ್ನೂರು ಅರಣ್ಯ ಇಲಾಖೆ ಮುಂಭಾಗದಲ್ಲಿ ಸಾವಿರಾರು ರೈತರು, ಸಾರ್ವಜನಿಕರು ಬೃಹತ್ ಪ್ರತಿಭಟನೆ ನಡೆಸಿ ಕಾಡಾನೆಯನ್ನು ಸ್ಥಳಾಂತರ ಮಾಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದರು.



ಐದು ದಿನಗಳ ಅಂತರದಲ್ಲಿ ಕಾಡಾನೆ ತುಳಿತಕ್ಕೆ ಆನೆ ದಾಳಿಗೆ ಮತ್ತೋರ್ವ ಬಲಿಯಾಗಿರುವುದಕ್ಕೆ ಗ್ರಾಮಸ್ಥರು, ರೈತರು ತೀವ್ರ ಆಕ್ರೋಶಗೊಂಡಿದ್ದಾರೆ. ಈ ಕಾಡಾನೆ ರೊಚ್ಚಿಗೆದ್ದು ಸುತ್ತಮುತ್ತಲಿನ ಗ್ರಾಮಗಳಲ್ಲಿ ತಿರುಗ–ಾಡುತ್ತಿದ್ದು, ಸಾರ್ವಜನಿಕರು ಅರಣ್ಯ ಪ್ರದೇಶ, ತೋಟಗಳಲ್ಲಿ ತಿರುಗಾಡದಂತೆ ಸ್ಥಳೀಯರು, ಅರಣ್ಯ ಇಲಾಖೆಯವರು ಮನವಿ ಮಾಡಿದ್ದಾರೆ.

# ಆನೆ ದಾಳಿಗೆ ಇಬ್ಬರ ಸಾವು: ಈಶ್ವರ ಖಂಡ್ರೆ ಸಂತಾಪ

ಚಿಕ್ಕಮಗಳೂರು: ಜಿಲ್ಲೆಯ ಎನ್.ಆರ್. ಪುರ ತಾಲೂಕು ಬಾಳೆಹೊನ್ನೂರು ಬಳಿ 4 ದಿನಗಳ ಅಂತರದಲ್ಲಿ ಇಬ್ಬರು ಆನೆ ದಾಳಿಗೆ ಮೃತಪಟ್ಟಿರುವ ಬಗ್ಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.



ಮೃತರ ಕುಟುಂಬದೊಂದಿಗೆ ಸರ್ಕಾರ ನಿಲ್ಲುತ್ತದೆ. ಅಗಲಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ಕುಟುಂಬದವರಿಗೆ ನೀಡಲಿ ಹಾಗೂ ಮೃತರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ದೇವರಲ್ಲಿ ಅವರು ಪ್ರಾರ್ಥಿಸಿದ್ದಾರೆ.

ಮೃತರ ಹತ್ತಿರದ ಬಂಧುಗಳಿಗೆ ನಿಯಮಾನುಸಾರ ಪರಿಹಾರ ನೀಡಲು ಮತ್ತು ಆನೆಗಳನ್ನು ಕಾಡಿಗೆ ಮರಳಿಸಲು ಮತ್ತು ಪುಂಡಾನೆ ಸೆರೆಗೆ ತುರ್ತು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿ–ದ್ದಾರೆ.

ಜನರು ಕೂಡ ಆನೆಗಳ ಸಂಚಾರ ಇದೆ ಎಂಬ ಮಾಹಿತಿ ದೊರೆತ ಬಳಿಕ ಮುಂಜಾನೆ ಮತ್ತು ಕತ್ತಲಾದ ಬಳಿಕ ಎಚ್ಚರದಿಂದ ಇರಬೇಕು ಎಂದು ಮನವಿ ಮಾಡಿದ್ದಾರೆ.

## 'ತಾಯಿಯ ಹೆಸರಲ್ಲಿ ಗಿಡ ನೆಡಿ'

**ಚಿಕ್ಕಮಗಳೂರು, ಜು.28:** ತಾಯಿಯ ಹೆಸರಿನಲ್ಲಿ ಗಿಡಗಳನ್ನು ನೆಡುವ ಮೂಲಕ ಎಲ್ಲಾ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯಲ್ಲಿ ತೊಡಗಬೇಕು ಎಂದು ನಿಲಯ ಪಾಲಕ ಜಿ.ಟಿ.ಶಿವಕುಮಾರ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕೇಂದ್ರ ಸರ್ಕಾರದ ಯುವ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ ಮೈ ಭಾರತ್ (ಮೇರಾ ಯುವ ಭಾರತ್) ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟಗಳ ಜಿಲ್ಲಾ ಘಟಕದ ಸಂಯುಕ್ತ ಆಶ್ರಯದಲ್ಲಿ ಕಡೂರಿನ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಒಂದು ಗಿಡ ತಾಯಿಯ ಹೆಸರಿನಲ್ಲಿ (ಏಕ್ ಪೇಡ್ ಮಾ ಕೇ ನಾಮ್) ಎಂಬ ಕಾರ್ಯಕ್ರಮವನ್ನು ಗಿಡ ನೆಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟದ ಜಿಲ್ಲಾ ಘಟಕದ ಕಾರ್ಯದರ್ಶಿ ಎಸ್.ಗಗನ್ ಹಾಗೂ ನಿಲಯದ ಸಿಬ್ಬಂದಿ ಅನುಷಮ್ಮ, ವಿನೋದಮ್ಮ, ಬೇಬಿ ಹಾಗೂ ಮೇರಾ ಯುವ ಭಾರತ್‌ನ ಸ್ವಯಂ ಸೇವಕರಾದ ಮಲ್ಲಿಕಾರ್ಜುನ. ಪ್ರದೀಪ್ ಮತ್ತಿತರರು ಭಾಗವಹಿಸಿದ್ದರು.

# ಕೃಷ್ಣ ನದಿ ಕುರಿತ ನ್ಯಾಯ ಮಂಡಳಿ ತೀರ್ಪು ಪ್ರಕಟಿಸುವಂತೆ ಕೇಂದ್ರಕ್ಕೆ ರಾಜ್ಯದ ಒತ್ತಾಯ

**ನವದೆಹಲಿ:** ಕೃಷ್ಣ ನದಿ ನೀರು ಹಂಚಿಕೆ ಕುರಿತಾಗಿ ನ್ಯಾಯ ಮಂಡಳಿ ನೀಡಿರುವ ಅಂತಿಮ ತೀರ್ಪನ್ನು ಆದಿ ಸೂಚನೆಯ ಮೂಲಕ ಪ್ರಕಟಿಸುವಂತೆ ರಾಜ್ಯ ಸರ್ಕಾರ ಕೇಂದ್ರವನ್ನು ಒತ್ತಾಯಿಸಿದೆ.

ದೆಹಲಿ ಪ್ರವಾಸದಲ್ಲಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಕೇಂದ್ರ ಸಚಿವ ವಿ.ಸೋಮಣ್ಣ ಅವರೊಂದಿಗೆ ಕೇಂದ್ರ ಜಲ ಶಕ್ತಿ ಸಚಿವ ಸಿ ಆರ್ ಪಾಟೀಲ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ನ್ಯಾಯ ಮಂಡಳಿಯ ತೀರ್ಪನ್ನು ಆದಿ ಸೂಚನೆಯ ಮೂಲಕ ಪ್ರಕಟಸದಿರುವ ಹಿನ್ನೆಲೆಯಲ್ಲಿ ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳ ಸೇರಿದಂತೆ ಕೃಷ್ಣ ಜಲಾನಯನ ಪ್ರದೇಶದಲ್ಲಿ ಬಾಕಿ ಉಳಿದಿರುವ ರಾಜ್ಯ ಸರ್ಕಾರದ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರುಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳ ಕುರಿತು ಸರ್ವ ಸಮ್ಮತ ತೀರ್ಮಾನ ಕೈಗೊಳ್ಳಲು ತಾವು ಕರೆದಿದ್ದ ಸಭೆ ಹಲವಾರು ಕಾರಣಗಳಿಂದ ಮುಂದೂಡಿಕೆಯಾಗಿದೆ ಎಂದು ಹೇಳಿದ ಅವರು ಐತೀರ್ಪಿನಂತೆ ಬಾಕಿ ಉಳಿದಿರುವ ಕಾಮಗಾರಿ ಕೈಗೊಳ್ಳಲು ಅವಕಾಶ ನೀಡಬೇಕು ಹಾಗೆ ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳಕ್ಕೂ ಅನುಮತಿ ನೀಡುವಂತೆ ಕೋರಿದರು.

# ಭಾರತದ ಎಷ್ಟು ವಿಮಾನ ನಷ್ಟವಾಗಿವೆ ಎಂದು ಕೇಳುವ ವಿಪಕ್ಷಗಳು ಪಾಕಿಸ್ತಾನಕ್ಕೆ ಕೊಟ್ಟ ಹೊಡೆತದ ಬಗ್ಗೆ ಒಮ್ಮೆಯೂ ಪ್ರಶ್ನಿಸಲಿಲ್ಲ; ರಾಜನಾಥ್ ಸಿಂಗ್ ಕಿಡಿ!

**ಹೊಸದಿಲ್ಲಿ:** "ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯಲ್ಲಿ ಭಾರತದ ಎಷ್ಟು ಯುದ್ಧ ವಿಮಾನಗಳು ನಷ್ಟವಾಗಿವೆ ಎಂದು ಕೇಳುವ ಪ್ರತಿಪಕ್ಷಗಳು, ಒಮ್ಮೆಯಾದರೂ ಪಾಕಿಸ್ತಾನಕ್ಕೆ ಎಷ್ಟು ಹೊಡೆತ ಬಿದ್ದಿದೆ ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿಯೇ ಇಲ್ಲ".. ಇದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಲೋಕಸಭೆಯಲ್ಲಿ ವಿಪಕ್ಷ ಸದಸ್ಯರನ್ನು ತರಾಟೆಗೆ ತೆಗೆದುಕೊಂಡ ಪರಿ.

ಹೌದು, ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಕುರಿತು ಲೋಕಸಭೆಯಲ್ಲಿ ಸುದೀರ್ಘ ಭಾಷಣ ಮಾಡಿದ ರಾಜನಾಥ್ ಸಿಂಗ್, ಕಾರ್ಯಾಚರಣೆಯ ಇಂಚಿಂಚೂ ಮಾಹಿತಿಯನ್ನೂ ಎಳೆಎಳೆಯಾಗಿ ಬಿಡಿಸಿಟ್ಟರು. ಇದೇ ವೇಳೆ ಪ್ರತಿಪಕ್ಷಗಳ ಮೇಲೂ ತೀವ್ರ ವಾಗ್ದಾಳಿ ನಡೆಸಿದ ಅವರು, ಪದೇ ಪದೇ ಊಹಾಪೋಹಗಳ ಬಗ್ಗೆ ಮಾತನಾಡುತ್ತಾ ಭಾರತೀಯ ಸೇನೆಯ ಮನೋಬಲವನ್ನು ಕುಗ್ಗಿಸದಂತೆ ಎಚ್ಚರಿಕೆ ನೀಡಿದರು.

"ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಭಾರತ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಆರಂಭಿಸಿದ ದಿನದಿಂದ, ಪ್ರತಿಪಕ್ಷಗಳು ಭಾರತೀಯ ಸೇನೆಯ ಮನೋಬಲ ಕುಸಿಯುವಂತೆ ಮಾಡುವ ಪ್ರಶ್ನೆಗಳನ್ನೇ ಕೇಳಿವೆ. ಭಾರತದ




ಎಷ್ಟು ಯುದ್ಧ ವಿಮಾನ ನಷ್ಟವಾಯಿತು? ಕದನ ವಿರಾಮ ಒಪ್ಪಂದದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪಾತ್ರವೇನು? ಹೀಗೆ ಅನಗತ್ಯ ಪ್ರಶ್ನೆಗಳನ್ನು ಕೇಳುವ ಮೂಲಕ ಪ್ರತಿಪಕ್ಷ ನಾಯಕರು ಭಾರತದ ಸೇನಾ ಸಾಮರ್ಥ್ಯದ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾರೆ. ಆದರೆ ಎಂದಿಗೂ ಅವರು ಪಾಕಿಸ್ತಾನಕ್ಕೆ ಆದ ನಷ್ಟವೇನು ಎಂದು ಪ್ರಶ್ನಿಸಿಲ್ಲ" ಎಂದು ರಾಜನಾಥ್ ಸಿಂಗ್ ತೀವ್ರ ತರಾಟೆಗೆ ತೆಗೆದುಕೊಂಡರು.

"ಆದರೂ ನಾನು ಪ್ರತಿಪಕ್ಷಗಳ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸುತ್ತೇನೆ. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳಿಗೆ ಯಾವ ಹಾನಿಯೂ ಆಗಿಲ್ಲ. ಆಗಿರುವ ನಷ್ಟವೆಲ್ಲಾ ಪಾಕಿಸ್ತಾನಕ್ಕೆ ಮಾತ್ರ. ಕದನ ವಿರಾಮ ಒಪ್ಪಂದದಲ್ಲಿ ಯಾವುದೇ ಮೂರನೇ ಶಕ್ತಿಯ ಹಸ್ತಕ್ಷೇಪಕ್ಕೆ ನಾವು ಅವಕಾಶ ಮಾಡಿಕೊಟ್ಟಿಲ್ಲ" ಎಂದು ರಕ್ಷಣಾ ಸಚಿವರು ಸ್ಪಷ್ಟಪಡಿಸಿದರು.

"ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಕೇವಲ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿಕೊಂಡು ನಡೆಸಲಾಗಿತ್ತು. ಭಾರತದ ಕ್ಷಿಪಣಿ ದಾಳಿಗಳಲ್ಲಿ 100ಕ್ಕೂ ಹೆಚ್ಚು ಭಯೋತ್ಪಾದಕರು ಹತರಾಗಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳುವ ನಮ್ಮ ಉದ್ದೇಶ ಈಡೇರಿದೆ. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಯಶಸ್ವಿಯಾಗಿದೆ" ಎಂದು ರಾಜನಾಥ್ ಸಿಂಗ್ ಲೋಕಸಭೆಯ ಭಾಷಣದಲ್ಲಿ ಘೋಷಿಸಿದರು.

"ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯು ಭಾರತದ ಸೇನಾ ಸಾಮರ್ಥ್ಯವನ್ನು ಜಗತ್ತಿಗೆ ಅನಾವರಣಗೊಳಿಸಿದೆ. ನಮ್ಮ ಎಸ್–400 ವಾಯು ರಕ್ಷಣಾ ವ್ಯವಸ್ಥೆಗಳು ಪಾಕಿಸ್ತಾನದ ಕ್ಷಿಪಣಿ ದಾಳಿಗಳನ್ನು ಸಂಪೂರ್ಣವಾಗಿ ವಿಫಲಗೊಳಿಸಿವೆ. ಮೂರು ದಿನಗಳ ಕಾರ್ಯಾಚರಣೆಯಲ್ಲಿ ಯಾವ ಸೇನಾ ಸಿಬ್ಬಂದಿಗೂ ಸಣ್ಣ ಗಾಯವಾಗಿಲ್ಲ" ಎಂದು ರಕ್ಷಣಾ ಸಚಿವರ ಲೋಕಸಭೆಗೆ ತಿಳಿಸಿದರು.

ತಮ್ಮ ಭಾಷಣದ ಮಧ್ಯೆ "ಭಾರತದ ಸೇನಾ ಸಾಮರ್ಥ್ಯವನ್ನು ಹೊಗಳುವಾಗ ಪ್ರತಿಪಕ್ಷಗಳು ಕಡೆಪಕ್ಷ ಮೇಜು ತಟ್ಟಿ ಅಭಿನಂದನೆ ಸಲ್ಲಿಸಬೇಕು" ರಾಜನಾಥ್ ಸಿಂಗ್ ಹೇಳುತ್ತಿದ್ದಂತೇ, ಆಡಳಿತ ಪಕ್ಷದ ಸದಸ್ಯರು ಮೇಜು ಕುಟ್ಟಿ ಸ್ವಾಗತಿಸಿದರು, ಕೂಡಲೇ ಕೆಲವು ಪ್ರತಿಪಕ್ಷ ಸದಸ್ಯರೂ ಅಭಿನಂದಿಸಿದರು. ಇದಕ್ಕೆ ಪ್ರತಿಯಾಗಿ ರಾಜನಾಥ್ ಸಿಂಗ್ ಪ್ರತಿಪಕ್ಷ ಸದಸ್ಯರಿಗೆ ಧನ್ಯವಾದ ಅರ್ಪಿಸಿದರು.

# RCB ಕಾಲ್ತುಳಿತ: ಬಿ ದಯಾನಂದ್ ಸೇರಿ 4 ಪೊಲೀಸ್ ಅಧಿಕಾರಿಗಳ ಅಮಾನತು ರದ್ದು ಮಾಡಿದ ಕರ್ನಾಟಕ ಸರ್ಕಾರ!

**ಬೆಂಗಳೂರು:** ಚಿನ್ನಸ್ವಾಮಿ ಸ್ಟೇಡಿಯಂ ಕಾಲ್ತುಳಿತ ದುರಂತ ಸಂಬಂಧಿಸಿದಂತೆ ಹಿರಿಯ ಪೊಲೀಸ್ ಅಧಿಕಾರಿ ಬಿ ದಯಾನಂದ್ ಸೇರಿದಂತೆ ನಾಲ್ವರು ಪೊಲೀಸ್ ಅಧಿಕಾರಿಗಳ ಅಮಾನತನ್ನು ಕರ್ನಾಟಕ ಸರ್ಕಾರ ರದ್ದು ಮಾಡಿದೆ.

ದುರ್ಘಟನೆಯ ಭದ್ರತಾ ಲೋಪಕ್ಕೆ ಸಂಬಂಧಿಸಿದಂತೆ ಸರ್ಕಾರವು ಬೆಂಗಳೂರು ಪೊಲೀಸ್ ಆಯುಕ್ತರಾಗಿದ್ದ ಬಿ. ದಯಾನಂದ್, ಡಿಸಿಪಿ ಶೇಖರ್, ಡಿವೈಎಸ್‌ಪಿ ಬಾಲಕೃಷ್ಣ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಗಿರೀಶ್ ಅವರನ್ನು ಅಮಾನತು ಮಾಡಿತ್ತು.

ಐಪಿಎಸ್ ಅಧಿಕಾರಿಗಳಾದ ಬಿ. ದಯಾನಂದ (ಐಟಿ: 1994) ಮತ್ತು ಶೇಖರ್ ಎಚ್. ತೆಕ್ಕನ್ನವರ್ (ಐಟಿ: 2014) ಅವರನ್ನು ಅಖಿಲ ಭಾರತ ಸೇವೆಗಳ ನಿಯಮಗಳು 1969ರ



ಅಡಿಯಲ್ಲಿ ಅಮಾನತುಗೊಳಿಸಲಾಗಿತ್ತು. ಇದಲ್ಲದೆ, ಡಿವೈಎಸ್‌ಪಿ ಸಿ ಬಾಲಕೃಷ್ಣ ಮತ್ತು ಪೊಲೀಸ್ ಇನ್ಸ್‌ಪೆಕ್ಟರ್ ಎಕೆ ಗಿರೀಶ್ ಅವರನ್ನೂ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ಕ್ರಮಗಳು) ನಿಯಮ 1965ರ ಅಡಿಯಲ್ಲಿ ಅಮಾನತುಗೊಳಿಸಲಾಗಿತ್ತು. ಇದೀಗ ಸರ್ಕಾರವು ಅವರ ಅಮಾನತನ್ನು ರದ್ದುಗೊಳಿಸಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಗೆ ಮರಳಲು ಸೂಚಿಸಿದೆ. ಆದಾಗ್ಯೂ, ಅವರ ವಿರುದ್ಧದ ಶಿಸ್ತು ಕ್ರಮಗಳ ವಿಚಾರಣೆ ಮುಂದುವರಿಯಲಿದೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ಆರ್‌ಸಿಬಿ ಪಂದ್ಯದ ವೇಳೆ ನಡೆದ ಕಾಲ್ತುಳಿತ ದುರಂತದ ಹಿನ್ನೆಲೆಯಲ್ಲಿ ಭದ್ರತಾ ವೈಫಲ್ಯದ ಆರೋಪದ ಮೇಲೆ ಈ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು. ಘಟನೆಯ ಕುರಿತು ಶಿಸ್ತು ಕ್ರಮ ಬಾಕಿ ಇರಿಸಿ ಅವರನ್ನು ಸೇವೆಯಿಂದ ದೂರವಿಡಲಾಗಿತ್ತು. ಸದ್ಯ ಅಮಾನತು ರದ್ದು ಮಾಡಿ ಆದೇಶದ ಪ್ರತಿಯನ್ನು ಗೃಹ ಇಲಾಖೆ, ಪೊಲೀಸ್ ಮಹಾನಿರ್ದೇಶಕರು ಮತ್ತು ಸಂಬಂಧಪಟ್ಟ ಇತರ ಇಲಾಖೆಗಳಿಗೆ ರವಾನಿಸಲಾಗಿದೆ. ಈ ಬೆಳವಣಿಗೆಯು ಪೊಲೀಸ್ ವಲಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

# ಕಳಸಾ ಬಂಡೂರಿ ಹೋರಾಟದ ಮಾದರಿಯ ಇನ್ನೊಂದು ರೈತ ಸಂಗ್ರಾಮ ಆರಂಭಿಸೋಣ; ಬಸವರಾಜ ಬೊಮ್ಮಾಯಿ

**ಗದಗ:** ರೈತರ ತ್ಯಾಗ, ಬಲಿದಾನ ವ್ಯರ್ಥವಾಗಬಾರದು. ಅವರ ತ್ಯಾಗ, ಬಲಿದಾನದಿಂದ ಸ್ಫೂರ್ತಿ ಪಡೆದು ರೈತರು ಮತ್ತೆ ಸಂಘಟಿತರಾಗಿ ರಾಜ್ಯದಲ್ಲಿ ರೈತ ಸರಕಾರ ತರುವ ಕೆಲಸ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಕರೆ ನೀಡಿದರು.

ಭಾನುವಾರ ತಾಲೂಕಿನ ಸೊರಟೂರ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಏರ್ಪಡಿಸಿದ್ದ 35ನೇ ವರ್ಷದ ರೈತ ಹುತಾತ್ಮ ದಿನಾಚರಣೆಯಲ್ಲಿ ಮಾತನಾಡಿದರು.

ರೈತ ಯಾವುದೇ ಪಕ್ಷಕ್ಕೆ ಸೇರಿಲ್ಲ. ಆದ–ರೆ, ಎಲ್ಲ ಪಕ್ಷಗಳೂ ರೈತರಿಗೆ ಸೇರಿವೆ. ಎಷ್ಟು ಮಳೆ ಬರುತ್ತದೆ ಗೊತ್ತಿಲ್ಲ. ಎಷ್ಟು ಬೆಳೆ ಬರುತ್ತದೆ ಗೊತ್ತಿಲ್ಲ. ರೈತ ಅನಿಶ್ಚಿತತೆಯಲ್ಲಿ ಬದುಕುತ್ತಿದ್ದಾನೆ. ಕರ್ನಾಟಕದಲ್ಲಿ ಅನೇಕ ರೈತ ಸಂಘಟನೆಗಳು ಆಗಿವೆ. ರಾಜ್ಯದ ಎಲ್ಲ ರೈತ ಸಂಘಟನೆಗಳು ಒಂದಾದಾಗ ಮಾತ್ರ ರೈತರಿಗೆ ನ್ಯಾಯ ಕೊಡಲು ಸಾಧ್ಯ. ಎಲ್ಲ



ರೈತ ಸಂಘಟನೆಗಳು ಒಂದಾಗಲಿ ಎಂದರು.

70–80ರ ದಶಕದ ನವಲಗುಂದ ನರಗುಂದ ಹೋರಾಟ ಆದ ಮೇಲೆ ಸೊರಟೂರು ರೈತರ ಹತ್ಯೆಯಾಗಿದೆ. ಈಗಲೂ ಅದೇ ವ್ಯವಸ್ಥೆ ಇದೆ. ಸರಕಾರಗಳು ಅನ್ನಭಾಗ್ಯ ಯೋಜನೆ ಮಾಡಿವೆ. ಆದರೆ ಅನ್ನದಾತನ ಮೂಲೆಗುಂಪು ಮಾಡಿದ್ದಾರೆ. ಯಾರು ಅನ್ನ ಕೊಡುತ್ತಾರೆ ಅವರಿಗೆ ನ್ಯಾಯ ಸಿಗುತ್ತಿಲ್ಲ. ನಾನು ಸಿಎಂ ಆಗಿದ್ದಾಗ ಬೀಜ, ಗೊಬ್ಬರ ಪ್ರತಿ ವರ್ಷ ಬಫರ್ ಸ್ಟಾಕ್ ಇಡುವಂತೆ ಸೂಚನೆ ನೀಡಿದ್ದೆ.

ಈ ವರ್ಷ ಮಳೆ ಮುಂಚಿತವಾಗಿದೆ. ಮೆಕ್ಕೆಜೋಳ ಬೆಳೆದ ರೈತರು ಯೂರಿಯಾ ಗೊಬ್ಬರಕ್ಕಾಗಿ ಬೇಡುತ್ತಿದ್ದಾರೆ. ಕೇಂದ್ರ ಸರಕಾರ ಅಗತ್ಯ ಯೂರಿಯಾ ಗೊಬ್ಬರ ಕೊಟ್ಟಿದೆ. ಆದರೆ ರಾಜ್ಯದಲ್ಲಿ ಯೂರಿಯಾ ಗೊಬ್ಬರದ ಭ್ರಷ್ಟಾಚಾರ ನಡೆದಿದೆ. ದೊಡ್ಡ ದೊಡ್ಡ ಡೀಲರ್‌ಗಳು ಬ್ಲಾಕ್ ಮಾರ್ಕೆಟ್‌ನಲ್ಲಿ ಮಾರಾಟ ಮಾಡುತ್ತಿದ್ದಾರೆ. ನಾನು ಸೊರಟೂರು ಸೊಸೈಟಿಗೆ ಭೇಟಿ ಕೊಟ್ಟಿದ್ದೆ. ಸೊಸೈಟಿಗೆ ಗೊಬ್ಬರ ಕೊಟ್ಟಿಲ್ಲ. ದೊಡ್ಡ ದೊಡ್ಡ ವ್ಯಾಪಾರಸ್ಥರಿಗೆ ಹೋಗುತ್ತಿದೆ ಎಂದು ಆರೋಪಿಸಿದರು.

ಸೊರಟೂರು ಹೋರಾಟದ ಭೂಮಿಯಲ್ಲಿ ಗೋಲಿಬಾರ್ ಆದಾಗ ಯಡಿಯೂರಪ್ಪ ಮತ್ತು ಎಸ್.ಆರ್.ಬೊಮ್ಮಾಯಿ ಅವರು ಬಂದು ಮನೆ ಮನೆಗೆ ಹೋಗಿ ಜನರಿಗೆ ಧೈರ್ಯ ಹೇಳಿ ಜನರಿಗೆ ಆಸ್ಪತ್ರೆಗೆ ಹೋಗಲು ತಮ್ಮದೇ ಗಾಡಿ ಕಳಿಸಿದವರು. ಅಂಥ ಹೋರಾಟದ ಛಲಗಾರರ ಗರಡಿಯಲ್ಲಿ ನಾವು ಬೆಳೆದಿದ್ದೇವೆ. ನಮ್ಮಲ್ಲೂ ಕಿಚ್ಚಿದೆ. ಕೇವಲ ಮಾತಿನಿಂದ, ಭಾಷಣದಿಂದ ರಾಜಕಾರಣ ಆಗುವುದಿಲ್ಲ.

ಇನ್ನು ಮುಂದೆ ನಿಮ್ಮ ಪರವಾಗಿ ಯಾವ ರೀತಿ ಕಳಸಾ ಬಂಡೂರಿ ಹೋರಾಟ ಮಾಡಿದ್ದೇವೋ ಅದೇ ರೀತಿ ರೈತರ ಪರವಾಗಿ, ನೀರಾವರಿ ಪರವಾಗಿ ಅವರ ಬದುಕಿನ ಪರವಾಗಿ, ಅವರ ಹಕ್ಕಿನ ಪರವಾಗಿ ಮತ್ತೊಮ್ಮೆ ಇನ್ನೊಂದು ಸಂಗ್ರಾಮ ಆರಂಭಿಸುತ್ತೇವೆ ಎಂದರು.

ಮಾಜಿ ಸಚಿವ ಎಸ್.ಎಸ್.ಪಾಟೀಲ , ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಶಾಸಕ ಡಾ.ಚಂದ್ರು ಲಮಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಕೆಸಿಸಿ ಬ್ಯಾಂಕ್‌ನ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ್, ರವಿ ದಂಡಿನ, ರೈತ ಸಂಘದ ಅಧ್ಯಕ್ಷ ರಾಮಣ್ಣ ಕಮ್ಮಾರ ಇತರರು ಉಪಸ್ಥಿತರಿದ್ದರು.

# ಬಾಡಿಗೆ ತಾಯ್ತನದ ಹೆಸರಲ್ಲಿ IVF ಸೆಂಟರ್ ಕರ್ಮಕಾಂಡ, ರೂ.90,000ಕ್ಕೆ ಮಗು ಖರೀದಿಸಿ ?35 ಲಕ್ಷಕ್ಕೆ ಮಾರಾಟ!

**ಹೈದರಾಬಾದ್:** ಇಂದು ನೈಸರ್ಗಿಕವಾಗಿ ಮಗು ಪಡೆಯಲಾಗದವರಿಗೆ ಮಗು ಹೊಂದಲು ಹಲವು ದಾರಿಗಳಿವೆ. ಇದಕ್ಕಾ–ಗಿಯೇ ಗಲ್ಲಿ ಗಲ್ಲಿಗಳಲ್ಲಿ ಐವಿಎಸ್ ಸೆಂಟರ್‌ಗಳು ತಲೆ ಎತ್ತಿವೆ. ಅಂಥಹದ್ದೇ ಒಂದು ಐವಿಎಫ್ ಕೇಂದ್ರ ತನ್ನ ಗ್ರಾಹಕರಿಗೆ ಯಾಮಾರಿಸಿದ ಕಥೆ ಇದು.

ಮಗುವಿನ ನಿರೀಕ್ಷೆಯಲ್ಲಿದ್ದ ಒಂದು ದಂಪತಿ ತಮ್ಮ ಕನಸನ್ನು ನನಸಾಗಿಸಲು ಹೈದರಾಬಾದ್‌ನ ಸುಪ್ರಸಿದ್ಧ ಫಲವತ್ತತೆ ಕ್ಲಿನಿಕ್‌ನ ಬಾಗಿಲು ತಟ್ಟಿದ್ದರು.ಆದರೆ, ಅವರಿಗೆ ತಿಳಿದಿರಲಿಲ್ಲ, ಆ ಕ್ಲಿನಿಕ್‌ನ ವೈದ್ಯಕೀಯ ಕೋಟಿನ ಹಿಂದೆ ಒಂದು ಕ್ರೂರ ಮತ್ತು ಅಮಾನವೀಯ ವಂಚನೆಯ ಜಾಲವೇ ಅಡಗಿದೆ ಅಂತ. ವೈದ್ಯರನ್ನು ನಂಬಿದ್ದೇ ಅವರ ಜೀವನದ ಅತ್ಯಂತ ದೊಡ್ಡ ಆಘಾತ–ಕ್ಕೆ ಕಾರಣವಾಯ್ತು.

2024ರ ಆಗಸ್ಟ್‌ನಲ್ಲಿ, ರಾಜಸ್ಥಾನ ಮೂಲದ ದಂಪತಿ ಸಿಕಂದರಾಬಾದ್‌ನಲ್ಲಿರುವ 'ಯೂನಿವರ್ಸಲ್ ಸೃಷ್ಟಿ ಫರ್ಟಿಲಿಟಿ ಸೆಂಟರ್' ಅನ್ನು ಸಂಪರ್ಕಿಸಿ ತಮ್ಮ ಸಮಸ್ಯೆ ಹೇಳಿಕೊಂಡಿದ್ದರು.

ಅಲ್ಲಿನ ಮುಖ್ಯಸ್ಥೆ, 64 ವರ್ಷದ ಡಾ. ಅಥಲೂರಿ ನಮ್ರತಾ, ಈ ದಂಪತಿಗೆ ಬಾಡಿಗೆ ತಾಯ್ತನದ (ಸರೊಗಸಿ) ಮೂಲಕ ಮಗು ಪಡೆಯುವ ಸಲಹೆ ನೀಡಿದರು. ಜೈವಿಕವಾಗಿ ಮಗು ನಿಮ್ಮದೇ ಆಗಿರುತ್ತದೆ ಎಂದು ಭರವಸೆ ನೀಡಿ, ಈ ಪ್ರಕ್ರಿಯೆಗೆ 35 ಲಕ್ಷ ರು. ವೆಚ್ಚವಾಗುತ್ತದೆ ಎಂದು ತಿಳಿಸಿದರು. ದಂಪತಿ ಹಣವನ್ನೂ ಪಾವತಿಸಿದರು.

ಒಂಬತ್ತು ತಿಂಗಳ ಕಾಲ, ಎಲ್ಲವೂ



ಸುಸೂತ್ರವಾಗಿ ನಡೆಯುತ್ತಿದೆ ಎಂದು ಕ್ಲಿನಿಕ್ ದಂಪತಿಗೆ ನಂಬಿಸುತ್ತಲೇ ಬಂತು. 2025ರ ಜೂನ್‌ನಲ್ಲಿ, ಬಾಡಿಗೆ ತಾಯಿಗೆ ವಿಶಾಖಪಟ್ಟಣ?ನಲ್ಲಿ ಹೆರಿಗೆ ಆಗಿದ್ದು, ಗಂಡು ಮಗು ಜನಿಸಿದೆ ಎಂದು ತಿಳಿಸಲಾಯಿತು. ಅಷ್ಟೇ ಅಲ್ಲ ಹೆರಿಗೆಯ ಖರ್ಚಿಗಾಗಿ ಹೆಚ್ಚುವರಿಯಾಗಿ 2 ಲಕ್ಷ ರೂ. ಪಾವತಿಸಲು ಹೇಳಿ, ಮಗುವನ್ನು ನಕಲಿ ಜನನ ಪ್ರಮಾಣಪತ್ರದೊಂದಿಗೆ ದಂಪತಿಗೆ ಹಸ್ತಾಂತರಿಸಲಾಯಿತು

ದಂಪತಿ ತಮ್ಮದೇ ರಕ್ತ ಹಂಚಿಕೊಂಡು ಬಂದ ಕಂದಮ್ಮ ಎಂದು ಖುಷಿಯಲ್ಲಿದ್ದರು. ಮನೆಗೆ ಕರೆದುಕೊಂಡು ಬಂದು ಸಂಭ್ರಮಿಸಿದರು. ಆದರೆ, ಅವರ ಮನಸ್ಸಿನಲ್ಲಿ ಮೂಡಿದ ಒಂದು ಸಣ್ಣ ಅನುಮಾನ ಇದೀಗ ಇಡೀ ದೇಶವನ್ನೇ ಬೆಚ್ಚಿಬೀಳಿಸುವ ಹಗರಣವಾಗಿ ಮಾರ್ಪಟ್ಟಿದೆ.

ದಂಪತಿ ಯಾಕೂ ಇರಲಿ ಎಂದು ಸ್ವತಂತ್ರವಾಗಿ ಡಿಎನ್‌ಎ ಪರೀಕ್ಷೆ ನಡೆಸಿದ್ದರು. ಆಗ ಆ ಮಗುವಿಗೂ ತಂದೆಗೂ ಜೈವಿಕವಾಗಿ ಯಾವುದೇ ಸಂಬಂಧ ಹೊಂದಿಲ್ಲ ಎಂಬ ಆಘಾತಕಾರಿ ಸತ್ಯ ಹೊರಬಂತು.

ಇದನ್ನು ಕೇಳಿ ಕುಸಿದು ಹೋದ ದಂಪತಿ ಜುಲೈ 26ರಂದು ಪೊಲೀಸರಿಗೆ ವಿವರವಾಗಿ ದೂರು ನೀಡಿದರು. ತನಿಖೆಗೆ ಇಳಿದ ಪೊಲೀಸರು ನಿಜ ಸತ್ಯ ಕೇಳಿ ಬೆಚ್ಚಿಬಿದ್ದರು. ಇದು ಸಿನಿಮಾ ಕಥೆಗಿಂತಲೂ ಭಯಂಕರವಾಗಿತ್ತು.

ಇದು ಬಾಡಿಗೆ ತಾಯ್ತನದ ಪ್ರಕರಣವೇ ಅಲ್ಲ, ಬದಲಿಗೆ ಶಿಶು ಮಾರಾಟದ ವ್ಯವಸ್ಥಿತ ಜಾಲ ಎಂದು ಪೊಲೀಸರಿಗೆ ತಿಳಿದು ಬಂತು. ಡಾ. ನಮ್ರತಾ ಮತ್ತು ಅವರ ಸಹಚರರು ಹೈದರಾಬಾದ್‌ನಲ್ಲಿ ವಾಸಿಸುತ್ತಿದ್ದ ಅಸ್ಸಾಂ ಮೂಲದ ಬಡ ದಂಪತಿಯಿಂದ ಕೇವಲ 90,000 ರೂಪಾಯಿ ನೀಡಿ ಮಗುವನ್ನು ಖರೀದಿಸಿದ್ದರು. ಆ ಮಗುವನ್ನೇ, ಐವಿಎಫ್ ಮೂಲಕ ಹುಟ್ಟಿದ್ದು ಎಂದು ನಂಬಿಸಿ, ದೂರುದಾರ ದಂಪತಿಗೆ ಬರೋಬ್ಬರಿ 35 ಲಕ್ಷ ರೂ.ಗೆ ಮಾರಾಟ ಮಾಡಿದ್ದರು.

ಈ ಜಾಲದ ಹಿಂದೆ ಇದ್ದವರೇ ಡಾ. ಅಥಲೂರಿ ನಮ್ರತಾ. ಇವರ ಕ್ಲಿನಿಕ್‌ನ ಪರವಾನಗಿಯನ್ನು 2021ರಲ್ಲೇ ರದ್ದುಗೊಳಿಸಲಾಗಿತ್ತು. ಹೀಗಿದ್ದರೂ ಹೈದರಾಬಾದ್, ಕೊಂಡಾಪುರ, ವಿಜಯವಾಡ ಮತ್ತು ವಿಶಾಖಪಟ್ಟಣಂಗಳಲ್ಲಿ ಅಕ್ರಮವಾಗಿ ಐವಿಎಫ್ ಕೇಂದ್ರಗಳನ್ನು ನಡೆಸುತ್ತಿದ್ದರು

ಇದು ಅವರ ಮೊದಲ ಅಪರಾಧವೂ ಅಲ್ಲ. ಈ ಹಿಂದೆ 2016ರಲ್ಲಿ ಎನ್‌ಆರ್‌ಐ ದಂಪತಿಗೆ ಇದೇ ರೀತಿ ವಂಚಿಸಿದ್ದಕ್ಕಾಗಿ ಅವರ ಪರವಾನಗಿಯನ್ನು ಐದು ವರ್ಷಗಳ ಕಾಲ ಅಮಾನತು ಮಾಡಲಾಗಿತ್ತು. 2020ರಲ್ಲಿ ಮತ್ತೆ ಶಿಶು ಕಳ್ಳಸಾಗಣೆ ಪ್ರಕರಣದಲ್ಲಿ ಅವರು ಜೈಲು ಪಾಲಾಗಿದ್ದರು.

ಆದರೆ ಹೊರಬಂದವರೇ ಮತ್ತೆ ಇದೇ ಕೃತ್ಯಕ್ಕೆ ಕೈ ಹಾಕಿದ್ದರು. ಇದೀಗ ಮಗದೊಮ್ಮೆ ಪೊಲೀಸರು ಡಾ. ಅಥಲೂರಿ ನಮ್ರತಾ, ಅವರ ಮಗ ಪಿ. ಜಯಂತ್ ಕೃಷ್ಣ, ಗಾಂಧಿ ಆಸ್ಪತ್ರೆಯ ಅರಿವಳಿಕೆ ತಜ್ಞ ಡಾ. ನರ್ಗುಲಾ ಸದಾನಂದಮ್, ಏಜೆಂಟರು ಮತ್ತು ಮಗುವನ್ನು ಮಾರಾಟ ಮಾಡಿದ ಜೈವಿಕ ಪೋಷಕರು ಸೇರಿದಂತೆ ಎಂಟು ಜನರನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ.

ಇವರು ಮಕ್ಕಳನ್ನು ಖರೀದಿಸಿ ಮಾರಾಟ ಮಾಡಿದ್ದು ಅಷ್ಟೇ ಅಲ್ಲ. ಭಾರತದಲ್ಲಿ ವಾಣಿಜ್ಯ ಬಾಡಿಗೆ ತಾಯ್ತನವು ಕಾನೂನುಬಾಹಿರವಾಗಿದ್ದು, ಇದನ್ನು ಕೂಡ ಉಲ್ಲಂಘಿಸಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

# ಕನಕಪುರದಷ್ಟೇ ಮಂಡ್ಯದ 7 ಕ್ಷೇತ್ರಗಳು ಮುಖ್ಯ; ಜೆಡಿಎಸ್ ಮುಖಂಡರು ಸಮಯ ವ್ಯರ್ಥ ಮಾಡಿಕೊಳ್ಳಬೇಡ್ರಪ್ಪ – ಡಿ.ಕೆ.ಶಿವಕುಮಾರ್



**ಮಂಡ್ಯ:** "ನನಗೆ ಕನಕಪುರ ಎಷ್ಟು ಮುಖ್ಯವೋ, ಮಂಡ್ಯದ ಏಳು ಕ್ಷೇತ್ರಗಳು ಅಷ್ಟೇ ಮುಖ್ಯ. ಇನ್ನು ಮಂಡ್ಯದ ಜೆಡಿಎಸ್ ನಾಯಕರು ಸುಮ್ಮನೆ ಸಮಯ ವ್ಯರ್ಥ ಮಾಡಿಕೊಳ್ಳಬೇಡಿ " ಎಂದು ಡಿಸಿಎಂ ಡಿಕೆ ಶಿವಕುಮಾರ್ ಕಿವಿ ಮಾತು ಹೇಳಿದ್ದಾರೆ.

ಮದ್ದೂರಿನಲ್ಲಿ ಸೋಮವಾರ ನಡೆದ ಮೊತ್ತದ ವಿವಿಧ ಇಲಾಖೆಗಳ ಹಲವು ಯೋಜನೆಗಳ ಕಾಮಗಾರಿ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಮಾತನಾಡಿದರು. ?ನಾವು ಇಂದು ನಿಮ್ಮಿಂದ ಜೈಕಾರ ಹಾಕಿಸಿಕೊಳ್ಳಲು ಬಂದಿಲ್ಲ. ಈ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಉದಯ್ ಅವರನ್ನು ಗೆಲ್ಲಿಸಿ ಜಿಲ್ಲೆಯ 7 ಸ್ಥಾನಗಳ ಪೈಕಿ 6ರಲ್ಲಿ ಕಾಂಗ್ರೆಸ್ ಅನ್ನು ಬೆಂಬಲಿಸಿದ್ದೀರಿ. ಆಮೂಲಕ ರಾಜ್ಯದಲ್ಲಿ 136 ಸಂಖ್ಯಾಬಲದ ಬಲಿಷ್ಠ ಸರ್ಕಾರ ರಚನೆಗೆ ಸಹಕಾರ ನೀಡಿರುವ ನಿಮ್ಮ ಋಣ ತೀರಿಸಲು ನಾವಿಲ್ಲಿಗೆ ಬಂದಿದ್ದೇವೆ? ಎಂದು ತಿಳಿಸಿದರು.

ನೀರಾವರಿ ಇಲಾಖೆಯ ಕಚೇರಿಯನ್ನು ನಾನು ಆರಂಭಿಸುತ್ತಿದ್ದೇನೆ. ಮಳವಳ್ಳಿವರೆಗೂ ನೀರು ಹರಿಸಿ, ಮದ್ದೂರಿನ ಕಾಲುವೆಗಳ ಅಭಿವೃದ್ಧಿ ದೃಷ್ಟಿಯಿಂದ ಸುಮಾರು 500 ಕೋಟಿಗೂ ಹೆಚ್ಚು ಮೊತ್ತದ ಹಣವನ್ನು ನೀಡಿದ್ದೇವೆ. ಚೆಲುವರಾಯಸ್ವಾಮಿ ಅವರು ಕೂಡ ಸಾಕ್ಷಿಗುಡ್ಡೆ ಬಿಟ್ಟು ಹೋಗಲು, ರೈತರ ಮಕ್ಕಳಿಗಾಗಿ ಕೃಷಿ ವಿವಿ ತರಲು ಮುಂದಾಗಿದ್ದಾರೆ. ಜಿಲ್ಲೆಯ ಏಳೂ ಕ್ಷೇತ್ರಗಳಲ್ಲಿ ವಿವಿಧ ಯೋಜನೆ ಹಮ್ಮಿಕೊಳ್ಳಲಾಗಿದೆ. ಈ ಜಿಲ್ಲೆಯಲ್ಲಿ ಅತಿಹೆಚ್ಚು ಶಾಸಕರು ಗೆದ್ದಾಗ ಕಾಂಗ್ರೆಸ್ ಸರ್ಕಾರ ರಚನೆಯಾಗಿದೆ? ಎಂದರು.

ನಾವು ನಮ್ಮ ಕರ್ತವ್ಯ ಮಾಡುತ್ತಿದ್ದೇವೆ. ಮಂಡ್ಯ ಜಿಲ್ಲೆಯ ಅಭಿವೃದ್ಧಿಗಾಗಿ ಇನ್ನು ಹಲವು ಕಾರ್ಯಕ್ರಮ ರೂಪಿಸುತ್ತಿದ್ದೇವೆ. ನಮ್ಮ ಸಚಿವರುಗಳು ತಮ್ಮ ತಮ್ಮ ಇಲಾಖೆಗಳ ಜವಾಬ್ದಾರಿ ವಹಿಸಿಕೊಂಡ ಬಳಿಕ ಬಡವರ ಬದುಕಿನಲ್ಲಿ ಸುಧಾರಣೆ ತರಲು ಕಾರ್ಯಕ್ರಮ ರೂಪಿಸಿದ್ದಾರೆ. ಎಂಎಲ್ ಸಿಗಳಾದ ದಿನೇಶ್ ಗೂಳಿಗೌಡ, ಮಧುಮಾದೇಗೌಡ ಅವರು ಉತ್ತಮ ಕೆಲಸ ಮಾಡುತ್ತಿದ್ದಾರೆ. ಜಿಲ್ಲೆಯ ಜೆಡಿಎಸ್ ನಾಯಕರಿಗೆ ಒಂದು ಮಾತು ಹೇಳಲು ಬಯಸುತ್ತೇನೆ. ನೀವು ನಿಮ್ಮ ಸಮಯ ವ್ಯರ್ಥ ಮಾಡಿಕೊಳ್ಳಬೇಡಿ. ಈಗೇನಿದ್ದರೂ ಕಾಂಗ್ರೆಸ್ ಕಾಲ. ಶಿವಪುರ ಸೌಧದಲ್ಲಿ ಹೇಗೆ ರಾಷ್ಟ್ರಧ್ವಜ ಹಾರುತ್ತಿದೆಯೋ ಅದೇ ರೀತಿ ರಾಜ್ಯದಲ್ಲಿ ಕಾಂಗ್ರೆಸ್ ಧ್ವಜ ನಿರಂತರವಾಗಿ ಹಾರಾಡಲಿದೆ. ನೀವು ನಿಮ್ಮ ಬದುಕನ್ನು ಗಮನದಲ್ಲಿಟ್ಟುಕೊಂಡು ಆಲೋಚಿಸಿ? ಎಂದು ಹೇಳಿದರು.

ಮದ್ದೂರಿಗೆ ದೊಡ್ಡ ಇತಿಹಾಸವಿದೆ. ಬ್ರಿಟೀಷರ ಆಳ್ವಿಕೆ ಸಮಯದಲ್ಲಿ ಎಸ್.ಎಂ ಕೃಷ್ಣ ಅವರ ತಂದೆ ಮಲ್ಲಯ್ಯ ಅವರು ಮೈಸೂರು ಆಳ್ವಿಕೆಯಲ್ಲಿ ಜನಪ್ರತಿನಿಧಿಯಾಗಿ ಆಳ್ವಿಕೆ ಮಾಡಿದ್ದರು. ಇದು ದೇಶದ ಸ್ವಾತಂತ್ರ್ಯ ಹೋರಾಟದ ನೆಲ. ಕೆಂಗಲ್ ಹನುಮಂತ್ಯ ಅವರ ಕಾಲದಲ್ಲಿ ಕಟ್ಟಿದ ಪ್ರಜಾಸೌಧವನ್ನು ಕಟ್ಟಿದ್ದರು. ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದ ನೆಲ ಇದು. ಈ ಜಿಲ್ಲೆಯಿಂದ ಅನೇಕ ನಾಯಕರು ಬೆಳೆದು ಬಂದಿದ್ದಾರೆ. ಈ ಭೂಮಿಯಲ್ಲಿ ನಾನು ಎಸ್.ಎಂ ಕೃಷ್ಣ ಅವರನ್ನು ನೆನೆಯುತ್ತೇನೆ? ಎಂದರು.

# ಯೆಮನ್‌ನಲ್ಲಿ ನಿಮಿಷಾ ಪ್ರಿಯಾ ಪುತ್ರಿ ಮಿಶೆಲ್ ಭೇಟಿ – ತಾಯಿಯ ಬಿಡುಗಡೆಗೆ ಮನವಿ ಸಲ್ಲಿಕೆ ಸಾಧ್ಯತೆ



**ಸನಾ:** ಯಮನ್ ದೇಶದಲ್ಲಿ ಗಲ್ಲು ಶಿಕ್ಷೆಗೊಳಗಾಗಿರುವ ಭಾರತದ ನಿಮಿಷಾ ಪ್ರಿಯಾ ಅವರೀಗ ಶಿಕ್ಷೆಯಿಂದ ತಾತ್ಕಾಲಿಕವಾಗಿ ಪಾರಾಗಿದ್ದಾರೆ. ಇದರ ಬೆನ್ನಲ್ಲೇ ಯೆಮನ್ ಗೆ ತಲುಪಿರುವ ಅವರ ಪುತ್ರಿ ಮಿಶೆಲ್ (19 ವರ್ಷ) ಅವರು ಯೆಮನ್ ದೇಶದ ರಾಜಧಾನಿಯಾದ ಸನಾ ನಗರವನ್ನು ತಲುಪಿದ್ದು ಅಲ್ಲಿ ತಮ್ಮ ತಾಯಿಯನ್ನು ಬಿಡುಗಡೆ ಮಾಡಬೇಕೆಂದು ಯೆಮನ್ ಸರ್ಕಾರವನ್ನು ಕೋರಿದ್ದಾರೆ.

ಭಾರತದ ಕ್ರೈಸ್ತಧರ್ಮೀಯ ಬೋಧಕರಾದ (ಇತಚಿಟಿರಜಟ್ಞಣ) ಕೆ.ಎ.ಪಾಲ್ ಎಂಬುವರ ಜೊತೆಗೆ ಸನಾ ನಗರಕ್ಕೆ ತೆರಳಿರುವ ಮಿಶೆಲ್, ಅಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಕೆ.ಎಲ್. ಪಾಲ್ ಅವರ ಪೂರ್ಣ ಹೆಸರು ಕಿಲಾರಿ ಆನಂದ್ ಪಾಲ್ ಎಂದಾಗಿದ್ದು ಇವರು ಮೂಲತಃ ಆಂಧ್ರಪ್ರದೇಶದವರು. ಅಮೆರಿಕದಲ್ಲಿ ಅವರು ಗ್ಲೋಬಲ್ ಪೀಸ್ ಇನಿಷಿಯೇಟಿವ್ ಎಂಬ ಸಂಸ್ಥೆಯನ್ನು ಕಟ್ಟಿದ್ದಾರೆ.

ಈಗ, ಇದೇ ಸಂಸ್ಥೆಯ ವತಿಯಿಂದ ಯೆಮನ್ ಸರ್ಕಾರಕ್ಕೆ ಪ್ರಿಯಾ ಅವರನ್ನು ಕ್ಷಮಿಸುವಂತೆ ಬೇಡಿಕೆಯನ್ನಿಟ್ಟಿದ್ದಾರೆ. ಆದರೂ, ಭಾರತ ಸರ್ಕಾರದ ಸತತ ಪ್ರಯತ್ನದ ನಂತರ, ಯೆಮನ್ ನಲ್ಲಿರುವ ಸರ್ಕಾರ, ಜು. 16ರಂದು ಗಲ್ಲಿಗೇರಿಸಬೇಕಿದ್ದ ಪ್ರಿಯಾ ಅವರ ಶಿಕ್ಷೆಯನ್ನು ಸದ್ಯದ ಮಟ್ಟಿಗೆ ಅಮಾನತು ಮಾಡಿದೆ.

ಈಗ, ಇದೇ ಸಂಸ್ಥೆಯ ವತಿಯಿಂದ ಯೆಮನ್ ಸರ್ಕಾರಕ್ಕೆ ಪ್ರಿಯಾ ಅವರನ್ನು ಕ್ಷಮಿಸುವಂತೆ ಬೇಡಿಕೆಯನ್ನಿಟ್ಟಿದ್ದಾರೆ. ಆದರೂ, ಭಾರತ ಸರ್ಕಾರದ ಸತತ ಪ್ರಯತ್ನದ ನಂತರ, ಯೆಮನ್ ನಲ್ಲಿರುವ ಸರ್ಕಾರ, ಜು. 16ರಂದು ಗಲ್ಲಿಗೇರಿಸಬೇಕಿದ್ದ ಪ್ರಿಯಾ ಅವರ ಶಿಕ್ಷೆಯನ್ನು ಸದ್ಯದ ಮಟ್ಟಿಗೆ ಅಮಾನತು ಮಾಡಿದೆ.

# ಮೈಸೂರು ನಾಲ್ವಡಿ ಒಡೆಯರನ್ನು ಸಿದ್ದರಾಮಯ್ಯಗೆ ಹೋಲಿಕೆ; ನನ್ನ ಹೇಳಿಕೆ ತಿರುಚಲಾಗಿದೆ, ಬಹಿರಂಗವಾಗಿ ಕ್ಷಮೆ ಕೇಳಲ್ಲ: ಯತೀಂದ್ರ

**ಮೈಸೂರು:** ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ಸಿಎಂ ಸಿದ್ದರಾಮಯ್ಯನವರಿಗೆ ಹೋಲಿಸಿ ಮಾತನಾಡಿದ ವಿಚಾರಕ್ಕೆ ಸಾಕಷ್ಟು ಟೀಕೆ ವ್ಯಕ್ತವಾಗುತ್ತಿದೆ. ಬಿಜೆಪಿ ನಾಯಕರು ವಿಧಾನ ಪರಿಷತ್ ಸದಸ್ಯ ಯತೀಂದ್ರ ಅವರ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಹಿನ್ನೆಲೆ, ಈ ವಿಚಾರದ ಬಗ್ಗೆ ಮೈಸೂರಿನಲ್ಲಿ ಮೌನ ಮುರಿದಿದ್ದಾರೆ.



ಮೈಸೂರಿನ ಅಭಿವೃದ್ಧಿಗೆ ನಾಲ್ವಡಿ ಮಹಾರಾಜರಿಗಿಂತ ಹೆಚ್ಚು ಅಥವಾ ಮಹಾರಾಜರಷ್ಟೇ ಅನುದಾನ ಕೊಟ್ಟು ಅಭಿವೃದ್ಧಿ ಮಾಡಿದ್ದು ಸಿದ್ದರಾಮಯ್ಯ ಮಾತ್ರ. ಸಾಕಷ್ಟು ಅಭಿವೃದ್ಧಿಯನ್ನು ಸಿದ್ದರಾಮಯ್ಯ ಮಾಡಿದ್ದಾರೆ ಎಂದು ಮೈಸೂರಿನಲ್ಲಿ ಯತೀಂದ್ರರವರು ಶುಕ್ರವಾರ ಹೇಳಿದ್ದರು. ಸದ್ಯ ಆ ಬಗ್ಗೆ ಸಮರ್ಥಿಸಿಕೊಂಡಿದ್ದಾರೆ.

ನಾನು ಯಾವುದೇ ಕೆಟ್ಟ ಉದ್ದೇಶದಿಂದ ಆ ರೀತಿ ಹೇಳಿಲ್ಲ. ನಾಲ್ವಡಿಯವರ ಬಗ್ಗೆ ನನಗೆ ಗೌರವ ಇದೆ. ಆದರೆ, ಸಿದ್ದರಾಮಯ್ಯನವರು ಮೈಸೂರಿಗೆ ಹೆಚ್ಚು ಅನುದಾನ ನೀಡಿದ್ದಾರೆ ಎಂದು ಹೇಳುವ ಉದ್ದೇಶವಿತ್ತು. ವಿರೋಧ ಪಕ್ಷಗಳು ಸುಖಾ ಸುಮ್ಮನೆ ಈ ವಿಚಾರವನ್ನು ದೊಡ್ಡದು ಮಾಡುತ್ತಿವೆ ಎಂದು ಹೇಳಿದರು.

ನಾಲ್ವಡಿಯವರ ಬಗ್ಗೆ ಅಪಾರ ಗೌರವ ಇದೆ. ನಾನು ಯಾವುದೇ ದುರುದ್ದೇಶ ಇಟ್ಟುಕೊಂಡು ಹೇಳಿದ ಹೇಳಿಕೆಯಲ್ಲ.

ನಾಲ್ವಡಿ ಕೃಷ್ಣ ರಾಜ ಒಡೆಯರ ಆಡಳಿತ ಎಲ್ಲರಿಗೂ ಸ್ಪೂರ್ತಿಯಾಗಿದೆ. ಒಡೆಯರ್ ಅವರ ಬಗ್ಗೆ ಸಭೆ ಸಮಾರಂಭಗಳಲ್ಲಿ ಗೌರವಯುತವಾಗಿ ಮಾತನಾಡಿದ್ದೇವೆ ಎಂದು ಅವರು ತಿಳಿಸಿದ್ದಾರೆ. ನಾಲ್ವಡಿ ಅವರ ಕೊಡುಗೆಗಳನ್ನು ಕಡಿಮೆ ಮಾಡಬೇಕು. ಗೌಣ ಮಾಡಬೇಕು ಅನ್ನೋ ದೃಷ್ಟಿಯಿಂದ ಮಾತನಾಡಿಲ್ಲ" ಎಂದು ಸ್ಪಷ್ಟನೆ ನೀಡಿದರು.

ಸೂಪರ್ ಹಿಟ್ 'ಕೃಷ್ಣಂ ಪ್ರಣಯ ಸಖಿ' ಜೋಡಿ ಹೊಸ ಸಿನಿಮಾ:

# ಗೋಲ್ಡನ್ ಸ್ಟಾರ್ ಮುಂದಿನ ಚಿತ್ರಕ್ಕೆ ಶ್ರೀನಿವಾಸ್ ರಾಜು ಆಕ್ಷನ್ ಕಟ್



ಗೋಲ್ಡನ್ ಸ್ಟಾರ್ ಗಣೇಶ್ ನಟನೆಯ 'ಕೃಷ್ಣಂ ಪ್ರಣಯ ಸಖಿ' ಸಿನಿಮಾ ಕಳೆದ ವರ್ಷ ಸೂಪರ್ ಹಿಟ್ ಆಗಿತ್ತು. ಬಹಳ ದಿನಗಳ ಬಳಿಕ ಗಣಿಗೆ ಒಂದೊಳ್ಳೆ ಬ್ರೇಕ್ ಸಿಕ್ಕಿತ್ತು. ಇದೀಗ 'ಕೃಷ್ಣಂ ಪ್ರಣಯ ಸಖಿ' ಕಾಂಬಿನೇಷನ್‌ನಲ್ಲಿ ಮತ್ತೊಂದು ಸಿನಿಮಾ ಬರುತ್ತಿದೆ.

ಇನ್ನೂ ಹೆಸರಿಡದ ಈ ಸಿನಿಮಾದ ಮುಹೂರ್ತ ಸಮಾರಂಭ ಆಗಸ್ಟ್ 3 ರಂದು ನಡೆದಿದ್ದು, ಮೈಸೂರು ಹಾಗೂ ಸುತ್ತಮುತ್ತಲಿನಲ್ಲಿ ಚಿತ್ರ ಚಿತ್ರೀಕರಣ ನಡೆಯುತ್ತಿದೆ.

ಸಮೃದ್ಧಿ ಮಂಜುನಾಥ್ ನಿರ್ಮಿಸಿದ ಮತ್ತು ವಿರಾಟ್ ಸಾಯಿ ಕ್ರಿಯೇಷನ್ಸ್ ಪ್ರಸ್ತುತಪಡಿಸಿದ ಕೆವಿಸಿ ಪ್ರೊಡಕ್ಷನ್ಸ್ ಬೆಂಬಲಿತಜ ಈ ಚಿತ್ರದಲ್ಲಿ ಗಣೇಶ್ ಅವರು, ಈ ಹಿಂದೆ ಎಂದೂ ನಟಿಸದ ಭಿನ್ನವಾದ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರವು ರೊಮ್ಯಾಂಟಿಕ್ ಫ್ಯಾಮಿಲಿ ಕಥೆಯನ್ನು ಹೊಂದಿದೆ ಎಂದು ಹೇಳಲಾಗುತ್ತಿದೆ.

ಚಿತ್ರದಲ್ಲಿ ಇಬ್ಬರು ನಾಯಕರಿದ್ದು, ದೇವಿಕಾ ಭಟ್ ಅವರು ಈಗಾಗಲೇ ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. 2ನೇ ನಾಯಕಿಗಾಗಿ ಚಿತ್ರತಂಡ ಹುಡುಕಾಟ ಮುಂದುವರೆಸಿದೆ. ಇನ್ನು ಪಾತ್ರವರ್ಗಗಳ ಬಗ್ಗೆ ಚಿತ್ರತಂಡ ಎಲ್ಲಿಯೂ ಗುಟ್ಟು ಬಿಟ್ಟುಕೊಟ್ಟಿಲ್ಲ.

ಇನ್ನು ತಾಂತ್ರಿಕ ತಂಡದಲ್ಲಿ ಛಾಯಾಗ್ರಾಹಕರಾಗಿ ವೆಂಕಟ್ ಪ್ರಸಾದ್ , ಹಾಯ್ ನಾನ ಮತ್ತು ಹೃದಯಂ ಚಿತ್ರ ಖ್ಯಾತಿಯ ಹೇಶಮ್ ಅಬ್ದುಲ್ ವಹಾಬ್ ಸಂಗೀತ ಸಂಯೋಜಿಸಲಿದ್ದಾರೆ. ವಿಜಯ್ ಈಶ್ವರ್ ಮತ್ತು ಕ್ರಾಂತಿ ಕುಮಾರ್ ಚಿತ್ರಕ್ಕೆ ಸಂಭಾಷಣೆ ಬರೆಯುತ್ತಿದ್ದಾರೆ.

ನಿರ್ಮಾಪಕರು 120 ದಿನಗಳ ಚಿತ್ರೀಕರಣ ವೇಳಾಪಟ್ಟಿಯನ್ನು ಯೋಜಿಸಿದ್ದಾರೆ, ಮೊದಲ 50 ದಿನಗಳ ಚಿತ್ರೀಕರಣ ಈಗಾಗಲೇ ಮೈಸೂರು ಮತ್ತು ಸುತ್ತಮುತ್ತ ನಡೆಯುತ್ತಿದೆ. ಇದಲ್ಲದೆ, ಚಿತ್ರ ತಂಡವು ಕೇರಳ, ಉತ್ತರ ಭಾರತ, ಭೂತಾನ್ ಮತ್ತು ಪ್ಯಾರಿಸ್‌ನ ಸುಂದರವಾದ ಸ್ಥಳಗಳನ್ನೂ ಕೂಡ ಅನ್ವೇಷಿಸುತ್ತಿದೆ ಎಂದು ತಿಳಿದುಬಂದಿದೆ.

ಏತನ್ಮಧ್ಯೆ, ಗಣೇಶ್ ಅವರು ವಿಖ್ಯಾತ್ ನಿರ್ದೇಶನದ ಯುವರ್ಸ್ ಸಿನ್ಸರ್ಲಿ ರಾಮ್, ಧನಂಜಯ್ ಜೊತೆ ಪಿನಾಕಾ ಮತ್ತು ಗೀತರಚನೆಕಾರ-ನಿರ್ದೇಶಕ ಅರಸು ಅಂತಾರೆ ಅವರ ಚಿತ್ರಗಳಲ್ಲೂ ನಟಿಸುತ್ತಿದ್ದಾರೆ.

# ಕಮಲ್ ಶ್ರೀದೇವಿ ಸಿನಿಮಾ ರಿಲೀಸ್ ಡೇಟ್ ಫಿಕ್ಸ್!

ಶೀರ್ಷಿಕೆಯಿಂದಲೇ ಸಂಚಲನ ಸೃಷ್ಟಿಸಿರುವ 'ಕಮಲ್ ಶ್ರೀದೇವಿ' ಸಿನಿಮಾ ಬಿಡುಗಡೆ ದಿನಾಂಕ ಘೋಷಣೆಯಾಗಿದ್ದು, ಸೆಪ್ಟೆಂಬರ್ 19 ರಂದು ತೆರೆಗೆ ಬರಲಿದೆ.

ಸಚಿನ್ ಚೆಲುವರಾಯಸ್ವಾಮಿ, ಸಂಗೀತ ಭಟ್ ಮತ್ತು ಕಿಶೋರ್ ನಟಿಸಿರುವ ಈ ಚಿತ್ರದ ಟೀಸರ್ ಇತ್ತೀಚೆಗಷ್ಟೇ ಬಿಡುಗಡೆಗೊಂಡಿತು.

ವಿಎ ಸುನಿಲ್ ಕುಮಾರ್ ನಿರ್ದೇಶಿಸಿದ ಈ ಚಿತ್ರದಲ್ಲಿ ರಮೇಶ್ ಇಂದಿರಾ, ಮಿತ್ರ ಮತ್ತು ಉಮೇಶ್ ಕೂಡ ನಟಿಸಿದ್ದಾರೆ. ಚಿತ್ರವನ್ನು ಸ್ವರ್ಣಾಂಬಿಕಾ ಪಿಕ್ಚರ್ಸ್ ಅಡಿಯಲ್ಲಿ ಬಿಕೆ ಧನಲಕ್ಷ್ಮಿ ನಿರ್ಮಿಸಿದ್ದಾರೆ.

ರಾಜವರ್ಧನ್ ಸಹ-ನಿರ್ಮಾಣ, ಕೀರ್ತನ್ ಸಂಗೀತ ಸಂಯೋಜಿಸಿದ್ದಾರೆ. ನಾಗೇಶ್ ವಿ ಆಚಾರ್ಯ ಛಾಯಾಗ್ರಾಹಕರಾಗಿ ತಮ್ಮ ಕೈಚಳಕ ತೋರಿಸಿದ್ದಾರೆ.

ಚಿತ್ರದಲ್ಲಿ ಪೊಲೀಸ್ ಪಾತ್ರದಲ್ಲಿ ನಟ ಕಿಶೋರ್ ಅವರು ನಟಿಸಿದ್ದು, ಚಿತ್ರದ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ. "ಕಮಲ್ ಶ್ರೀದೇವಿಯ ಭಾಗವಾಗಲು ನನಗೆ ಸಂತೋಷವಾಗಿದೆ. ಏಕೆಂದರೆ ಇವತ್ತಿಗೆ ಬಹಳ ಪ್ರಸ್ತುತವಾದ ವಿಷಯ ಈ ಸಿನಿಮಾದಲ್ಲಿದೆ. ಅತ್ಯಾಚಾರ, ಕೊಲೆ ಎನ್ನುವುದು ಪ್ರತಿನಿತ್ಯದ ಸುದ್ದಿಯಾಗಿದೆ. ಇದು ಬಹಳ ಸಹಜ ಎನ್ನುವ ಸ್ಥಿತಿ ನಿರ್ಮಾಣವಾಗಿರುವುದು ಅಪಾಯಕಾರಿ. ಇಂತಹ ಘಟನೆಗಳು ನಮ್ಮಲ್ಲೇ ಒಬ್ಬರಿಗೆ ಆದಾಗ ಅದರ ಪರಿಣಾಮ ತಿಳಿಯುತ್ತದೆ. ಅಲ್ಲಿಯವರೆಗೂ ಕಾಯಬೇಕೇ ಅಥವಾ ಅದರ ಮೊದಲೇ ದನಿ ಎತ್ತಬೇಕೇ ಎಂದು ಯೋಚಿಸಬೇಕು.

ಧರ್ಮಸ್ಥಳದಲ್ಲಿ ಸೌಜನ್ಯ ಪ್ರಕರಣವಾಗಿ 12 ವರ್ಷವಾಯಿತು. ಇದೂ ದೊಡ್ಡ ಮಟ್ಟದ ಸುದ್ದಿಯಾಯಿತು. ಆದರೆ, ಇನ್ನೂ ನ್ಯಾಯ ಸಿಕ್ಕಿಲ್ಲ ಎನ್ನುವಾಗ ನಮ್ಮ ನ್ಯಾಯದ ವ್ಯವಸ್ಥೆ, ಪೊಲೀಸ್ ವ್ಯವಸ್ಥೆ ಮೇಲೆ ಪ್ರಶ್ನಾರ್ಥಕ ಚಿಹ್ನೆ ಬರುತ್ತದೆ. ನಮ್ಮನ್ನು ದನಿ ಎತ್ತುವುದಕ್ಕೆ ಈ ಸಿನಿಮಾ ಪ್ರೇರೇಪಿಸುತ್ತದೆ. ಹೀಗಾಗಿ, ನಾನು ಈ



ಸಿನಿಮಾ ಒಪ್ಪಿಕೊಂಡೆ. ಸಮಾಜದ ಬೇರೆ ಬೇರೆ ವರ್ಗಗಳಿಂದ ಬಂದ ಪಾತ್ರಗಳು ಒಂದು ಹೆಣ್ಣನ್ನು ನೋಡುವ ದೃಷ್ಟಿಕೋನ ಆ ಹೆಣ್ಣಿನ ಜೀವನದ ಮೇಲೆ ಯಾವ ರೀತಿ ಪರಿಣಾಮ ಬೀರುತ್ತದೆ ಎನ್ನುವುದನ್ನು ಈ ಚಿತ್ರದಲ್ಲಿ ತೋರಿಸಲಾಗಿದೆ. ಈ ಚಿತ್ರದ ಮೂಲಕ ನಾವು ಕೇವಲ ನಟನೆ ಮಾಡುತ್ತಿಲ್ಲ, ಧ್ವನಿ ಎತ್ತುತ್ತಿದ್ದೇವೆ. ಮೌನ ಯಾರಿಗೂ ಸಹಾಯ ಮಾಡುವುದಿಲ್ಲ ಎಂದು ಹೇಳಿದರು.

ನಿರ್ಮಾಪಕ ರಾಜವರ್ಧನ್ ಮಾತನಾಡಿ, ಕಾರಿನಲ್ಲಿ ಹೋಗುತ್ತಿರುವಾಗ 'ನೀನೆಂದರೆ ನನಗೆ ಆಸೆಯೂ ಅಲ್ಲ, ಆಕರ್ಷಣೆಯೂ ಅಲ್ಲ. ಮನದಲ್ಲಿ ಮೂಡಿದ ಮಧುರ ಭಾವನೆಯಷ್ಟೇ' ಎಂದು ಆಟೋ ಹಿಂದೆ ಚಾಲಕನೊಬ್ಬ ಬರೆದಿದ್ದನ್ನು ನೋಡಿದ್ದೆ. ಈ ಒನ್‌ಲೈನ್ ಅನ್ನೇ ಇದೀಗ ಸಿನಿಮಾ ಮಾಡಿದ್ದೇವೆ. ಕಮಲ್‌ಗೆ ಶ್ರೀದೇವಿ ಆಸೆಯೂ ಅಲ್ಲ, ಆಕರ್ಷಣೆಯೂ ಅಲ್ಲ. ಆಕೆ ಅವನ ಮನದಲ್ಲಿ ಮೂಡಿದ ಮಧುರ ಭಾವನೆಯಷ್ಟೇ. ಅವಳ ಮೇಲೆ ಈ ಸಿನಿಮಾದ ಕಥೆ ಇದೆ' ಎಂದರು.

ಕಳೆದ ಆರು ತಿಂಗಳಿಂದ ಕನ್ನಡ ಚಿತ್ರರಂಗ ಕುಗ್ಗಿತ್ತು. ಈಗ ಚೇತರಿಸಿಕೊಂಡಿತು. ಯಾಕೆ ಚೆನ್ನಾಗಿರಲಿಲ್ಲ, ಏಕೆ ಚೆನ್ನಾಗಿ ಆಗುತ್ತಿದೆ ಎನ್ನುವುದಕ್ಕೂ ನಮ್ಮ ಸಿನಿಮಾಗಳೇ ಕಾರಣ. ಸುಗ್ಗಿ ಕಾಲ ಆರಂಭವಾಗಿದೆ. ಈ ಅವಧಿಯಲ್ಲೇ ನಮ್ಮ ಕಾಂಟೆಂಟ್‌ಗಳನ್ನು ಜನರ ಮುಂದೆ ಇಡಬೇಕಿದೆ. ಕಥೆ ಕಾರಣಕ್ಕಾಗಿಯೇ ಜನರು ಮತ್ತೆ ಚಿತ್ರಮಂದಿರಗಳತ್ತ ಬರುತ್ತಿದ್ದಾರೆ. ಚಿತ್ರರಂಗದ ಎಲ್ಲಾ ಪ್ರಶ್ನೆಗಳಿಗೆ ನಮ್ಮಲ್ಲೇ ಉತ್ತರವಿದೆ. ಇನ್ನು ಮೇಲೆ ಸಿನಿಮಾ ಮಾಡುವವರು ಸ್ಕ್ರಿಪ್ಟ್ ಬಗ್ಗೆ ಗಂಭೀರವಾಗಬೇಕು.

ನಟನೆಯ ಜೊತೆಗೆ ಹಲವರು ಸಿನಿಮಾ ನಿರ್ದೇಶನ, ನಿರ್ಮಾಣ ಹೀಗೆ ಎರಡು ಕೆಲಸಗಳನ್ನು ಮಾಡುತ್ತಿದ್ದಾರೆ. ಈ ಸಾಲಿಗೆ ಸೇರುವ ಅನಿವಾರ್ಯ ನನಗೂ ಇತ್ತು. ವಾಣಿಜ್ಯ ಮಂಡಳಿಯೂ ಒಂದೇ ದಿನ ಆರೇಳು ಸಿನಿಮಾ ಬಿಡುಗಡೆಗೆ ಕೊಂಚ ಕಡಿವಾಣ ಹಾಕಬೇಕಿದೆ. ಸಿನಿಮಾ ತಂಡದ ಶ್ರಮ ಒಂದೇ ಶುಕ್ರವಾರದಲ್ಲಿ ಹಾಳಾಗಬಾರದು ಎಂದರು.

ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿರುವ ಸಂಗೀತಾ ಭಟ್ ಅವರು ಮಾತನಾಡಿ, ಶ್ರೀದೇವಿಯಂತಹ ಪಾತ್ರವನ್ನು ನಾನು ಮಾಡಬಹುದೇ ಎಂಬ ಬಗ್ಗೆ ನಿರ್ದೇಶಕರಿಗೆ ಆರಂಭದಲ್ಲಿ ಸ್ವಲ್ಪ ಹಿಂಜರಿಕೆ ಇತ್ತು. ಆದರೆ, ಚಿತ್ರೀಕರಣದ ಬಳಿಕ ಇದೀಗ ಅವರು ತೃಪ್ತರಾಗಿದ್ದಾರೆ. ರಾಜವರ್ಧನ್ ನನ್ನ ಮೇಲೆ ನಂಬಿಕೆ ಇಟ್ಟಿದ್ದರು. ನಿರ್ದೇಶಕ ಸುನಿ ಮತ್ತು ಇಡೀ ತಂಡ ನನಗೆ ಉತ್ತಮ ಸ್ಥಾನ ನೀಡಿದರು. ಚಿತ್ರವು ಪ್ರೇಕ್ಷಕರೊಂದಿಗೆ ಸಂಪರ್ಕ ಸಾಧಿಸುತ್ತದೆ ಎಂಬ ವಿಶ್ವಾಸ ನನಗಿದೆ ಎಂದು ಹೇಳಿದರು.

# ಮತ್ತೆ ಮಳೆ ಹೊಯ್ಯುತ್ತಿದೆ' ಚಿತ್ರೀಕರಣ ಪೂರ್ಣ



ಪ್ರೀತಿ, ನೆನಪು ಮತ್ತು ಎರಡನೇ ಅವಕಾಶಗಳ ವಿಷಯಗಳನ್ನು ಅನ್ವೇಷಿಸುವ ಮತ್ತೆ ಮಳೆ ಹೊಯ್ಯುತ್ತಿದೆ ಸಿನಿಮಾದ ಚಿತ್ರೀಕರಣ ಪೂರ್ಣಗೊಂಡಿದ್ದು, ಚಿತ್ರತಂಡ ತಂಡ ಇದೀಗ ಪೋಸ್ಟ್-ಪ್ರೊಡಕ್ಷನ್ ಕೆಲಸದಲ್ಲಿ ಬ್ಯುಸಿಯಾಗಿದೆ. ಅಕ್ಟೋಬರ್ ನಲ್ಲಿ ಚಿತ್ರ ಬಿಡುಗಡೆ ಮಾಡಲು ಸಜ್ಜಾಗುತ್ತಿದೆ.

ಶ್ರೀ ಗವಿರಂಗನಾಥಸ್ವಾಮಿ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಕಲಾ ನಿರ್ದೇಶಕರಾಗಿರುವ ಗಂಗಾಧರ್ ಅವರು ತಮ್ಮ ಚೊಚ್ಚಲ ಸಿನಿಮಾವನ್ನು ನಿರ್ಮಾಣ ಮಾಡುತ್ತಿದ್ದಾರೆ.

ಗಂಗಾಧರ್ ಅವರು ಪತ್ನಿ ಸುಮ ಹೆಸರಿನಲ್ಲಿ ಸಿನಿಮಾಗೆ ಬಂಡವಾಳ ಹೂಡಿದ್ದು, ಶ್ರುತಿ ಅನಿಲ್‌ಕುಮಾರ್ ಸಹ ನಿರ್ಮಾಪಕರು ಜೊತೆಗೆ ಪ್ರಾಧ್ಯಾಪಕರ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಹಲವು ವರ್ಷಗಳಿಂದ ಸಿನಿಮಾರಂಗದಲ್ಲಿ ಸಕ್ರಿಯರಾಗಿರುವ ಪರಮ್‌ಗುಬ್ಬಿ ನಿರ್ದೇಶನ ಮಾಡಿದ್ದಾರೆ. ಚಿತ್ರಕಥೆ-ಸಂಭಾಷಣೆ-ಸಾಹಿತ್ಯ ಕಬ್ಬಡಿ ನರೇಂದ್ರಬಾಬು, ಸಂಗೀತ ಅತಿಶಯಜೈನ್ ಅವರದಾಗಿದೆ. ಈ ಚಿತ್ರವು ಕನ್ನಡ ಬರಹಗಾರ ಕೆ ಸದಾಶಿವ ಅವರ ಸಣ್ಣ ಕಥೆಯನ್ನು ಆಧರಿಸಿದೆ.

ಅಮೆರಿಕದಲ್ಲಿ ನೆಲೆಸಿರುವ ದಿವಂಗತ ಲೇಖಕರ ಮಗಳ ಮೂಲಕ ಚಿತ್ರ ತಂಡವು ಹಕ್ಕುಗಳನ್ನು ಪಡೆದುಕೊಂಡಿದ್ದು, ಕನ್ನಡ ಸಾಹಿತ್ಯ ಪರಿಷತ್ತಿಗೆ ದೇಣಿಗೆ ನೀಡುವ ಮೂಲಕ ಬರೆಗಾರ ಸದಾಶಿವ ಅವರಿಗೆ ಗೌರವವನ್ನು ನೀಡಲು ಮುಂದಾಗಿದೆ.ಚಿತ್ರೀಕರಣ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಇತ್ತೀಚೆಗೆ ಚಿತ್ರತಂಡ ಪತ್ರಿಕಾಗೋಷ್ಠಿ ನಡೆಸಿ ಮಾಹಿತಿ ಹಂಚಿಕೊಂಡಿತು.

ಚಿತ್ರವು 80ರ ದಶಕ ಹಾಗೂ 2000ನೇ ಇಸವಿಯಲ್ಲಿ ನಡೆಯುವ ಎರಡು ಕಾಲಘಟ್ಟದ ಅಂಶಗಳನ್ನು ಹೊಂದಿದೆ. ಮೊದಲನೇ ಜೋಡಿಯ ಪ್ರೇಮ ಕತೆ ವಿಫಲವಾಗುತ್ತದೆ. ಎರಡನೇ ಜೋಡಿಯ ಲವ್ ಸ್ಟೋರಿ ಯಶಸ್ಸು ಕಾಣುತ್ತದೆ. ಇವೆರೆಡರ ನಡುವೆ ಸನ್ನಿವೇಶಗಳು ಮನಸ್ಸನ್ನು ಕದಡುತ್ತದೆ. ಸಿನಿಮಾದಲ್ಲಿ ಮಳೆಯು ಮಹತ್ವದ ಪಾತ್ರವನ್ನು ವಹಿಸಿದೆ. ಜತೆಗೆ ಅರ್ಥಪೂರ್ಣ ಸಂದೇಶಗಳು ಅಲ್ಲಲ್ಲಿ ಬರಲಿವೆ ಎಂದು ಚಿತ್ರತಂಡ ಮಾಹಿತಿ ನೀಡಿದೆ.

ಚಿತ್ರವನ್ನು ಶೃಂಗೇರಿ, ಹೊರನಾಡು, ಕೊಪ್ಪ, ಹರಿಹರಪುರ, ಆಗುಂಬೆ ಸುಂದರ ತಾಣಗಳಲ್ಲಿ ಎಲ್ಲರ ಸಹಕಾರದಿಂದ 24 ದಿನಗಳಲ್ಲಿ ಯಶಸ್ವಿಯಾಗಿ ಚಿತ್ರೀಕರಣ ಮುಗಿಸಿದ್ದೇವೆ. ಸದ್ಯ ಪೋಸ್ಟ್ ಪ್ರೊಡಕ್ಷನ್ ನಡೆಯುತ್ತಿದ್ದು, ಅಕ್ಟೋಬರ್‌ದಲ್ಲಿ ತೆರೆಗೆ ತರಲು ಚಿಂತನೆ ನಡೆಸಲಾಗಿದೆ ಎಂದು ತಿಳಿಸಿದೆ.

ಚಿತ್ರಕ್ಕೆ ಶಾಂತ ರಾವ್ ಎಪ್ಪಲಿ ಛಾಯಾಗ್ರಹಣ ನೀಡಿದ್ದರೆ, ಸಂಕಲನದಲ್ಲಿ ಧನುಷ್ ವೀರ್, ನಿರ್ಮಾಣ ವಿನ್ಯಾಸವನ್ನು ಬಾಬು ಖಾನ್ ನಿರ್ವಹಿಸಿದ್ದಾರೆ. ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯನ್ನು ಕಬ್ಬಡಿ ನರೇಂದ್ರ ಬಾಬು ಬರೆದಿದ್ದಾ

# ಬಾಕ್ಸ್ ಆಫೀಸ್‌ನಲ್ಲಿ ನಿಲ್ಲದ 'ಸು ಫ್ರಮ್ ಸೋ' ಅಬ್ಬರ

**ಸ್ಟಾರ್ ನಟರು ಇಲ್ಲದೆಯೇ ಸಿನಿಮಾ ಗೆಲ್ಲುವುದಿಲ್ಲ ಎನ್ನುವ ಕಾರದಲ್ಲಿ ಯಾವುದೇ ಸ್ಟಾರ್ ನಟರು ಇಲ್ಲದೆಯೇ ಹೊಸಬರ ಸಿನಿಮಾ 'ಸು ಫ್ರಮ್ ಸೋ' ಇದೀಗ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಲೈಟರ್ ಬುದ್ಧ ಫಿಲ್ಮ್ ಅಡಿಯಲ್ಲಿ ರಾಜ್ ಬಿ ಶೆಟ್ಟಿ ನಿರ್ಮಿಸಿ, ಜೆಪಿ ತುಮಿನಾಡ್ ನಿರ್ದೇಶಿಸಿದ 'ಸು ಫ್ರಮ್ ಸೋ' ಬಾಕ್ಸ್ ಆಫೀಸ್‌ನಲ್ಲಿ ಅಬ್ಬರ ಎಬ್ಬಿಸಿದೆ. ದಿನದಿಂದ ದಿನಕ್ಕೆ ಚಿತ್ರವನ್ನು ವೀಕ್ಷಿಸಲು ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಕರೆಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.**

**ಬಿಡುಗಡೆಯಾದ 10ನೇ ದಿನವೂ ಚಿತ್ರವು ಓಟವನ್ನು ಮುಂದುವರಿಸಿದ್ದು, ವಿಶ್ವದಾದ್ಯಂತ ಒಟ್ಟು 36 ಕೋಟಿಗೂ ಅಧಿಕ ಕಲೆಕ್ಷನ್ ಮಾಡಿದೆ ಮತ್ತು ಃಠಠಇಒಥಿಖ್ಮಠಿ ನಲ್ಲಿಯೇ 1 ಮಿಲಿಯನ್‌ಗಿಂತಲೂ ಹೆಚ್ಚು ಟಿಕೆಟ್ ಮಾರಾಟ ಕಂಡಿದೆ. ಈ ಚಿತ್ರಕ್ಕೆ ದಿನದಿಂದ ದಿನಕ್ಕೆ ಬೇಡಿಕೆ ಹೆಚ್ಚಾಗುತ್ತಿದ್ದು, ಪ್ರೇಕ್ಷಕರು ಈಗಲೂ ಟಿಕೆಟ್‌ಗಳನ್ನು ಪಡೆಯಲು ಪರದಾಡುತ್ತಿದ್ದಾರೆ.**



ರಾಜ್ ಬಿ ಶೆಟ್ಟಿ ಅವರೇ ಗುರುಜಿ ಪಾತ್ರದಲ್ಲಿ ಮತ್ತು ಜೆ ಪಿ ತುಮಿನಾಡ್ ನಟಿಸಿರುವ 'ಸು ಫ್ರಮ್ ಸೋ' ಚಿತ್ರದಲ್ಲಿ ಶನೀಲ್ ಗೌತಮ್, ಪ್ರಕಾಶ್ ತುಮಿನಾಡ್, ದೀಪಕ್ ರೈ ಪಣಜಿ, ಸಂಧ್ಯಾ ಅರಕೆರೆ ಮತ್ತು ಮೈಮ್ ಪ್ರಸಾದ್ ನಟಿಸಿದ್ದಾರೆ. ಚಿತ್ರಕ್ಕೆ ಸುಮೇಧ್ ಕೆ ಸಂಗೀತ ಸಂಯೋಜಿಸಿದ್ದಾರೆ.

ಎರಡನೇ ವಾರಕ್ಕೆ ಕಾಲಿಡುತ್ತಿರುವ ಸು ಫ್ರಮ್ ಸೋ ಚಿತ್ರವು ಶನಿವಾರ 5.20 ಕೋಟಿ ಗಳಿಕೆ ಕಂಡಿದೆ. ಇದು ಒಂದೇ ದಿನದ ಗರಿಷ್ಠ ಗಳಿಕೆಯಾಗಿದೆ. ಭಾನುವಾರ ಕೂಡ ಕರ್ನಾಟಕದಾದ್ಯಂತ ಚಿತ್ರಮಂದಿರಗಳಲ್ಲಿ ಹೌಸ್‌ಫುಲ್ ಬೋರ್ಡ್‌ಗಳು ಕಾಣಿಸಿಕೊಂಡಿವೆ. ಚಿತ್ರ ವೀಕ್ಷಿಸಲು ತೆರಳಿದ್ದವರು ಹೊಟ್ಟೆ ಹುಣ್ಣಾಗುವಷ್ಟು ನಕ್ಕು ಹಗುರಾಗುತ್ತಿದ್ದಾರೆ.

ಬೆಂಗಳೂರಿನಲ್ಲಿ ಮೊದಲ ದಿನ ಕೇವಲ 100ಕ್ಕೂ ಹೆಚ್ಚು ಪ್ರದರ್ಶನ ಕಾಣುತ್ತಿತ್ತು. ಆದರೆ, ಇದೀಗ ಈ ಸಂಖ್ಯೆ 550ಕ್ಕೆ ಏರಿದೆ. ಮಂಗಳೂರಿನಲ್ಲಿ, ಚಿತ್ರವು ಪ್ರತಿದಿನ 70 ಕ್ಕೂ ಹೆಚ್ಚು ಪ್ರದರ್ಶನ ಕಾಣುತ್ತಿದೆ. ಮೈಸೂರಿನಲ್ಲಿ 55 ಕ್ಕೂ ಹೆಚ್ಚು, ಹುಬ್ಬಳ್ಳಿ,

ಶಿವಮೊಗ್ಗ, ಮಣಿಪಾಲ ಮತ್ತು ಮುಂಬೈನಂತಹ ನಗರಗಳಲ್ಲಿ ತಲಾ 25ಕ್ಕೂ ಹೆಚ್ಚು ಪ್ರದರ್ಶನಗಳನ್ನು ಕಾಣುತ್ತಿದೆ.

ಆಗಸ್ಟ್ 1 ರಂದು ಮಲಯಾಳಂ ಮತ್ತು ವಿದೇಶಿ ಮಾರುಕಟ್ಟೆಗಳಲ್ಲಿ ಚಿತ್ರ ಬಿಡುಗಡೆಯಾಗಿದ್ದು, ಕನ್ನಡ ಹಿಟ್‌ಗೆ ಹೊಸ ರೆಕ್ಕೆಗಳನ್ನು ನೀಡಿದೆ. ತೆಲುಗು ಡಬ್ಬಿಂಗ್ ಆವೃತ್ತಿ ಆಗಸ್ಟ್ 8 ರಂದು ತೆರೆಗೆ ಬರಲಿದೆ. ಇದನ್ನು ಮೈತ್ರಿ ಮೂವಿ ಮೇಕರ್ಸ್ ಬೆಂಬಲಿಸುತ್ತದೆ. ಈಮಧ್ಯೆ, ತಮಿಳು ರಿಮೇಕ್ ಕೂಡ ಬರಲಿದ್ದು, ಶೀಘ್ರದಲ್ಲೇ ಅಧಿಕೃತ ಘೋಷಣೆಯಾಗುವ ನಿರೀಕ್ಷೆಯಿದೆ.

## 100 ಕೋಟಿ ಕ್ಲಬ್ ಸೇರಿದ ಭಾರತದ ಮೊಟ್ಟ ಮೊದಲ ಅನಿಮೇಷನ್ ಚಿತ್ರ

**ಬೆಂಗಳೂರು:** ಕನ್ನಡದ ಅನಿಮೇಷನ್ ಸಿನಿಮಾ ಮಹಾವತಾರ ನರಸಿಂಹ ಚಿತ್ರ ಬ್ಲಾಕ್ ಬಸ್ಟರ್ ಪಟ್ಟಿಗೆ ಸೇರ್ಪಡೆಯಾಗಿದ್ದು, ಚಿತ್ರದ ಗಳಿಕೆ 105 ಕೋಟಿ ರೂಗಳಿಗೆ ಏರಿಕೆಯಾಗಿದೆ ಎಂದು ತಿಳಿದುಬಂದಿದೆ.ಈ ಬಗ್ಗೆ ಖ್ಯಾತ ಬಾಕ್ಸ್ ಆಫೀಸ್ ತಜ್ಞ ತರಣ್ ಆದರ್ಶ್ ಮಾಹಿತಿ ನೀಡಿದ್ದು, ಮಹಾವತಾರ ನರಸಿಂಹ ಇದೇ ಜುಲೈ 25 ಶುಕ್ರವಾರದಂದು ಬಿಡುಗಡೆಯಾಗಿತ್ತು. ಅಂದಿನಿಂದ ಇಂದಿನವರೆಗೂ ಚಿತ್ರ ತನ್ನ ಬಾಕ್ಸ್ ಆಫೀಸ್ ಗಳಿಕೆಯಲ್ಲಿ ಅಬ್ಬರ ಆರ್ಭಟ ನಡೆಸುತ್ತಿದ್ದು, ಈಗಾಗಲೇ ಚಿತ್ರ ನೂರು ಕೋಟಿ ಕ್ಲಬ್ ಸೇರಿ, ಹಿಂದಿಯಲ್ಲಿ ಬ್ಲಾಕ್ ಬಸ್ಟರ್ ಪಟ್ಟಿಗೆ ಸೇರ್ಪಡೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.ಯಾವುದೇ ಸ್ಟಾರ್ ಕಲಾವಿದರು ಅಥವಾ ಬಹುದೊಡ್ಡ ಪಾತ್ರವರ್ಗವಿಲ್ಲದೆ ರಿಲೀಸ್ ಆದ ಈ ಚಿತ್ರವು ಇದೀಗ ಭಾರತೀಯ ಚಿತ್ರೋದ್ಯಮದಲ್ಲಿ ಹೊಸ ಮೈಲಿಗಲ್ಲು ತಲುಪಿದೆ. ಅಶ್ವಿನ್ ಕುಮಾರ್ ನಿರ್ದೇಶನದ ಹಾಗೂ ಹೊಂಬಾಳೆ ಫಿಲ್ಮ್ ಪ್ರಸ್ತುತಪಡಿಸಿದ ಕ್ಲೀಮ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಶಿಲ್ಪಾ ಧವನ್, ಕುಶಾಲ್ ದೇಸಾಯಿ, ಚೈತನ್ಯ ದೇಸಾಯಿ ನಿರ್ಮಿಸಿದ ಈ ಚಿತ್ರ ಬಿಡುಗಡೆಗೊಂಡು ಇಂದಿಗೆ 10 ದಿನಗಳನ್ನು ಪೂರೈಸಿದೆ.

ಭಾರತದ ಮೊಟ್ಟ ಮೊದಲ ಅನಿಮೇಷನ್ ಚಿತ್ರ

ಕೇವಲ 6 ಕೋಟಿ ಬಜೆಟ್‌ನಲ್ಲಿ ನಿರ್ಮಿಸಲಾದ ಮಹಾವತಾರ ನರಸಿಂಹ, ಇಲ್ಲಿಯವರೆಗೆ ಜಾಗತಿಕವಾಗಿ 105 ಕೋಟಿ ರೂ. ಗಳಿಕೆಯನ್ನು ಕಂಡಿದೆ. ಆ ಮೂಲಕ 100 ಕೋಟಿ ರೂ. ಗಳಿಸಿದ ಮೊದಲ ಭಾರತೀಯ ಅನಿಮೇಷನ್ ಚಿತ್ರವಾಗಿ ಹೊಸ ದಾಖಲೆಯನ್ನು ಸೃಷ್ಟಿಸಿದೆ. ಈ ಕಲೆಕ್ಷನ್‌ಗಳು ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ.

ಹಿಂದಿಯಲ್ಲಿ ಬ್ಲಾಕ್ ಬಸ್ಟರ್‌ಇನ್ನು ಮಹಾವತಾರ ನರಸಿಂಹ ಹಿಂದಿ ಆವೃತ್ತಿ ಬ್ಲಾಕ್‌ಬಸ್ಟರ್ ಪಟ್ಟಿಗೆ ಸೇರಿದ್ದು, ಈ ಚಿತ್ರ ಈಗಾಗಲೇ ಕಾಂತಾರ ದಾಖಲೆಗಳನ್ನು

ಹಿಂದಿಕ್ಕಿದೆ. ವಾಸ್ತವವಾಗಿ ಮಹಾವತಾರ ನರಸಿಂಹ ಚಿತ್ರವು ಕಾಂತಾರ ಚಿತ್ರದ 4-ವಾರಗಳ ಒಟ್ಟು ಗಳಿಕೆ69.75 ಕೋಟಿರೂ ಗಳಿಕೆಯನ್ನು ಕೇವಲ 10 ದಿನಗಳಲ್ಲಿ ಸರಿಗಟ್ಟುವ ಸಾಧ್ಯತೆ ಇದೆ. ಹಿಂದೆ ಬೆಲ್ಟ್ ನಲ್ಲಿ ನರಸಿಂಹ ಚಿತ್ರ ಈವರೆಗೂ 65.64 ಕೋಟಿ ಗಳಿಕೆ ಕಂಡಿದೆ ಎಂದು ತರಣ್ ಆದರ್ಶ್ ಮಾಹಿತಿ ನೀಡಿದ್ದಾರೆ. ಮಾತ್ರವಲ್ಲದೇ ಮಹಾವತಾರನರಸಿಂಹ ಚಿತ್ರ ಹಿಂದಿಯ ಸೈಯಾರಾ ಮತ್ತು ಹೊಸ ಬಿಡುಗಡೆ ಚಿತ್ರಗಳಾದ ಖಔಖ2 ಮತ್ತು ಧಡಕ್2 ಸೇರಿದಂತೆ ಎಲ್ಲಾ ಚಿತ್ರಗಳ ಗಳಿಕೆ ಮೇಲೆ ಪರಿಣಾಮ ಬೀರಿದೆ. ಮಹಾವತಾರನರಸಿಂಹ 2ನೇ ವಾರಾಂತ್ಯದ ಶುಕ್ರವಾರ 5.30 ಕೋಟಿ, ಶನಿವಾರ 11.25 ಕೋಟಿ, ಭಾನುವಾರ 16.27 ಕೋಟಿ ಗಳಿಕೆಯೊಂದಿಗೆ ತನ್ನ ಒಟ್ಟಾರೆ ಗಳಿಕೆಯನ್ನು ಒಟ್ಟು 65.64 ಕೋಟಿ ರೂಗೆ ಏರಿಕೆ ಮಾಡಿಕೊಂಡಿದೆ.

# ಕಂದೀಲು' ಸೇರಿ ಕನ್ನಡದ ಎರಡು ಚಿತ್ರಕ್ಕೆ ಪ್ರಶಸ್ತಿ

**71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳಲ್ಲಿ ಪ್ರಾದೇಶಿಕ ಚಿತ್ರ ವಿಭಾಗಗಳಲ್ಲಿ ಕನ್ನಡ ಸೇರಿದಂತೆ ಒಟ್ಟು 13 ಪ್ರಾದೇಶಿಕ ಭಾಷೆಗಳ 13 ಸಿನಿಮಾಗಳಿಗೆ ರಾಷ್ಟ್ರಪ್ರಶಸ್ತಿ ಘೋಷಿಸಲಾಗಿದೆ.**

ಕೊಡಗು ಜಿಲ್ಲೆ ಮಡಿಕೇರಿಯ ಯಶೋದ ಪ್ರಕಾಶ್ ಕೊಟ್ಟುಕತ್ತೀರ ಅವರು ನಿರ್ಮಿಸಿ, ನಿರ್ದೇಶಿಸಿರುವ 'ಕಂದೀಲು' ಚಿತ್ರವು (**Kandeelu kannada film**) ಫೀಚರ್ ಫಿಲ್ಮ್ ವಿಭಾಗದಲ್ಲಿ ಅತ್ಯುತ್ತಮ ಕನ್ನಡ ಸಿನಿಮಾ ಪ್ರಶಸ್ತಿ ಗೆದ್ದಿದೆ.

ಇನ್ನು ಬೆಸ್ಟ್ ಸ್ಕ್ರಿಪ್ಟ್ (ನಾನ್ ಫೀಚರ್ ಫಿಲ್ಮ್) ವಿಭಾಗದಲ್ಲಿ ಮೈಸೂರಿನ ಚಿದಾನಂದ ನಾಯಕ್ ಅವರ ನಿರ್ದೇಶನದ ಕಿರುಚಿತ್ರ 'Sunflowers Were the First Ones to Know' ಪ್ರಶಸ್ತಿಗೆ ಆಯ್ಕೆಯಾಗಿದೆ.



'ಕಂದೀಲು' ಸಿನಿಮಾವನ್ನು ಕೆ ಯಶೋಧಾ ಪ್ರಕಾಶ್ ನಿರ್ದೇಶನ ಮಾಡಿದ್ದಾರೆ. ಸ್ವಸ್ತಿಕ್ ಎಂಟರ್ಟೈನ್ ಮೆಂಟ್ ಅವರು ಸಿನಿಮಾ ನಿರ್ಮಾಣ ಮಾಡಿದ್ದಾರೆ.

ಕಂದೀಲು' ಗ್ರಾಮವೊಂದರ ಕಥೆಯಾಗಿದ್ದು, ರೈತ ಹಾಗೂ ಆತನ ಕುಟುಂಬದ ಸುತ್ತ ಸುತ್ತುತ್ತದೆ. ಈ ಸಿನಿಮಾ ಹಲವರ ಜೀವನಾಧಾರಿತ ಕಥೆಯಿಂದ ಪ್ರೇರಣೆ ಪಡೆದಿದೆ.

ಸನ್‌ಫ್ಲವರ್ಸ್ ವೇರ್ ದಿ ಫಸ್ಟ್ ಒನ್ಸ್ ಟು ನೋ' ಬೆಸ್ಟ್

ಚಿದಾನಂದ ಅವರ 'ಸನ್‌ಫ್ಲವರ್ಸ್ ವರ್ ದಿ ಫಸ್ಟ್ ಒನ್ಸ್ ಟು ನೋ' (Sunflowers Were The First Ones to Know) ಪ್ರತಿಷ್ಠಿತ ಕೇನ್ಸ್ ಫಿಲ್ಮ್ ಫೆಸ್ಟಿವಲ್‌ನಲ್ಲಿ 'ಲಾ ಸಿನೆಫ್ ಪ್ರಶಸ್ತಿ' ಮುಡಿಗೇರಿಸಿಕೊಂಡಿತ್ತು. ಇದೀಗ ಪ್ರತಿಷ್ಠಿತ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ದೊರೆತಿದೆ.

## ರಜನಿಕಾಂತ್ ನಟನೆಯ 'ಕೂಲಿ' ಚಿತ್ರದ ಟ್ರೇಲರ್‌ನಲ್ಲಿ ನಟಿ ರಚಿತಾ ರಾಮ್; ತಮಿಳು ಚಿತ್ರರಂಗಕ್ಕೆ ಪದಾರ್ಪಣೆ

ನಟಿ ರಚಿತಾ ರಾಮ್ ಕೂಲಿ ಚಿತ್ರದಲ್ಲಿ ನಟಿಸುತ್ತಿರುವ ಕುರಿತು ಎದ್ದಿದ್ದ ವದಂತಿಗಳಿಗೆ ಕೊನೆಗೂ ಉತ್ತರ ಸಿಕ್ಕಿದೆ. ಬಹು ನಿರೀಕ್ಷಿತ ಚಿತ್ರದ ಟ್ರೇಲರ್ ಬಿಡುಗಡೆಯಾಗಿದ್ದು, ನಟಿ ರಚಿತಾ ಕಾಣಿಸಿಕೊಂಡಿದ್ದಾರೆ.

ಕೂಲಿ ಚಿತ್ರವು ರಚಿತಾ ಅವರ ಚೊಚ್ಚಲ ತಮಿಳು ಚಿತ್ರವಾಗಿದ್ದು, ರಜನಿಕಾಂತ್ ನಟನೆಯ ಮತ್ತು ಲೋಕೇಶ್ ಕನಕರಾಜ್ ನಿರ್ದೇಶನದ ಮೆಗಾ ಪ್ಯಾನ್-ಇಂಡಿಯಾ ಚಿತ್ರದಲ್ಲಿ ರಚಿತಾ ಕಾಣಿಸಿಕೊಂಡಿದ್ದಾರೆ. ಚಿತ್ರದಲ್ಲಿ ಕನ್ನಡದ ನಟ ಉಪೇಂದ್ರ, ಅಮೀರ್ ಖಾನ್, ಸತ್ಯರಾಜ್, ನಾಗಾರ್ಜುನ ಮತ್ತು ಶ್ರುತಿ ಹಾಸನ್ ಇದ್ದಾರೆ.

ಕನ್ನಡ ಚಿತ್ರರಂಗದಲ್ಲಿ 12 ವರ್ಷಗಳನ್ನು ಪೂರೈಸಿದ್ದು, ಈ ಹಿಂದೆ ರಚಿತಾ ಕಲ್ಯಾಣ್ ದೇವ್ ನಟನೆಯ ಸೂಪರ್ ಮಚ್ಚಿ (2022) ಮೂಲಕ ತೆಲುಗು ಚಿತ್ರರಂಗ ಪ್ರವೇಶಿಸಿದ್ದರು. ಆ ಚಿತ್ರ ಬಾಕ್ಸ್ ಆಫೀಸ್‌ನಲ್ಲಿ ಯಶಸ್ಸು ಗಳಿಸದಿದ್ದರೂ ಕೂಡ, ನಟ ತಮ್ಮ ನಟನೆಗೆ ಪ್ರಶಂಸೆ ಗಳಿಸಿದ್ದರು. ಕೂಲಿ ಚಿತ್ರವು ಸಂಪೂರ್ಣವಾಗಿ ವಿಭಿನ್ನ ಚಿತ್ರವಾಗಿದ್ದು, 400 ಕೋಟಿ ಬಜೆಟ್‌ನಲ್ಲಿ ನಿರ್ಮಿಸಲಾಗಿದೆ ಎಂದು ವರದಿಯಾಗಿದೆ.

ಕೂಲಿ ಚಿತ್ರದಲ್ಲಿ ರಚಿತಾ ನೆಗೆಟಿವ್



ಶೇಡ್ ಇರುವ ಪಾತ್ರವನ್ನು ನಿರ್ವಹಿಸಲಿದ್ದಾರೆ ಎಂಬ ವದಂತಿಗಳು ಹರಡಿದ್ದವು. ಆದರೆ, ಟ್ರೇಲರ್ ಅವರ ಪಾತ್ರದ ಬಗ್ಗೆ ಏನನ್ನೂ ಬಹಿರಂಗಪಡಿಸಿಲ್ಲ ಮತ್ತು ಅವರ ಹೆಸರು ಮುಖ್ಯ ಕ್ರೆಡಿಟ್‌ಗಳಲ್ಲಿಯೂ ಕಾಣಿಸಿಕೊಂಡಿಲ್ಲ. ಅವರು ಚಿತ್ರದ ಪ್ರಚಾರಗಳಿಗೂ ಗೈರಾಗಿದ್ದರು. ಇದು ಅವರ ಪಾತ್ರಕ್ಕೆ ಮತ್ತಷ್ಟು ನಿಗೂಢತೆಯನ್ನು ಸೇರಿಸಿದೆ. ಆಗಸ್ಟ್ 14 ರಂದು ಚಿತ್ರ ತೆರೆಗೆ ಬರಲಿದ್ದು, ಅಲ್ಲಿಯವರೆಗೂ ಕಾಯಲೇಬೇಕಾಗಿದೆ.

ಸನ್ ಪಿಕ್ಚರ್ಸ್ ನಿರ್ಮಿಸಿರುವ ಕೂಲಿ ಚಿತ್ರಕ್ಕೆ ಅನಿರುದ್ಧ್ ರವಿಚಂದರ್ ಸಂಗೀತ ಮತ್ತು ಗಿರೀಶ್ ಗಂಗಾಧರನ್ ಛಾಯಾಗ್ರಹಣವಿದೆ.

ರಚಿತಾ ಸದ್ಯ ಮಹೇಶ್ ಕುಮಾರ್ ನಿರ್ದೇಶನದ ಸತೀಶ್ ನೀನಾಸಂ ನಟಿಸಿರುವ ಅಯೋಗ್ಯ 2 ಚಿತ್ರದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ಜಡೇಶಾ ಕೆ ಹಂಪಿ ನಿರ್ದೇಶನದ ವಿಜಯ್ ಕುಮಾರ್ ಜೊತೆಗೆ ಲ್ಯಾಂಡ್‌ಲಾರ್ಡ್ ಚಿತ್ರದಲ್ಲೂ ನಟಿಸಿದ್ದಾರೆ.

## ಮಂಸೋರೆ ನಿರ್ದೇಶನದ 'ದೂರ ತೀರ ಯಾನ'ದಲ್ಲಿ ಮತ್ತೆ ಗೌರಿಯಾಗಿ ಶ್ರುತಿ ಹರಿಹರನ್ ಎಂಟ್ರಿ!



ಹರಿವು, ನಾತಿಚರಾಮಿ, ಆಕ್ಟ್ 1978 ಮತ್ತು 19.20.21 ಚಿತ್ರಗಳನ್ನು ನಿರ್ದೇಶಿಸಿದ್ದ ಮನ್ಸೋರೆ ಇದೀಗ 'ದೂರ ತೀರ ಯಾನ' ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ದೂರ ತೀರ ಯಾನ ಚಿತ್ರವು ಜುಲೈ 11 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಈ ಚಿತ್ರವು ಎರಡು ಹಿಟ್ ಹಾಡುಗಳೊಂದಿಗೆ ಈಗಾಗಲೇ ಸಂಚಲನ ಮೂಡಿಸಿದೆ. ಚಿತ್ರದಲ್ಲಿ ನಟಿ ಶ್ರುತಿ ಹರಿಹರನ್ ನಟಿಸಿದ್ದು, ಗೌರಿಯಾಗಿ ತೆರೆಮೇಲೆ ಮಿಂಚಲು ಸಿದ್ಧರಾಗಿದ್ದಾರೆ.2018ರಲ್ಲಿ ಮಂಸೋರೆ ನಿರ್ದೇಶಿಸಿದ 'ನಾತಿಚರಾಮಿ' ಚಿತ್ರವನ್ನು ನೋಡಿದ ಪ್ರೇಕ್ಷಕರಿಗೆ ಗೌರಿ ಪಾತ್ರ ಪರಿಚಿತವಾಗಿರುತ್ತದೆ. ಆ ಚಿತ್ರದಲ್ಲಿ ಶ್ರುತಿ ಅವರ ಗೌರಿ ಪಾತ್ರ ವ್ಯಾಪಕ ಮೆಚ್ಚುಗೆ ಗಳಿಸಿತು.'ನಾತಿಚರಾಮಿ' ಚಿತ್ರವು ಐದು ರಾಷ್ಟ್ರ ಪ್ರಶಸ್ತಿಗಳನ್ನು ಪಡೆದುಕೊಂಡಿತು. ವೈಯಕ್ತಿಕ ಮತ್ತು ಸಾಮಾಜಿಕ ವಿಷಯಗಳ ಸೂಕ್ಷ್ಮ ಪರಿಶೋಧನೆಗಾಗಿ ಮೆಚ್ಚುಗೆ ಪಡೆಯಿತು. ಹೊಸ ಚಿತ್ರದಲ್ಲಿ ಗೌರಿ ಪಾತ್ರದ ಉಪಸ್ಥಿತಿಯ ಕುರಿತು ಮಾಹಿತಿಯನ್ನು ಇನ್ನೂ ಮುಚ್ಚಿಡಲಾಗಿದೆ. ಆದರೆ, ಅವರ ಪುನರಾಗಮನವು ಎರಡು ಚಿತ್ರಗಳ ಭಾವನಾತ್ಮಕ ಪ್ರಪಂಚಗಳನ್ನು ಸಂಪರ್ಕಿಸಬಹುದಾದ ವಿಷಯಾಧಾರಿತ ನಿರಂತರತೆಯನ್ನು ಸೂಚಿಸುತ್ತದೆ.

ನಾತಿಚರಾಮಿ ಚಿತ್ರದ ಮೂಲಕ ಛಾಪು ಮೂಡಿಸಿದ್ದ ಗೌರಿ ಪಾತ್ರವು ಪ್ರೇಕ್ಷಕರ ಆಸಕ್ತಿಯನ್ನು ಕೆರಳಿಸಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಯುವ ಸ್ಪಂದನ

## ಮಾನಸಿಕ ಆರೋಗ್ಯಕ್ಕೆ ಸ್ಪಂದನೆ!




- ದೇಶದಲ್ಲೇ ಮೊದಲ ಬಾರಿಗೆ ಯುವಕರ ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ ತೋರುತ್ತಿರುವ ಯೋಜನೆ
- ಪ್ರತಿ ಜಿಲ್ಲಾ ಕ್ರೀಡಾಂಗಣದಲ್ಲಿ ಸಲಹಾ ಕೇಂದ್ರಗಳು
- 120+ ನುರಿತ ಸಲಹೆಗಾರರಿಂದ ಆರೋಗ್ಯ, ಸಂಬಂಧ, ಜೀವನಶೈಲಿ ಮತ್ತು ಸುರಕ್ಷತೆ ಬಗ್ಗೆ ಸಲಹೆ
- ಸುಮಾರು 80 ಲಕ್ಷ ಯುವಕರಿಗೆ ಜಾಗೃತಿ ಮತ್ತು ಮಾರ್ಗದರ್ಶನ
- ನಿಮ್ಹಾನ್ಸ್ ಸಹಯೋಗದೊಂದಿಗೆ ಅನುಷ್ಠಾನ - ರಾಷ್ಟ್ರೀಯ ಮನ್ನಣೆ ಮತ್ತು ಡಿಜಿಟಲ್ ಬೆಂಬಲ ವ್ಯವಸ್ಥೆ ಹೊಂದಿದೆ

ವಿಶ್ವಾಸವುಳ್ಳ ಯುವಕರು
**ಪ್ರಬಲ ಕರ್ನಾಟಕ!**



ಕರ್ನಾಟಕ ನವ ನಿರ್ಮಾಣಕ್ಕೆ
**ಗ್ಯಾರಂಟಿ ಸರ್ಕಾರ...**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಗ್ಗಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು


Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**